ಸಂಪುಟ: 05 ಸಂಚಿಕೆ: 42 ಪುಟಗಳು: 08 ಶನಿವಾರ 26 ಏಪ್ರಿಲ್ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5
ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೊಡ್ಡ ಹೊಡೆತ ಎಂದರೆ ನಿರಂತರವಾಗಿ ಹೊಡೆಯುವ ಪುಟ್ಟ ಹೊಡೆತ, ಆದ್ದರಿಂದ ಪ್ರಯತ್ನಿಸುತ್ತಲೇ ಇರಿ.

## 4,618 ಕೆರೆಗಳ ಒತ್ತುವರಿ ತೆರವು ಸಚಿವ ಪ್ರಿಯಾಂಕ್ ಖರ್ಗೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ವಿವಿಧ ಜಿಲ್ಲಾ ಪಂಚಾಯಿತಿಗಳ ವ್ಯಾಪ್ತಿಯಲ್ಲಿ 9,140 ಕೆರೆಗಳು ಒತ್ತುವರಿಯಾಗಿರುವುದನ್ನು ಗುರುತಿಸಿದ್ದು, ಈ ಪೈಕಿ 4,618 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಿ, ಇಲಾಖೆಯ ವಶಕ್ಕೆ ಪಡೆಯಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ.

## ರೂಪಾ , ರೋಹಿಣಿ ನಡುವೆ ಈಗ 'ಪ್ರಮೋಷನ್' ಸಂಘರ್ಷ

• ಉದಯವಾಹಿನಿ, ಬೆಂಗಳೂರು

ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರ (ಎಡಿಜಿಪಿ) ಹುದ್ದೆಗೆ ಬಡ್ತಿ ನೀಡುವ ಸಂಬಂಧ ಹಿರಿಯ ಪೊಲೀಸ್ ಅಧಿಕಾರಿ ಡಿ. ರೂಪಾ ಮೌದ್ಗಿಲ್ ಹೊಸದಾಗಿ ಸಲ್ಲಿಸುವ ಮನವಿಯನ್ನು ಸರಕಾರ ಎಂಟು ವಾರಗಳಲ್ಲಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಹೈಕೋರ್ಟ್ ಆದೇಶಿಸಿದೆ. ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಹೂಡಿರುವ ಕ್ರಿಮಿನಲ್ ಮಾನಹಾನಿ ಪ್ರಕರಣವು ಖಾಸಗಿ ದಾವೆಯಾಗಿದ್ದು, ಅದನ್ನು ಗಣನೆಗೆ ತೆಗೆದುಕೊಳ್ಳದೇ ನ್ಯಾಯಯುತವಾಗಿ ತನಗೆ ದೊರೆಯಬೇಕಾದ ಬಡ್ತಿ ನೀಡಲು ರಾಜ್ಯ ಸಿಬ್ಬಂದಿ ಮತ್ತು ತರಬೇತಿ ಇಲಾಖೆಗೆ (ಡಿಒಪಿಟಿ) ನಿರ್ದೇಶನ ನೀಡಬೇಕೆಂದು ಕೋರಿ ರೂಪಾ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ವಾದ-ಪ್ರತಿವಾದ ಆಲಿಸಿದ ಬಳಿಕ ನ್ಯಾಯಪೀಠ, ಐಎಎಸ್ ಅಧಿಕಾರಿ ರೋಹಿಣಿ ಸಿಂಧೂರಿ ಸಲ್ಲಿಸಿರುವ ಮಧ್ಯಪ್ರವೇಶ ಕೋರಿರುವ ಅರ್ಜಿಯು ಸೂಕ್ತವಾಗಿಲ್ಲ. ಅವರು ಅಗತ್ಯ ಪಕ್ಷಕಾರರಾಗಿಲ್ಲ. ರೂಪಾ ಹೊಸದಾಗಿ ಡಿಒಪಿಟಿಗೆ ಮನವಿ ಸಲ್ಲಿಸಬೇಕು. ಮನವಿ ಸಂಬಂಧ ಸಕ್ಷಮ ಪ್ರಾಧಿಕಾರವು ಎಂಟು ವಾರಗಳಲ್ಲಿ ನಿರ್ಧಾರ ಕೈಗೊಳ್ಳಬೇಕು, ಎಂದು ಆದೇಶಿಸಿ ಅರ್ಜಿಯನ್ನು ಇತ್ಯರ್ಥಪಡಿಸಿತು. ರೋಹಿಣಿ ಸಿಂಧೂರಿ ಪರ ವಾದಿಸಿದ ಹಿರಿಯ ನ್ಯಾಯವಾದಿ ಕೆ.ಎನ್. ಫಣೀಂದ್ರ, ರೂಪಾ ವಿರುದ್ಧ ಹೂಡಿರುವ ಕ್ರಿಮಿನಲ್ ಮಾನಹಾನಿ ಪ್ರಕರಣದಲ್ಲಿ ರೋಹಿಣಿ ದೂರುದಾರರಾಗಿದ್ದಾರೆ. ಹಾಗಾಗಿ, ಪ್ರಕರಣದಲ್ಲಿ ಮಧ್ಯಪ್ರವೇಶಿಸುವಂತೆ ಕೋರಿ ಅರ್ಜಿ ಸಲ್ಲಿಸಿದ್ದೇವೆ. ಬಡ್ತಿ ವಿಚಾರವು ಡಿಒಪಿಟಿ ನಿಯಮದ ಪ್ರಕಾರ ಮುಚ್ಚಿದ ಲಕೋಟೆಯ ಪ್ರಕ್ರಿಯೆಯಾಗಿದೆ, ಎಂದರು.

## ಸುಪ್ರೀಂ ಗೆ ಅಫಿಡವಿಟ್ ಸಲ್ಲಿಕೆ ಅರ್ಜಿ ವಜಾಗೊಳಿಸಲು ಮನವಿ

• ಉದಯವಾಹಿನಿ, ನವದೆಹಲಿ




ವಕ್ಫ್ ತಿದ್ದುಪಡಿ ಕಾಯ್ದೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಕುರಿತು ಕೇಂದ್ರ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತನ್ನ ಉತ್ತರ ನೀಡಿದೆ. ಕಳೆದ 100 ವರ್ಷಗಳಿಂದ ವಕ್ಫ್ ಅನ್ನು ಬಳಕೆದಾರರ ನೋಂದಣಿ ನಂತರವೇ ಗುರುತಿಸಲಾಗುತ್ತಿದೆಯೇ ಹೊರತು ಮೌಖಿಕವಾಗಿ ಅಲ್ಲ. ಹೀಗಾಗಿ ತಿದ್ದುಪಡಿ ಅಗತ್ಯವಾಗಿತ್ತು ಎಂದು ಹೇಳಿದೆ. ವಕ್ಫ್ ಕೌನ್ಸಿಲ್ ಮತ್ತು ವಕ್ಫ್ ಮಂಡಳಿಯಲ್ಲಿರುವ 22 ಸದಸ್ಯರಲ್ಲಿ ಗರಿಷ್ಠ ಇಬ್ಬರು ಮುಸ್ಲಿಮೇತರರಾಗಿರಬೇಕು ಎಂದು ಕೇಂದ್ರ ಸರ್ಕಾರ ಹೇಳಿದೆ. ಇದು ವಕ್ಫ್ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದಿಲ್ಲ. ಸರ್ಕಾರಿ ಭೂಮಿಯನ್ನು ಉದ್ದೇಶಪೂರ್ವಕವಾಗಿ ಅಥವಾ ತಪ್ಪಾಗಿ ವಕ್ಫ್ ಆಸ್ತಿ ಎಂದು ಗುರುತಿಸುವುದನ್ನು ತಡೆಯುವುದು, ಕಂದಾಯ ದಾಖಲೆಗಳನ್ನು ಸರಿಪಡಿಸುವ ಉದ್ದೇಶವಾಗಿದೆ. ಸರ್ಕಾರಿ ಭೂಮಿಯನ್ನು ಯಾವುದೇ ಧಾರ್ಮಿಕ ಸಮುದಾಯಕ್ಕೆ ಸೇರಿದ ಭೂಮಿಯೆಂದು ಪರಿಗಣಿಸಲಾಗುವುದಿಲ್ಲ ಎಂದು ಕೇಂದ್ರ ಹೇಳಿದೆ. ಈ ಕಾಯ್ದೆಯ ತಿದ್ದುಪಡಿಗಳು ಕೇವಲ ನಿಯಂತ್ರಕ ಸ್ವರೂಪದ್ದಾಗಿವೆ. ಇವು ಯಾವುದೇ ಧಾರ್ಮಿಕ ಹಕ್ಕುಗಳಿಗೆ ಧಕ್ಕೆ ತರಲ್ಲ, ಹಾಗಾಗಿ ವಕ್ಫ್ ವಿರುದ್ಧ ಸಲ್ಲಿಸಲಾಗಿರುವ ಅರ್ಜಿಗಳನ್ನು ವಜಾ ಮಾಡಿ ಎಂದು ಕೇಂದ್ರ ಮನವಿ ಮಾಡಿದೆ.

## ನಮ್ಮ ಮೆಟ್ರೋ: ಭಾನುವಾರ ಬೆಳಿಗ್ಗೆ 3.30 ಕ್ಕೆ ರೈಲು ಸಂಚಾರ ಆರಂಭ

• ಉದಯವಾಹಿನಿ, ಬೆಂಗಳೂರು

ನಮ್ಮ ಮೆಟ್ರೋ ಏಪ್ರಿಲ್ 27 ರಂದು ಭಾನುವಾರ ಬೆಳಗಿನ ಜಾವ 3.30 ಕ್ಕೆ ರೈಲು ಸೇವೆಯನ್ನು ಆರಂಭಿಸಲಿದೆ. ಟಿಸಿಎಸ್ ವರ್ಲ್ಡ್ 10 ಕೆ – 2025 ಮ್ಯಾರಥಾನ್ ಹಿನ್ನೆಲೆ ಸಮಯ ಪರಿಷ್ಕರಣೆ ಮಾಡಲಾಗುತ್ತಿದೆ. ಈ ಬಗ್ಗೆ ಬಿಎಂಆರ್‌ಸಿಎಲ್ ಮಾಹಿತಿ ನೀಡಿದ್ದು, ಟಿಸಿಎಸ್ ವರ್ಲ್ಡ್ 10ಕೆ – 2025 ಮ್ಯಾರಥಾನ್ 17ನೇ ಆವೃತ್ತಿಯಲ್ಲಿ ಸಾರ್ವಜನಿಕರಿಗೆ ಭಾಗವಹಿಸಲು ಅನುಕೂಲವಾಗುವಂತೆ, ಬಿಎಂಆರ್‌ಸಿಎಲ್ ದಿನಾಂಕ ಏಪ್ರಿಲ್ 27 ಭಾನುವಾರ ಬೆಳಿಗ್ಗೆ 3:30ಕ್ಕೆ ಮೆಟ್ರೋ ರೈಲು ಸೇವೆಯನ್ನು ಪ್ರಾರಂಭವಾಗಲಿದೆ. ಇದು ಸಾಮಾನ್ಯ ಸಮಯಕ್ಕಿಂತ ಮೂರುವರೆ ಗಂಟೆಗಳ ಮುಂಚೆಯೇ ಪ್ರಾರಂಭವಾಗುತ್ತದೆ ಎಂದು ತಿಳಿಸಿದೆ.
ಈ ವಿಸ್ತ್ರತ ಅವಧಿಯಲ್ಲಿ ನಾಲ್ಕು ಮೆಟ್ರೋ ಟರ್ಮಿನಲ್‌ಗಳು ಮತ್ತು ನಾಡಪ್ರಭು ಕೆಂಪೇಗೌಡ ನಿಲ್ದಾಣ ಮೆಜೆಸ್ಟಿಕ್ ನಿಲ್ದಾಣದಿಂದ ರೈಲುಗಳು 12 ನಿಮಿಷಗಳ ಆವರ್ತನದಲ್ಲಿ ಚಲಿಸುತ್ತವೆ.
ಇದೊಂದು ಸುಗಮ ಸಾರಿಗೆಯಾಗಿದ್ದು ಸಾರ್ವಜನಿಕರಿಗೆ ಸೇವೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ. ವರ್ಲ್ಡ್ ಪ್ರೀಮಿಯರ್ 10ಏ ಓಟದಲ್ಲಿ ಭಾಗವಹಿಸಲು ಮೇಲಿನ ಸೌಲಭ್ಯವನ್ನು ಬಳಸಿಕೊಳ್ಳುವಂತೆ ಬಿಎಂಆರ್‌ಸಿಎಲ್ ಮನವಿ ಮಾಡಿದೆ.

■ ಉಗ್ರರ ದಾಳಿಗೆ ಪ್ರತಿಕಾರ ಶುರು ■ ಪಹಲ್ಗಾಮ್ ಪೈಶಾಚಿಕ ದಾಳಿ ■ ಇಬ್ಬರು ಎಲ್‌ಇಟಿ ಉಗ್ರರ ಮನೆಗಳು ನೆಲಸಮ ಭಾರತಕ್ಕೆ ಬಂದಿಳಿದ ಇಸ್ರೇಲ್, ಅಮೇರಿಕದ ಯುದ್ಧ ವಿಮಾನಗಳು



**ಗುಂಡಿನ ಚಕಮಕಿ**

1 ಪಹಲ್ಗಾಮ್ ದಾಳಿಯ ಪ್ರಮುಖ ಆರೋಪಿಗಳ ಮನೆಗಳನ್ನು ಸ್ಫೋಟಿಸಿ ಧ್ವಂಸ ಮಾಡಿದ ಭಾರತ ಸರ್ಕಾರ

2 ಆದಿಲ್ ಹುಸೇನ್ ಥೋಕರ್ ಮತ್ತು ಆಸಿಫ್ ಶೇಖ್ ಅವರ ಮನೆಗಳನ್ನು ಸ್ಫೋಟಿಸಿ ಧ್ವಂಸ

3 ಪಹಲ್ಗಾಮ್ ದಾಳಿಯ ಆರೋಪಿಗಳನ್ನು ಭೂಮಿಯ ಯಾವುದೇ ಮೂಲೆಯಲ್ಲಿದ್ದರೂ ಬಿಡಲ್ಲ: ಮೋದಿ

# ಮಹಾಭಾರತ ಶುರು

## ಪಾಕ್‌ಗೆ ಪುಕ ಪುಕ

**ಉಗ್ರರ ಮನೆಗಳಿಗೆ ಬೆಂಕಿ**

•ಉದಯವಾಹಿನಿ, ಶ್ರೀನಗರ

ಪಹಲ್ಗಾಮ್ ದಾಳಿಯಲ್ಲಿ ಸ್ಥಳೀಯ ಕುದುರೆ ಸವಾರ ಸೇರಿದಂತೆ 26 ಪ್ರವಾಸಿಗರನ್ನು ಉಗ್ರರು ಹತ್ಯೆ ಮಾಡಿದ ಬಳಿಕ ಮಹತ್ವದ ಬೆಳವಣಿಗೆಯಲ್ಲಿ, ದಕ್ಷಿಣ ಕಾಶ್ಮೀರದ ಟ್ರಾಲ್ ಮತ್ತು ಬಿಜ್‌ಬೆರಾ ಪ್ರದೇಶದಲ್ಲಿನ ಇಬ್ಬರು ಲಷ್ಕರ್ -ಎ-ತೋಯ್ಬಾ ಭಯೋತ್ಪಾದಕರ ಮನೆಗಳನ್ನು ಅಧಿಕಾರಿಗಳು ಶುಕ್ರವಾರ ನೆಲಸಮ ಮಾಡಿದ್ದಾರೆ. ಬೈಸರನ್ ಪಹಲ್ಗಾಮ್ ದಾಳಿಯಲ್ಲಿ ಪ್ರಮುಖ ಪಾತ್ರವಿರುವ ಆರೋಪದ ಹಿನ್ನೆಲೆಯಲ್ಲಿ ಪುಲ್ವಾಮಾ ಜಿಲ್ಲೆಯ ಟ್ರಾಲ್‌ನಲ್ಲಿರುವ ಆಸಿಫ್ ಶೇಖ್ ಮತ್ತು ಅನಂತ್‌ನಾಗ್ ಜಿಲ್ಲೆಯ ಬಿಜ್‌ಬೆರಾದಲ್ಲಿರುವ ಆದಿಲ್ ಥೋಕರ್ ಅವರ ಮನೆಗಳನ್ನು ಸ್ಫೋಟಿಸಿ, ನೆಲಸಮ ಮಾಡಲಾಗಿದೆ ಎಂದು ಅಧಿಕೃತ ಮೂಲಗಳು ತಿಳಿಸಿವೆ. ಮಂಗಳವಾರ ಪಹಲ್ಗಾಮ್‌ನ ಬೈಸರನ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯಲ್ಲಿ ಪಹಲ್ಗಾಮ್‌ನ ಸ್ಥಳೀಯ, ನೇಪಾಳದ ಒಬ್ಬರು ಮತ್ತು ದೇಶದ ವಿವಿಧ ರಾಜ್ಯಗಳ ಪ್ರವಾಸಿಗರು ಸೇರಿದಂತೆ 26 ಜನರು ಪ್ರಾಣ ಕಳೆದುಕೊಂಡಿದ್ದರು. ಜಮ್ಮು ಮತ್ತು ಕಾಶ್ಮೀರದ ಅನಂತ್‌ನಾಗ್ ಜಿಲ್ಲೆಯ ಬಿಜ್‌ಬೆಹರಾ ಬ್ಲಾಕ್‌ನಲ್ಲಿರುವ ಗುರಿ ಗ್ರಾಮದ ನಿವಾಸಿ ಆದಿಲ್ ಗುರಿ ಎಂಬಾತನೂ ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿರುವ ಶಂಕೆ ಇದೆ. ಆತನನ್ನು ಮೋಸ್ಟ್ ವಾಂಟೆಡ್ ಎಂದು ಗುರುತಿಸಲಾಗಿದ್ದು, ಆತನ ಬಗ್ಗೆ ನಿರ್ದಿಷ್ಟ ಮಾಹಿತಿ ನೀಡಿದವರಿಗೆ 20 ಲಕ್ಷ ರೂ. ಬಹುಮಾನ ನೀಡುವುದಾಗಿ ಅನಂತನಾಗ್ ಪೊಲೀಸರು ಘೋಷಿಸಿದ್ದಾರೆ. ಈ ದಾಳಿ ಹಿನ್ನೆಲೆಯಲ್ಲಿ ಇಬ್ಬರು ಪಾಕಿಸ್ತಾನಿ ಪ್ರಜೆಗಳನ್ನು ಸಹ ಮೋಸ್ಟ್ ವಾಂಟೆಡ್ ಎಂದು ಘೋಷಿಸಲಾಗಿದೆ. ಆದಿಲ್ 2018ರಲ್ಲಿ ಕಾನೂನುಬದ್ಧವಾಗಿ ಪಾಕಿಸ್ತಾನಕ್ಕೆ ಪ್ರಯಾಣ ಬೆಳೆಸಿದ್ದ. ಅಲ್ಲಿಂದ ಕಳೆದ ವರ್ಷ ಜಮ್ಮು ಮತ್ತು ಕಾಶ್ಮೀರಕ್ಕೆ ಮರಳುವ ಮುನ್ನ ಭಯೋತ್ಪಾದನಾ ತರಬೇತಿ ಪಡೆದಿದ್ದಾನೆ ಎಂದು ವರದಿಯಾಗಿದೆ.

**ಭಾರೀ ಗುಂಡಿನ ಚಕಮಕಿ:** ಪಹಲ್ಗಾಮ್‌ನಲ್ಲಿ ಗುಂಡಿನ ಸುರಿಮಳೆ ಸುರಿಸಿ ಹಿಂದೂಗಳ ಹತ್ಯೆಗೈದ ಉಗ್ರರಿಗೆ ಪಾಕಿಸ್ತಾನದಲ್ಲಿ ತರಬೇತಿ ನೀಡಲಾಗಿದೆ ಎಂಬ ಮಾಹಿತಿ ಪ್ರಾಥಮಿಕ ತನಿಖೆಯಲ್ಲಿ ಹೊರಬಿದ್ದಿದೆ. 5 ರಿಂದ 7 ಭಯೋತ್ಪಾದಕರು ಕೃತ್ಯ ಎಸಗಿರುವ ಬಗ್ಗೆ ಮಾಹಿತಿ ಸಿಕ್ಕಿದೆ. ಈ ಪೈಕಿ ಇಬ್ಬರು ಸ್ಥಳೀಯ ಉಗ್ರರೇ ಆಗಿದ್ದಾರೆ ಎಂಬ ಸುಳಿವು ಸಿಕ್ಕಿದೆ. ಈಗಾಗಲೇ ಇಬ್ಬರು ಉಗ್ರರ ಮನೆಗಳನ್ನು ಧ್ವಂಸ ಮಾಡಿರುವ ಸೇನೆ ಭಯೋತ್ಪಾದಕರ ಜಾಲ ಭೇದಿಸಲು ಕಾರ್ಯಾಚರಣೆ ಶುರು ಮಾಡಿದೆ. ಅಮಾಯಕ 26 ಮಂದಿ ಹಿಂದೂಗಳ ಕಗ್ಗೊಲೆ ಮಾಡಿದ ಕಡುಪಾಪಿಗಳ ಹುಟ್ಟಡಗಿಸಲು ಭಾರತೀಯ ಸೇನೆ ಶಪಥ ಮಾಡಿದ್ದು, ಜಮ್ಮು ಮತ್ತು ಕಾಶ್ಮೀರದ ಬಂಡಿಪೋರಾ ಜಿಲ್ಲೆಯಲ್ಲಿ ಎನ್‌ಕೌಂಟರ್ ಆರಂಭಿಸಲಾಗಿದೆ. ಅಡಗಿ ಕುಳಿತಿರುವ ಉಗ್ರರು ಹಾಗೂ ಭಾರತೀಯ ಸೇನಾಪಡೆಗಳ ನಡುವೆ ಭಾರೀ ಗುಂಡಿನ ಚಕಮಕಿ ನಡೆದಿದೆ. ಈ ಕಾರ್ಯಾಚರಣೆ ವೇಳೆ ಲಷ್ಕರ್-ಎ ತೊಯ್ಬಾ ಸಂಘಟನೆಯ ಕಮಾಂಡರ್ ಅಲ್ತಾಫ ಲಲ್ಲಿಯನ್ನು ಫಿನಿಶ್ ಮಾಡಲಾಗಿದೆ.

**ಸೇನಾ ಮುಖ್ಯಸ್ಥರ ಭೇಟಿ**

ಉಗ್ರರ ದಾಳಿಯ ಸ್ಥಳಕ್ಕೆ ಸೇನಾ ಮುಖ್ಯಸ್ಥ ಉಪೇಂದ್ರ ದ್ವಿವೇದಿ ಭೇಟಿ ನೀಡಿ ಅಲ್ಲಿನ ಪರಿಸ್ಥಿತಿಯ ಬಗ್ಗೆ ಪರಾಮರ್ಶೆ ನಡೆಸಿದರು. ಭಯೋತ್ಪಾದಕರು ಹಿಂದೂಗಳ ಮಾರಣಹೋಮ ನಡೆಸಿದ ಬೆನ್ನಲ್ಲೆ ಸೇನಾ ಮುಖ್ಯಸ್ಥರು ಭೇಟಿ ನೀಡಿ ಸಮಗ್ರ ಭದ್ರತಾ ವ್ಯವಸ್ಥೆಯನ್ನು ಪರಾಮರ್ಶೆ ನಡೆಸಿದರು. ಜಮ್ಮು-ಕಾಶ್ಮೀರದ ಉನ್ನತ ಸೇನಾಧಿಕಾರಿಗಳು ಸೇನಾ ಮುಖ್ಯಸ್ಥರಿಗೆ ಉಗ್ರರ ದಾಳಿ ನಡೆಸಿದ ಬಗ್ಗೆ ಮಾಹಿತಿ ನೀಡಿದರು. ಘಟನೆಯ ನಂತರ ಕೈಗೊಂಡಿರುವ ಭದ್ರತಾ ವ್ಯವಸ್ಥೆಯ ಬಗ್ಗೆಯೂ ವಿವರಿಸಿದರು. ಈ ಮಧ್ಯೆ ವಿಶ್ವಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಅಂಟಾನಿಯೊ ಗುಟೆರಸ್ ಪಹಲ್ಗಾಮ್ ದಾಳಿಯನ್ನು ಕಠಿಣ ಶಬ್ದಗಳಲ್ಲಿ ಖಂಡಿಸಿದ್ದಾರೆ.

ಭಾರತವು ತನ್ನ ಮಿತ್ರ ರಾಷ್ಟ್ರಗಳಾದ ಇಸ್ರೇಲ್ ಮತ್ತು ಅಮೆರಿಕದೊಂದಿಗೆ ಸೇರಿ ಪಾಕಿಸ್ತಾನದ ಮೇಲೆ ಒತ್ತಡ ಹೆಚ್ಚಿಸುತ್ತಿದೆಯೇ ಎಂಬ

**ಭಾರತ ಏಕಾಂಗಿಯಾಗಿ ಹೋರಾಡುತ್ತದೆಯೇ**

ಪ್ರಶ್ನೆಗಳು ಎದ್ದಿವೆ. ಇಸ್ರೇಲ್ ಮತ್ತು ಭಾರತದ ನಡುವೆ ರಕ್ಷಣಾ ಒಪ್ಪಂದಗಳು ಹೆಚ್ಚಾಗುತ್ತಿದ್ದು, ಇದು ಪಾಕಿಸ್ತಾನಕ್ಕೆ ದೊಡ್ಡ ಸವಾಲು ನೀಡಬಹುದು. ಇತ್ತೀಚೆಗೆ, ಸೂರತ್ ವಾಯುನೆಲೆಯಲ್ಲಿ ಇಸ್ರೇಲ್ ಅತ್ಯಾಧುನಿಕ ಯುದ್ಧ ವಿಮಾನ ಬಂದಿಳಿದಿದೆ. ಇದೇ ಸಮಯದಲ್ಲಿ, ಅಮೆರಿಕದ ಯುದ್ಧ ವಿಮಾನವೂ ಸಹ ಸೂರತ್ತೆ ಆಗಮಿಸಿದೆ. ಇದು ಭಾರತ-ಇಸ್ರೇಲ್-ಅಮೆರಿಕದ ನಡುವೆ ಸೈನಿಕ ಸಹಕಾರ ಹೆಚ್ಚುತ್ತಿದೆ ಎಂಬ ಸಂಕೇತವನ್ನು ನೀಡುತ್ತದೆ.

## 2023ರ ಮುಸ್ಲಿಂರ ಹತ್ಯೆ

2023ರಲ್ಲಿ ಮಹಾರಾಷ್ಟ್ರದ ಪಾಲ್ಗರ್ ರೈಲ್ವೆ ನಿಲ್ದಾಣದಲ್ಲಿ ಚೇತನ್ ಸಿಂಗ್ ಎಂಬಾತ ಮೂವರು ಮುಸ್ಲಿಮರನ್ನು ಹತ್ಯೆ ಮಾಡಿದ್ದವನಿಗೆ ಶಿಕ್ಷೆಯಾಗಿದ್ದರೆ ಇಂದು ಕಾಶ್ಮೀರದಲ್ಲಿ ಇಂತಹ ಕೃತ್ಯ ನಡೆಯುತ್ತಿರಲಿಲ್ಲ ಎಂದು ಪೋಸ್ಟ್ ಮಾಡುವ ಮೂಲಕ ಪಹಲ್ಗಾಮ್ ಉಗ್ರ ದಾಳಿಯನ್ನು ಸಮರ್ಥಿಸಿಕೊಂಡಿದ್ದ ವ್ಯಕ್ತಿಯೋರ್ವನನ್ನು ಬಂಧಿಸಲಾಗಿದೆ. ನಿಚ್ಚು ಮಂಗಳೂರು ಎಂಬ ಬಳಕೆದಾರ ಫೇಸ್‌ಬುಕ್‌ನಲ್ಲಿ ಪ್ರಚೋದನಕಾರಿ ಪೋಸ್ಟ್ ಹಾಕಿದ್ದಕ್ಕಾಗಿ ಉಳ್ಳಾಲ ತಾಲ್ಲೂಕಿನ ಉಳ್ಳಾಲತ್ತಿ ನಿವಾಸಿ ಸತೀಶ್ ಕುಮಾರ್ ಎಂಬವರು ನೀಡಿದ ದೂರಿನ ಆಧಾರದ ಮೇಲೆ ಕೊಣಾಜೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಸಾರ್ವಜನಿಕ ಶಾಂತಿಗೆ ಭಂಗ ತರುವ ಉದ್ದೇಶದಿಂದ ಕಾಶ್ಮೀರದಲ್ಲಿ ನಡೆದ ಭಯೋತ್ಪಾದಕ ಘಟನೆಯ ಕುರಿತು ಪ್ರಚೋದನಕಾರಿ ಮತ್ತು ಆಕ್ಷೇಪಾರ್ಹ ಹೇಳಿಕೆಗಳನ್ನು ಪೋಸ್ಟ್‌ನಲ್ಲಿ ಒಳಗೊಂಡಿತ್ತು. ದೂರುದಾರರು ಪೋಸ್ಟ್‌ನ ಸ್ಕ್ರೀನ್‌ಶಾಟ್‌ಗಳನ್ನು ಮತ್ತು ಬಳಕೆದಾರರ ಪ್ರೊಫೈಲ್ ಅನ್ನು ಸಾಕ್ಷ್ಯಕ್ಕಾಗಿ ಸಲ್ಲಿಸಿದ್ದಾರೆ. ಭಾರತೀಯ ನ್ಯಾಯ ಸಂಹಿತಾ, 2023 ರ ಸೆಕ್ಷನ್ 192 ಮತ್ತು 353(1)ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ತನಿಖೆ ಮುಂದುವರೆದಿದೆ.



**ಯುದ್ಧ ಶುರು ಮಾಡಿದ ಭಾರತ!**

ಹೌದು, ಭಾರತ ಇದೀಗ ಅಧಿಕೃತವಾಗಿ ಯುದ್ಧ ಶುರು ಮಾಡಿದೆ. ಪಾಪಿ ಪಾಕಿಸ್ತಾನ ಮೂಲಕ ಭಾರತಕ್ಕೆ ಬಂದು, 26 ಜನ ಭಾರತೀಯರನ್ನ ಕೊಲೆ ಮಾಡಿದ್ದ ಪಾಪಿ ಪಾಕಿಸ್ತಾನದ ಉಗ್ರರ ಬುಡಕ್ಕೆ ಬೆಂಕಿ ಹಚ್ಚಿದೆ ಭಾರತ. ಜಾಗತಿಕ ಮಟ್ಟದಲ್ಲಿ ತನ್ನ ಶಕ್ತಿ ಏನು ಅನ್ನೋದನ್ನ ಶತ್ರು ದೇಶಗಳಿಗೆ ತೋರಿಸಲು ಇದೀಗ ಭಾರತೀಯ ಸೇನೆ ಮುಂದೆ ನುಗ್ಗಿದ್ದು, ಭಾರತೀಯ ಸೇನೆಯ ಯುದ್ಧ ಕಂಡು ಪಾಪಿಗಳ ಎದೆಯಲ್ಲಿ ನಡುಕ ಶುರುವಾಗಿದೆ.

**ಯುದ್ಧಕ್ಕೆ ರಣಕಹಳೆ ಮೊಳಗಿದೆ**

ಭಾರತ ಯುದ್ಧ ಸಾರಿದರೆ ಎದುರಿಗೆ ನಿಲ್ಲುವ ಯಾವುದೇ ದೇಶ ಉಡೀಸ್ ಆಗಿ ಹೋಗುತ್ತದೆ. 26 ಜನ ಭಾರತೀಯರನ್ನ ಗುಂಡು ಹಾರಿಸಿ ಕೊಲೆ ಮಾಡಿದ್ದ ಉಗ್ರರ ಮನೆಗಳನ್ನು ಹುಡುಕಿ ಹುಡುಕಿ ಬೆಂಕಿ ಹಚ್ಚಲಾಗುತ್ತಿದೆ. ಅದೇ ರೀತಿ ಇದೀಗ ಕಾಶ್ಮೀರದಲ್ಲಿ ಇರುವ ಉಗ್ರರ 2 ಮನೆ ಬಾಂಬ್ ಇಟ್ಟು ಬ್ಲಾಸ್ಟ್ ಮಾಡಲಾಗಿದೆ. ಅದರಲ್ಲೂ ಪಾಪಿ ಪಾಕಿಸ್ತಾನದ ಜೊತೆಗೆ ಸೇರಿ ಈ ರೀತಿ ದಾಳಿ ನಡೆಸಿರುವ ಉಗ್ರರನ್ನ ಹುಡುಕಲಾಗುತ್ತಿದ್ದು, ಕಾಶ್ಮೀರದಲ್ಲಿ ಇರುವ ಉಗ್ರರ ಮನೆ ಉಡೀಸ್ ಆಗುತ್ತಿವೆ. ಅದರಲ್ಲೂ ಭಯೋತ್ಪಾದಕರಿಗೆ ಈ ಮೂಲಕ ಖಡಕ್ ವಾರ್ನಿಂಗ್ ಕೂಡ ನೀಡಲಾಗಿದ್ದು, ಈ ಮೂಲಕ ಯುದ್ಧಕ್ಕೆ ರಣಕಹಳೆ ಮೊಳಗಿದೆ. ಇನ್ನೇನು ಪಾಪಿ ಪಾಕಿಸ್ತಾನಕ್ಕೆ ಕೂಡ ನುಗ್ಗಿ ಭಾರತೀಯ ಸೇನೆ ಸರಿಯಾದ ಪಾಠ ಕಲಿಸಲು ಸನ್ನದ್ಧವಾಗಿದೆ.

## ಯುಪಿಯಲ್ಲಿ 1,200 ಪಾಕಿಸ್ತಾನಿ ಪ್ರಜೆಗಳು ಪತ್ತೆ

• ಉದಯವಾಹಿನಿ, ಲಕ್ನೋ

ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯ ಬಳಿಕ ಭಾರತ ಸರ್ಕಾರ ಪಾಕಿಸ್ತಾನದ ವಿರುದ್ಧದ ಕ್ರಮಗಳನ್ನು ಹೆಚ್ಚಿಸಿದೆ. ಹಲವು ಬಲವಾದ ಕ್ರಮಗಳ ಭಾಗವಾಗಿ ಪಾಕಿಸ್ತಾನಿ ಪ್ರಜೆಗಳಿಗೆ ದೇಶ ತೊರೆಯುವಂತೆ ಎಚ್ಚರಿಕೆ ನೀಡಿದೆ. ಹಾಗಾಗಿ ಪಾಕ್ ಪ್ರಜೆಗಳು ವಾಘಾ ಗಡಿಯ ಮೂಲಕ ದೇಶ ತೊರೆಯಲು ಪ್ರಾರಂಭಿಸಿದ್ದಾರೆ.
ಈ ನಡುವೆ ರಾಜ್ಯ ಸರ್ಕಾರಗಳು ಪಾಕ್ ಪ್ರಜೆಗಳನ್ನು ಪತ್ತೆಹಚ್ಚಿ ಗಡೀಪಾರು ಕೆಲಸ ಮಾಡುತ್ತಿವೆ. ಈ ಕಾರ್ಯಾಚರಣೆ ಉತ್ತರ ಪ್ರದೇಶವೊಂದರಲ್ಲೇ ಸುಮಾರು 1000ದಿಂದ 1,200 ಪಾಕ್ ಪ್ರಜೆಗಳು ಪತ್ತೆಯಾಗಿದ್ದಾರೆಂದು ವರದಿಗಳು ತಿಳಿಸಿವೆ. ಉತ್ತರ ಪ್ರದೇಶ ಹಿರಿಯ ಪೊಲೀಸ್ ಅಧಿಕಾರಿಗಳ ಪ್ರಕಾರ, ರಾಜ್ಯದಲ್ಲಿ 1,000 ರಿಂದ 1,200 ಪಾಕಿಸ್ತಾನಿ ಪ್ರಜೆಗಳು ವಾಸಿಸುತ್ತಿದ್ದಾರೆ. ಕೇಂದ್ರ ಸರ್ಕಾರದ ಅಧಿಕೃತ ಗಡೀಪಾರು ಆದೇಶ ಇನ್ನೂ ಬಂದಿಲ್ಲವಾದರೂ, ನಿರ್ದೇಶನ ಹೊರಡಿಸಿದ ತಕ್ಷಣ ವಾಪಸಾತಿ ಪ್ರಕ್ರಿಯೆಯನ್ನು ಪ್ರಾರಂಭಿಸಲು ಸಿದ್ಧತೆಗಳು ನಡೆಯುತ್ತಿವೆ. ಈಗಾಗಲೇ ರಾಜ್ಯದಲ್ಲಿರುವ ಪಾಕಿಸ್ತಾನಿಯರನ್ನ ಗುರುತಿಸುವ ಪ್ರಕ್ರಿಯೆ ಶುರುವಾಗಿದೆ ಎಂದು ಹೇಳಿದ್ದಾರೆ.

**ಗಡೀಪಾರು ಪಕ್ರಿಯೆ ಶುರು**



**ಅಮಿತ್ ಶಾ ಬಿಗ್ ವಾರ್ನಿಂಗ್:** ಉಗ್ರರ ದಾಳಿ ನಡೆದ ಸ್ಥಳಕ್ಕೆ ಭೇಟಿ ನೀಡಿದ ಬಳಿಕ ಕೇಂದ್ರ ಗೃಹ ಸಚಿವ ಅಮಿತ್ ಶಾ, ಯಾವೊಬ್ಬ ಪಾಕಿಸ್ತಾನಿ ಪ್ರಜೆಯೂ ಕೇಂದ್ರ ಸರ್ಕಾರ ನೀಡಿರುವ ಗಡುವನ್ನು ಮೀರಿ ದೇಶದಲ್ಲಿ ಉಳಿಯದಂತೆ ನೋಡಿಕೊಳ್ಳಬೇಕೆಂದು ಎಲ್ಲಾ ರಾಜ್ಯಗಳಿಗೆ ನಿರ್ದೇಶನ ನೀಡಿದ್ದಾರೆ. ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಕರೆ ಮಾಡಿ ಈ ಬಗ್ಗೆ ಅಮಿತ್ ಶಾ ಮಾತನಾಡಿದ್ದಾರೆ. ಎಲ್ಲಾ ರಾಜ್ಯಗಳು ತಮ್ಮ ವ್ಯಾಪ್ತಿಯಲ್ಲಿರುವ ಪಾಕಿಸ್ತಾನಿ ಪ್ರಜೆಗಳನ್ನು ಪತ್ತೆಹಚ್ಚಿ ದೇಶದಿಂದ ವಾಪಸ್ ಕಳುಹಿಸಬೇಕು ಎಂದು ಹೇಳಿದ್ದಾರೆ.

## ನಿಮ್ಮ ಅವಧಿಯಲ್ಲಿ ಹಿಂದೂಗಳಿಗೆ ಅನ್ಯಾಯ ಆಯ್ತು ಅಂತ ಒಪ್ಪಿಕೊಳ್ಳಿ

• ಉದಯವಾಹಿನಿ, ಬೆಂಗಳೂರು

ಪಹಲ್ಗಾಮ್‌ನಲ್ಲಿ ಉಗ್ರರ ದಾಳಿ ನಡೆದಾಗ ಯಾರೊಬ್ಬರು ಭದ್ರತಾ ಸಿಬ್ಬಂದಿ ಇರಲಿಲ್ಲ. ಮಾತಿಗೆ ಮುನ್ನ ನಿಮ್ಮ ವೈಫಲ್ಯ ಮುಚ್ಚಿಕೊಳ್ಳಲು ಹಿಂದೂ-ಮುಸ್ಲಿಂ ಅಂತಾರೆ. ಹಾಗಾದ್ರೆ ನಿಮ್ಮ ಅವಧಿಯಲ್ಲಿ ಹಿಂದೂಗಳಿಗೆ ಅನ್ಯಾಯ ಆಯ್ತು ಅಂತ ಒಪ್ಪಿಕೊಳ್ಳಿ ಅಂತ ಕೇಂದ್ರ ಸರ್ಕಾರದ ವಿರುದ್ಧ ಕಾರ್ಮಿಕ ಸಚಿವ ಸಂತೋಷ್ ಲಾಡ್ ಕಿಡಿ ಕಾರಿದ್ದಾರೆ. ಪಹಲ್ಗಾಮ್ ಘಟನೆ ಬಗ್ಗೆ ಇಡೀ ದೇಶಕ್ಕೆ ಗೊತ್ತಿದೆ. ಪ್ರವಾಸಿಗರಿಗೆ ಆಗಿದ್ದು ಭಯಾನಕ ಘಟನೆ. ರಾಜಕೀಯ ಮಾತನಾಡಬಾರದು ಅಂದುಕೊಂಡಿದ್ದೇವೆ. ಆದರೆ ಕೆಲವಾರು ಪ್ರಶ್ನೆ ನಮ್ಮನ್ನ ಕಾಡುತ್ತಿವೆ. ಇಂತಹ ಘಟನೆಗಳು ನಡೆದಾಗ ಯಾವ ಕೇಂದ್ರ ಸಚಿವರೂ ಪ್ರತಿಕ್ರಿಯೆ ನೀಡಲ್ಲ. ನೇರವಾಗಿ ಬಂದು ಉತ್ತರ ಕೊಟ್ಟಿರೋದು ಬೆರಳೆಣಿಕೆಯಷ್ಟು ಸಚಿವರು ಮಾತ್ರ. ಕೇವಲ ಸ್ಟುಡಿಯೋಗಳಲ್ಲಿ ಪರ ವಿರೋಧ ಚರ್ಚೆಗಳು ಆಗ್ತಿವೆ. ಕೇಂದ್ರ ಸರ್ಕಾರದಲ್ಲಿ ಆದ ವೈಫಲ್ಯದ ಬಗ್ಗೆ ಯಾರೂ ಮಾತನಾಡ್ತಿಲ್ಲ ಎಂದು ಅಸಮಾಧಾನ ಹೊರಹಾಕಿದರು. ಕೇಂದ್ರ ಗೃಹ ಸಚಿವರ ರಾಜೀನಾಮೆ ಯಾರೂ ಕೇಳ್ತಿಲ್ಲ. ಶ್ರೀನಗರದಲ್ಲಿ ಹೆಜ್ಜೆ ಹೆಜ್ಜೆಗೂ ಚೆಕ್‌ಪೋಸ್ಟ್ ಇದೆ. ಒಂದು ಹುಳನೂ ತಪ್ಪಿಸಿಕೊಂಡು ಹೋಗೋಕೆ ಆಗಲ್ಲ. ಗೃಹ ಸಚಿವರನ್ನ ಕೇಳ್ತೇನೆ, ದಾಳಿ ನಡೆದಾಗ ಯಾಕೆ ಒಬ್ಬ ಸೆಕ್ಯೂರಿಟಿನೂ ಇಲ್ಲ ಯಾಕೆ. ಇದರ ಬಗ್ಗೆ ಚರ್ಚೆ ಆಗಬೇಕೇ ವಿನಃ ಬೇರೆಯದ್ದಕ್ಕಲ್ಲ. ಮಾತಿಗೆ ಮುನ್ನ ನಿಮ್ಮ ವೈಫಲ್ಯ ಮುಚ್ಚಿಕೊಳ್ಳಲು ಹಿಂದೂ-ಮುಸ್ಲಿಂ ಅಂತಾರೆ. ಹಾಗಾದ್ರೆ ನಿಮ್ಮ ಅವಧಿಯಲ್ಲಿ ಹಿಂದೂಗಳಿಗೆ ಅನ್ಯಾಯ ಆಯ್ತು ಅಂತ ಒಪ್ಪಿಕೊಳ್ಳಿ ಎಂದು ಕೇಂದ್ರದ ವಿರುದ್ಧ ಸಚಿವರು ಹರಿಹಾಯ್ದರು.



# ಅನಧಿಕೃತ ಬಡಾವಣೆಗಳಲ್ಲಿ ಜಮೀನು ಖರೀದಿಸಿದ್ದರೆ ಎಚ್ಚರ!: ಸಚಿವ

■ ರಾಜ್ಯದಲ್ಲಿ ಅನಧಿಕೃತ ಬಡಾವಣೆಗಳ ಜಮೀನುಗಳನ್ನು ಮುಟ್ಟುಗೋಲು ಹಾಕಲು ಜಿಲ್ಲಾಧಿಕಾರಿಗಳಿಗೆ ಸೂಚನೆ

• ಉದಯವಾಹಿನಿ, ಬೆಂಗಳೂರು

ಅನಧಿಕೃತ ಬಡಾವಣೆ ಮಾಡಿದರೆ ಇನ್ನು ಮುಂದೆ ತಲೆ ಎತ್ತಬಾರದು. ಅನಧಿಕೃತ ಬಡಾವಣೆಗಳಿಗೆ ಕಡಿವಾಣ ಹಾಕಬೇಕು ಎಂದು ಸಿಎಂ ಸಿದ್ದರಾಮಯ್ಯ ಈಗಾಗಲೇ ನಿರ್ದೇಶನ ನೀಡಿದ್ದಾರೆ. ಸುಪ್ರೀಂ ಕೋರ್ಟ್ ಕೂಡಾ ಅನಧಿಕೃತ ಬಡಾವಣೆಗಳ ಕುರಿತಾಗಿ ಛೀಮಾರಿ ಹಾಕಿದೆ. ಹೀಗಾಗಿ ಅಕ್ರಮ ಬಡಾವಣೆಗಳಿಗೆ ಕಡಿವಾಣ ಹಾಕಲು ಈ ತೀರ್ಮಾನ ಕೈಗೊಳ್ಳಲಾಗಿದೆ ಎಂದು ವಿವರಿಸಿದರು.
ಹೊಸದಾಗಿ ಬಡಾವಣೆ ನಿರ್ಮಿಸುತ್ತಿರುವವರು ಅಗತ್ಯ ಮಂಜೂರಾತಿ ಹಾಗೂ ಅನುಮತಿಗಳನ್ನು ಕಡ್ಡಾಯವಾಗಿ ಪಡೆಯಬೇಕು. ಅನಧಿಕೃತವಾಗಿ ಕಂದಾಯ ಭೂಮಿಯಲ್ಲಿ ಬಡಾವಣೆ ರಚಿಸುವುದಕ್ಕೆ ಕಡಿವಾಣ ಹಾಕಲಾಗುವುದು.
ಅಕ್ರಮ ಬಡಾವಣೆ ನಿರ್ಮಿಸುತ್ತಿದ್ದರೆ ಅಂತಹವರ ಜಮೀನನ್ನು ಮುಟ್ಟುಗೋಲು ಹಾಕಲು ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವ ಕೃಷ್ಣ ಬೈರೇಗೌಡ ಮಾಹಿತಿ ನೀಡಿದರು.



**ಜನರು ಸರ್ಕಾರದ ಅನುಕೂಲಗಳಿಂದ ವಂಚಿತ**



**ಜನವಸತಿ ಪ್ರದೇಶಗಳ 2 ಲಕ್ಷ ಕುಟುಂಬಗಳಿಗೆ ಹಕ್ಕುಪತ್ರ!:** ಸುಮಾರು ಹಾಡಿ, ತಾಂಡ ಜನವಸತಿ ಪ್ರದೇಶಗಳು ಕಂದಾಯ ಗ್ರಾಮವಾಗಿಲ್ಲ, ಹೀಗಾಗಿ ಅಲ್ಲಿನ ಜನರು ಸರ್ಕಾರದ ಅನುಕೂಲಗಳಿಂದ ವಂಚಿತರಾಗಿದ್ದಾರೆ. ಈ ನಿಟ್ಟಿನಲ್ಲಿ ಕಾನೂನಿಗೆ ತಿದ್ದುಪಡಿ ತಂದು ಕಂದಾಯ ಗ್ರಾಮದ ಸ್ಥಾನಮಾನ ವಸತಿ ಪ್ರದೇಶಕ್ಕೆ ನೀಡಲಾಗುವುದು. ಅಲ್ಲದೆ, ಅಲ್ಲಿನ ಜನರಿಗೆ ಹಕ್ಕು ಪತ್ರ ಕೊಟ್ಟು ಪರಿಹಾರ ನೀಡಲು, ಕಾನೂನಿನ ಆಸರೆ ಕೊಡಲು ಕಂದಾಯ ಗ್ರಾಮಗಳ ಕೆಲಸ ಮಾಡಲಾಗುತ್ತಿದೆ ಎಂದು ತಿಳಿಸಿದರು. 2016-17 ನಲ್ಲಿ ಕಂದಾಯ ಗ್ರಾಮ ಯೋಜನೆ ಜಾರಿಗೆ ತಂದಿದ್ದೇವೆ. ಐದು ವರ್ಷದಲ್ಲಿ 1 ಲಕ್ಷ ಜನರಿಗೆ ಹಕ್ಕು ಪತ್ರ ನೀಡಲಾಗಿದೆ. ಇದನ್ನು ಆದ್ಯತೆ ಕಾರ್ಯಕ್ರಮವಾಗಿ ಮಾಡಲು 94 ಡಿ ಕೆಳಗಡೆ ಹಕ್ಕು ಪತ್ರ ನೀಡಲು ಯೋಜಿಸಲಾಗಿದೆ. ಈವರೆಗೆ 3,616 ವಸತಿ ಪ್ರದೇಶಗಳನ್ನು ಗುರುತಿಸಲಾಗಿದೆ ಎಂದು ಮಾಹಿತಿಯನ್ನು ನೀಡಿದರು. ಇನ್ನು ಮೇ 20ರೊಳಗೆ 1 ಲಕ್ಷ ಕುಟುಂಬಗಳಿಗೆ ಹಕ್ಕು ಪತ್ರ ನೀಡಲು ಕ್ರಮ ವಹಿಸಲಾಗುವುದು. ವರ್ಷದ ಅಂತ್ಯಕ್ಕೆ ಎರಡು ಲಕ್ಷ ಕುಟುಂಬಕ್ಕೆ ಹಕ್ಕು ಪತ್ರ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

**ರೆಕಾರ್ಡ್ ರೂಂ ಡಿಜಿಟಲೀಕರಣ**

ರೆಕಾರ್ಡ್ ರೂಂ ನಿಂದ ದಾಖಲೆ ಪಡೆಯಲು ಜನರು ಪರದಾಡುತ್ತಿದ್ದಾರೆ. ಅದರಲ್ಲಿ ಕೆಲವರದ್ದು ದಾಖಲೆ ಕಳೆದುಹೋಗುತ್ತಿತ್ತು. ಇದನ್ನು ತಪ್ಪಿಸಲು ಮೂಲ ಕಡತಗಳನ್ನು ಗಣಕೀರಣ ಮಾಡುವ ಭೂ ಸುರಕ್ಷಾ ಯೋಜನೆಯನ್ನು ಜಾರಿಗೆ ತಂದಿದ್ದೇವೆ. ಈಗಾಗಲೇ 31 ತಾಲ್ಲೂಕುಗಳಲ್ಲಿ ಸ್ಕ್ಯಾನಿಂಗ್ ಪೂರ್ಣವಾಗಿದೆ. ಸುಮಾರು 15,28,14,336 ಪುಟಗಳನ್ನು ಸ್ಕ್ಯಾನಿಂಗ್ ಮಾಡಿದ್ದೇವೆ. ಡಿಸೆಂಬರ್ ತಿಂಗಳಲ್ಲಿ ಎಲ್ಲಾವನ್ನೂ ಸ್ಕ್ಯಾನ್ ಮಾಡಲಿದ್ದೇವೆ ಎಂದರು.

**ಈ ದಿನದ ದರ** ಪೆಟ್ರೋಲ್: 103.50 ₹/L ಡೀಸೆಲ್ : 90.03 ₹/L ಬಂಗಾರ: ₹9,824/Gram24ct ₹9,005/Gram22ct ಬೆಳ್ಳಿ: ₹100.90/Gram

## ಆತ್ಮಹತ್ಯೆಗೆ ಶರಣಾದ ಅಕ್ಕ, ತಮ್ಮ

• ಉದಯವಾಹಿನಿ, ಬೆಂಗಳೂರು

ಸಹೋದರಿ ಆತ್ಮಹತ್ಯೆ ಮಾಡಿಕೊಂಡಿರುವುದನ್ನು ನೋಡಿ ಆಘಾತಕ್ಕೊಳಗಾದ ಸಹೋದರನೂ ಸಾವಿಗೆ ಶರಣಾಗಿರುವ ಘಟನೆ ನೆಲಮಂಗಲ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ರಾತ್ರಿ ನಡೆದಿದೆ. ಶ್ರೀನಿವಾಸಪುರದ ನಿವಾಸಿ ರಮ್ಯಾ (27) ಪುನೀತ್ (22) ಆತ್ಮಹತ್ಯೆ ಶರಣಾದ ಸಾಕು ಮಗ, ರಮ್ಯಾ ಅವರು ವಕೀಲ ವೃತ್ತಿ ಮಾಡುತ್ತಿದ್ದರು, ಪುನೀತ್ ಚಿಕ್ಕಂದಿನಿಂದಲೂ ಇವರ ಮನೆಯಲ್ಲೇ ಬೆಳೆದಿದ್ದು ಸ್ವಂತ ಮಗನಂತೆ ಇದ್ದನು. ಕೆಂಪಲಿಂಗನಹಳ್ಳಿಯ ತೋಟದ ಮನೆಯಲ್ಲಿ ಪುನೀತ್ ಇರುತ್ತಿದ್ದನು. ರಾತ್ರಿ, ರಮ್ಯಾ ಆತ್ಮಹತ್ಯೆ ಮಾಡಿಕೊಂಡಿರುವ ವಿಷಯ ತಿಳಿದು ಅವರ ಮನೆಗೆ ಹೋಗಿ ನೋಡಿ ಆಘಾತಗೊಂಡಿದ್ದಾನೆ. ಈ ವಿಷಯವನ್ನು ರಮ್ಯಾ ಅವರ ಸಂಬಂಧಿಕರಿಗೆ ಮೆಸೇಜ್ ಮಾಡಿ ನಂತರ ತೋಟದ ಮನೆಗೆ ಹೋಗಿ ಪುನೀತ್ ಸಹ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ.


ರಮ್ಯಾ ಆತ್ಮಹತ್ಯೆಗೆ ಕಾರಣ ಸದ್ಯಕ್ಕೆ ತಿಳಿದು ಬಂದಿಲ್ಲ, ಸುದ್ದಿ ತಿಳಿದು ನೆಲಮಂಗಲ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿ ಇಬ್ಬರ ಮೃತದೇಹಗಳನ್ನು ನೆಲಮಂಗಲ ಸರ್ಕಾರಿ ಆಸ್ಪತ್ರೆಗೆ ರವಾನಿಸಿ ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮಕೈಗೊಂಡಿದ್ದಾರೆ.

# ಮೊದಲು ದೇಶದ ಒಳಗಿರುವ ಸ್ಲೀಪರ್ ಸೆಲ್‌ಗಳನ್ನು ಮಟ್ಟ ಹಾಕಬೇಕು

• ಉದಯವಾಹಿನಿ, ಬೆಂಗಳೂರು

ಪಾಕಿಸ್ತಾನಕ್ಕಿಂತ ಮೊದಲು ದೇಶದ ಒಳಗಿರುವ ಸ್ಲೀಪರ್ ಸೆಲ್‌ಗಳನ್ನು ಮಟ್ಟ ಹಾಕಬೇಕೆಂದು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದ್ದಾರೆ. ಮಲ್ಲೇಶ್ವರಂನ ಬಿಜೆಪಿ ಕಚೇರಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಅವರಿಗೆ ನೆರವು ಕೊಡುವುದು, ಬೇಲ್ ಕೊಡಿಸುವುದು, ಕಾನೂನು ಸಹಾಯ ಮಾಡುವುದು ನಡೆಯುತ್ತಿದೆ.

ಇಂತಹವರನ್ನು ಕೂಡ ಬಿಡಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಸ್ಪಷ್ಟವಾಗಿ ಹೇಳಿದ್ದಾರೆ ಎಂದರು. ಎಲ್ಲಾ ವಲಯ ಆಯುಕ್ತರ ಕಚೇರಿಯ ಮುಂದೆ ಏ. 28ರಿಂದ 3 ದಿನಗಳ ಕಾಲ ಕಾಂಗ್ರೆಸ್ ಸರ್ಕಾರ ಮಾಡಿದ ಬೆಲೆ ಏರಿಕೆಯ ವಿರುದ್ಧ ಹೋರಾಟ ಮಾಡಲಾಗುತ್ತದೆ. ಹಾಲು, ವಿದ್ಯುತ್, ಆಸ್ತಿ ತೆರಿಗೆ, ಪಾರ್ಕಿಂಗ್ ಶುಲ್ಕದ ಬಗ್ಗೆ ಹೋರಾಟ ಮಾಡಲಾಗುವುದು. ಬೆಂಗಳೂರಿನ ಜನರ ಮೇಲೆ ಕಾಂಗ್ರೆಸ್ ಭರಪೂರ ತೆರಿಗೆಗಳನ್ನು ಹೇರಿದೆ. ಪ್ರತಿ ಮನೆಗಳಿಗೆ ಹೋಗಿ ಕರಪತ್ರ ಹಂಚಲಾಗುವುದು. ಜಿಬಿಎ ಚುನಾವಣೆಯನ್ನು ಸರ್ಕಾರ ಮುಂದೂಡುತ್ತಿದೆ.



ಈ ಬಗ್ಗೆ ಕೂಡ ಹೋರಾಟ ಮಾಡಲಾಗುವುದು ಎಂದು ತಿಳಿಸಿದರು. ಶಾಸಕರ ಅಮಾನತಿಗೆ ಸಂಬಂಧಿಸಿದಂತೆ ಸ್ಪೀಕರ್ ಜೊತೆ ಚರ್ಚಿಸಲಾಗಿದೆ. ಈ ಅಮಾನತು ಆ ಒಂದು ಅಧಿವೇಶನಕ್ಕೆ ಮಾತ್ರ ಸೀಮಿತವಾಗಬೇಕು. ಅದನ್ನು ಬಿಟ್ಟು ಹೊರಗೆ ಭತ್ಯೆ ಕೊಡುವುದಿಲ್ಲ ಎನ್ನುವುದು ಸರಿಯಲ್ಲ, ಇದು ಅಸಂವಿಧಾನಿಕವಾದ ಕ್ರಮ ಎಂದರು.

ಗ್ರೇಟರ್ ಬೆಂಗಳೂರು ವಿಧೇಯಕದ ವಿರುದ್ಧ ಕಾನೂನು ಹೋರಾಟ ಮಾಡಲಾಗುವುದು. ರಾಜ್ಯಪಾಲರು ಸಹಿ ಹಾಕಿದರೆ ಅದು ಕಾಂಗ್ರೆಸ್ ಪರ ಎನ್ನುತ್ತಾರೆ. ಸಹಿ ಹಾಕದೇ ಇದ್ದರೆ ಅದು ಬಿಜೆಪಿ ಕಚೇರಿ ಎಂದು ಟೀಕಿಸುತ್ತಾರೆ ಎಂದರು.

**ಕೆಎಎಸ್ ಪರೀಕ್ಷೆಗೆ ಸಂಬಂಧಿಸಿದಂತೆ ಹೈಕೋರ್ಟ್ ತೀರ್ಪು ನೀಡಿದೆ. ಅಧಿವೇಶನದಲ್ಲಿ ನಾನು ಈ ವಿಷಯ ಪ್ರಸ್ತಾಪಿಸಿದಾಗ ತೀರ್ಪು ಬಂದ ಮೇಲೆ ಮರುಪರೀಕ್ಷೆ ಬಗ್ಗೆ ಮುಕ್ತ ಮನಸ್ಸಿನಿಂದ ಪರಿಶೀಲನೆ ನಡೆಸುವುದಾಗಿ ಸಿಎಂ ಭರವಸೆ ನೀಡಿದ್ದರು. ಈಗ ಯಾವ ನಿರ್ಧಾರ ಕೈಗೊಳ್ಳುತ್ತಾರೆ ಎಂಬುದನ್ನು ಗಮನಿಸಿ ಮುಂದೆ ಅಗತ್ಯ ಬಿದ್ದರೆ ಮುಂದೆಯೂ ಹೋರಾಟ ಮಾಡಲಾಗುವುದು**
**-ಆರ್.ಅಶೋಕ್, ಪ್ರತಿಪಕ್ಷ ನಾಯಕ**

ಕಾಂಗ್ರೆಸ್ ನಾಯಕರು ದೇಶದ ಯೋಧರ ಬಗ್ಗೆ ಅನುಮಾನ ವ್ಯಕ್ತಪಡಿಸಿದರೆ, ಮತ್ತೆ ಇವರಿಗೆ ಯಾರ ಮೇಲೆ ನಂಬಿಕೆ ಇದೆ ಇಡೀ ದೇಶ ಒಂದಾಗಿ ಭಯೋತ್ಪಾದಕ ದಾಳಿಯನ್ನು ಖಂಡಿಸಬೇಕು.

ಉಗ್ರರು ಹಿಂದೂ ಎಂದು ಹೇಳಿಯೇ ಕೊಂದಿದ್ದಾರೆ. ಬೇಹುಗಾರಿಕೆ ಸರಿಯಿಲ್ಲ, ಯೋಧರು ಸರಿಯಿಲ್ಲ ಎಂದು ಟೀಕೆ ಮಾಡುವುದು ಸರಿಯಲ್ಲ. ರಾಮೇಶ್ವರಂ ಕೆಫೆಯಲ್ಲಿ ಬಾಂಬ್ ಸ್ಫೋಟವಾದಾಗ ಯಾರು ವಿಫಲರಾಗಿದ್ದರು.

ಕುಕ್ಕರ್ ಬಾಂಬ್ ಸ್ಫೋಟ ಗೊಂಡಾಗ ಯಾರು ವಿಫಲರಾಗಿದ್ದರು. ಸಚಿವರ ವಿರುದ್ಧ ಹನಿಟ್ರ್ಯಾಪ್ ನಡೆಯುತ್ತಿರುವಾಗ ಯಾರು ವಿಫಲರಾಗಿದ್ದಾರೆ. ಇಂತಹ ಕಾಂಗ್ರೆಸ್ ಪಕ್ಷ ದೇಶದ ಯೋಧರ ಬಗ್ಗೆ ಮಾತಾಡುವುದು ಬೇಡ ಎಂದರು.

## ಗಾಯನ ಸಮಾಜದಲ್ಲಿ ಹಿಂದೂ ವಧು ವರಾನ್ವೇಷಣಾ ಕಾರ್ಯಕ್ರಮ




ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮದುವೆ ಆಗಲು ಬಯಸುತ್ತಿರುವ ಹಿಂದೂ ಹುಡುಗ, ಹುಡುಗಿಯರಿಗೆ ಸೂಕ್ತ ಸಂಗಾತಿ ಆರಿಸಿಕೊಡುವ ಉದ್ದೇಶದಿಂದ ಮೇ 3 ಮತ್ತು ಮೇ 4 ರಂದು ಬೆಂಗಳೂರು ಬಸವನಗುಡಿಯಲ್ಲಿರುವ ಗಾಯನ ಸಮಾಜದಲ್ಲಿ ''ಶುಭಸ್ಯ ಶೀಘ್ರಂ'' ಎಂಬ ಹೆಸರಿನಲ್ಲಿ ಹಿಂದೂ ವಧು ವರನ್ವೇಷಣಾ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಹಿಂದೂ ಧರ್ಮದ ಎಲ್ಲಾ ಸಮುದಾಯಗಳ ವಧು- ವರರಿಗೆ ಸೂಕ್ತ ಸಂಗಾತಿ ಆಯ್ಕೆಗೆ ಅನುವು ಮಾಡಿಕೊಡಲಾಗುತ್ತದೆ.

**ಪತ್ರಕರ್ತ, ಮಾಧ್ಯಮ ಮಿತ್ರರಿಗೆ ವಂದನೆ**

ಇಲ್ಲಿ ಅಂತರ್ಜಾತೀಯ ವಿವಾಹಕ್ಕೆ ಆಸಕ್ತಿ ತೋರಿಸುವವರಿಗೆ ವಿಶೇಷ ವಿಭಾಗವನ್ನು ರೂಪಿಸಲಾಗಿದೆ. ಜೊತೆಗೆ ಮರು ವಿವಾಹ ಆಗುವವರಿಗೂ ಸಂಗಾತಿ ಆಯ್ಕೆಯ ಅವಕಾಶ ಕಲ್ಪಿಸಿಕೊಡಲಾಗುತ್ತದೆ. ಕುಟುಂಬದವರು ಮತ್ತು ಹಿರಿಯರ ಸಮ್ಮುಖದಲ್ಲಿ ವಧು ವರರು ನೇರ ಸಂವಾದ ನಡೆಸುವ ಮೂಲಕ ಸಂಗಾತಿ ಆಯ್ಕೆ ಮಾಡಬಹುದು. ಕೃಷಿಕ ಕುಟುಂಬದ ವಧುಗಳಿಗೆ ಮತ್ತು ಬಡತನ ರೇಖೆಗಿಂತ ಕೆಳಗಿರುವ ಕುಟುಂಬದವರಿಗೆ ಉಚಿತ ಪ್ರವೇಶ ಇರುತ್ತದೆ. ಮುಂಗಡ ನೋಂದಣಿ ಮಾಡುವವರು ಮೇ 1ರ ಒಳಗೆ ವಧು ಮತ್ತು ವರ ಹೆಸರು ನೀಡಿ ನೋಂದಾಯಿಸಬಹುದು. ಹೆಚ್ಚಿನ ಮಾಹಿತಿಗೆ ಸಂಪರ್ಕಿಸಿ- ಅನ್ವೇಷಣಾ ಮೇಳ ಆಯೋಜಕರು ಫ್ಯೂಸ್ ನೆಟ್ವರ್ಕ್: 9108853377 / 8073762722

## ಕಾರ್ಮಿಕರ ಬಹಿರಂಗ ಸಭೆ ಮೇ 1ಕ್ಕೆ

• ಉದಯವಾಹಿನಿ, ಬೆಂಗಳೂರು

ಕಾರ್ಮಿಕರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಮೇ 1ರಂದು ಪುರಭವನದಲ್ಲಿ ಬಹಿರಂಗ ಸಭೆ ಆಯೋಜಿಸಲಾಗುತ್ತದೆ ಎಂದು ಕರ್ನಾಟಕ ವರ್ಕರ್ಸ್‌ರ ಯೂನಿಯನ್ ತಿಳಿಸಿದೆ. ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಯೂನಿಯನ್ ಪ್ರಧಾನ ಕಾರ್ಯದರ್ಶಿ ಇ.ಕೆ.ಎನ್. ರಾಜನ್, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಮಿಕರ ಸಮಸ್ಯೆಗಳ ಬಗ್ಗೆ ಗಮನಹರಿಸುತ್ತಿಲ್ಲ. ಇಎಸ್‌ಐ, ವೇತನ ಮಿತಿ ರದ್ದು, ಗ್ರಾಚುಯಿಟಿ ಕಾಯ್ದೆಗೆ ತಿದ್ದುಪಡಿ ಕೋರಿ ಲಕ್ಷಾಂತರ ಕಾರ್ಮಿಕರು ಸಹಿ ಮಾಡಿದ ಮನವಿ ಪತ್ರ, ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕಳುಹಿಸಿದರೂ, ಇದುವರೆಗೂ ಯಾವುದೇ ಕ್ರಮ ಕೈಗೊಂಡಿಲ್ಲ.

ಕಾರ್ಮಿಕ ಕಾನೂನುಗಳನ್ನು ಮಾಲೀಕರ ಪರವಾಗಿ ಬದಲಾಯಿಸಲಾಗುತ್ತಿದೆ ಎಂದು ಆರೋಪಿಸಿದರು. ಸುಪ್ರೀಂ ಕೋರ್ಟ್ ನಿವೃತ್ತ ನ್ಯಾಯಮೂರ್ತಿ ಗೋಪಾಲಗೌಡ, ನಟ ಅಶೋಕ್ ಮತ್ತು ಕವಯತ್ರಿ ಕೆ. ಷರೀಫಾ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

## ಡ್ರಗ್ಸ್ ಮಾರಾಟ ಪ್ರಕರಣ: ನೈಜೀರಿಯಾ ಪ್ರಜೆಗೆ 14 ವರ್ಷ ಜೈಲು

• ಉದಯವಾಹಿನಿ, ಬೆಂಗಳೂರು

ಡ್ರಗ್ಸ್ ಮಾರಾಟ ಪ್ರಕರಣದಲ್ಲಿ ನೈಜೀರಿಯಾ ಪ್ರಜೆ ಕಿಂಗ್ಸ್ಲೇ ಎಂಬಾತನಿಗೆ ಸಿಸಿಎಚ್-33ನೇ ನ್ಯಾಯಾಲಯವು 14 ವರ್ಷ ಜೈಲು,1.60 ಲಕ್ಷ ದಂಡ ವಿಧಿಸಿದೆ. ಎಚ್‌ಆರ್‌ಬಿಆರ್ ಲೇಔಟ್‌ನ ಮೂರನೇ ಬ್ಲಾಕ್‌ನ ಬಿಡಿಎ ಪಾರ್ಕ್ ಬಳಿ ಕಿಂಗ್ಸ್ಲೇ ಎಂಡಿಎಂಎ ಕ್ರಿಸ್ಟಲ್ ಮಾರಾಟ ಮಾಡುತ್ತಿದ್ದ. ಖಚಿತ ಮಾಹಿತಿ ಆಧರಿಸಿ 2022ರ ಅಕ್ಟೋಬರ್ 9ರಂದು ದಾಳಿ ನಡೆಸಿ ಅಪರಾಧಿಯನ್ನು ಬಂಧಿಸಲಾಗಿತ್ತು. ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾಫ್ಟ್‌ವೇರ್ ಎಂಜನಿಯರ್‌ಗಳಿಗೆ ಕಿಂಗ್ಸ್ಲೇ ಡ್ರಗ್ಸ್ ಪೂರೈಕೆ ಮಾಡುತ್ತಿದ್ದ ಎಂಬುದು ಪೊಲೀಸ್ ತನಿಖೆಯಿಂದ ಗೊತ್ತಾಗಿತ್ತು. ಪ್ರಕರಣದ ತನಿಖೆ ನಡೆಸಿದ್ದ ಬಾಣಸವಾಡಿ ಠಾಣೆಯ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ನ್ಯಾಯಾಧೀಶರಾದ ವಿಜಯ ದೇವರಾಜ ಅರಸ್ ಅವರು ಅಪರಾಧಿಗೆ ದಂಡ ಹಾಗೂ ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ. ಪ್ರಾಸಿಕ್ಯೂಷನ್ ಪರವಾಗಿ ಪಬ್ಲಿಕ್ ಪ್ರಾಸಿಕ್ಯೂಟರ್ ಕೆ.ವಿ.ಅಶ್ವತ್ ನಾರಾಯಣ ಅವರು ವಾದ ಮಂಡನೆ ಮಾಡಿದರು.


### ಸ್ಮಾರ್ಟ್ ಮೀಟರ್ ಶುಲ್ಕಕ್ಕೆ ಹೈಕೋರ್ಟ್ ತಡೆ, ಬೆಸ್ಕಾಂಗೆ ಫುಲ್ ಕ್ಲಾಸ್

# ಬೆಸ್ಕಾಂನ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಆರಂಭಿಕ ವಿಘ್ನ

• ಉದಯವಾಹಿನಿ, ಬೆಂಗಳೂರು

ಬೆಸ್ಕಾಂನ ಸ್ಮಾರ್ಟ್ ಮೀಟರ್ ಅಳವಡಿಕೆಗೆ ಆರಂಭಿಕ ವಿಘ್ನ ಎದುರಾಗಿದೆ. ವಿದ್ಯುತ್ ಬಳಕೆ ಸಂಬಂಧ ರಿಯಲ್ ಟೈಂನಲ್ಲಿ ವಿದ್ಯುತ್ ಬಳಕೆ ಬಗ್ಗೆ ನಿಖರ ಮಾಹಿತಿ ಒದಗಿಸುವ ಸ್ಮಾರ್ಟ್ ಮೀಟರ್‌ಗಳಿಗೆ ಭಾರಿ ಮೊತ್ತದ ಹೆಚ್ಚುವರಿ ದರ ನಿಗದಿ ಆಕ್ಷೇಪಿಸಿ ಸಲ್ಲಿಸಿರುವ ಅರ್ಜಿ ಸಂಬಂಧ ಕರ್ನಾಟಕ ಹೈಕೋರ್ಟ್, ಸ್ಮಾರ್ಟ್ ಮೀಟರ್ ಶುಲ್ಕಕ್ಕೆ ತಡೆ ನೀಡಿದೆ. 2000 ರೂಪಾಯಿ ಇದ್ದ ಮೀಟರ್‌ಗೆ ಈಗ 8910 ರೂ. ಕೊಡಬೇಕಿದೆ ಎಂದು ಬೆಸ್ಕಾಂ ಕ್ರಮ ಪ್ರಶ್ನಿಸಿ ಜಯಲಕ್ಷ್ಮೀ ಎನ್ನುವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಹೈಕೋರ್ಟ್ ಪೀಠ, ಬಡವರಿಂದ ಇಷ್ಟು ಹಣ ಕಿತ್ತುಕೊಂಡರೆ ಎಲ್ಲಿಗೆ ಹೋಗಬೇಕು. ಎಲ್ಲರೂ ಸ್ಮಾರ್ಟ್ ಮೀಟರ್ ಹಾಕಬೇಕೆಂದರೆ ಬಡವರೇನು ಮಾಡಬೇಕು ಎಂದು ಅಸಮಾಧಾನ ವ್ಯಕ್ತಪಡಿಸಿದ್ದು, ಬೆಸ್ಕಾಂನ ಪ್ರಿಪೇಯ್ಡ್ ಮೀಟರ್ ಶುಲ್ಕಕ್ಕೆ ಮಧ್ಯಂತರ ತಡೆ ಆದೇಶ ಹೊರಡಿಸಿದೆ. 2000 ರೂಪಾಯಿ ಇದ್ದ ಮೀಟರ್‌ಗೆ ಈಗ 8910 ರೂ. ವಿಧಿಸಿರುವ ಬೆಸ್ಕಾಂ ಕ್ರಮ ಪ್ರಶ್ನಿಸಿ ಜಯಲಕ್ಷ್ಮೀ ಎನ್ನುವರು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದು, ಬೇರೆ ರಾಜ್ಯಗಳಲ್ಲಿ 900 ರೂಪಾಯಿಗೆ ಪ್ರಿಪೇಯ್ಡ್ ಮೀಟರ್ ನೀಡಲಾಗುತ್ತಿದೆ. ಕೆಇಆರ್‌ಸಿ ಸ್ಮಾರ್ಟ್ ಮೀಟರ್ ಕಡ್ಡಾಯವಲ್ಲವೆಂದಿತ್ತು.




ಆದರೆ ಬೆಸ್ಕಾಂ ಸುತ್ತೋಲೆ ಸ್ಮಾರ್ಟ್ ಮೀಟರ್ ಕಡ್ಡಾಯ ಎಂದಿದೆ ಎಂದು ಅರ್ಜಿದಾರರ ಪರ ಹಿರಿಯ ವಕೀಲ ಪ್ರಭುಲಿಂಗ್ ನಾವದಗಿ ವಾದ ಮಂಡಿಸಿದರು. ಈ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್, ದುಬಾರಿ ಪ್ರಿಪೇಯ್ಡ್ ವಿದ್ಯುತ್ ಮೀಟರ್‌ಗೆ ಅಸಮಾಧಾನ ವ್ಯಕ್ತಪಡಿಸಿದೆ. ನಿಮ್ಮಿಂದ ಯಾರು ಫ್ರೀ ವಿದ್ಯುತ್ ಕೇಳಿದ್ದರು? ಎಂದು ಪ್ರಶ್ನಿಸಿದ ಹೈಕೋರ್ಟ್, ಬಡವರಿಂದ ಇಷ್ಟು ಹಣ ಕಿತ್ತರೆ ಎಲ್ಲಿಗೆ ಹೋಗಬೇಕು? ಎಲ್ಲರೂ ಸ್ಮಾರ್ಟ್ ಮೀಟರ್ ಹಾಕಬೇಕೆಂದರೆ ಬಡವರೇನು ಮಾಡಬೇಕು? ಎಂದು ತರಾಟೆಗೆ ತೆಗೆದುಕೊಂಡಿತು. ಕೊನೆಗೆ ಬೆಸ್ಕಾಂನ ಪ್ರಿಪೇಯ್ಡ್ ಮೀಟರ್ ಶುಲ್ಕಕ್ಕೆ ಮಧ್ಯಂತರ ತಡೆ ಆದೇಶ ಹೊರಡಿಸಿದೆ.




**ಏನಿದು ಸ್ಮಾರ್ಟ್ ಮೀಟರ್?:** ಸ್ಮಾರ್ಟ್ ವಿದ್ಯುತ್ ಮೀಟರ್ ಒಂದು ರೀತಿಯಲ್ಲಿ ಮೊದಲೇ ಪಾವತಿಸಿ ವಿದ್ಯುತ್ ಬಳಸುವ ವ್ಯವಸ್ಥೆ. ಈ ನೂತನ ವ್ಯವಸ್ಥೆಯಲ್ಲಿ ಮೊಬೈಲ್ ಫೋನ್‌ಗಳ ಮಾದರಿಯಲ್ಲೇ ವಿದ್ಯುತ್ ಬಳಕೆಗೂ ಪ್ರಿಪೇಯ್ಡ್ ರೀಚಾರ್ಜ್ ಕಾರ್ಡ್ ಪರಿಚಯಿಸಲಾಗುತ್ತಿದೆ. ಗ್ರಾಹಕರು, ಪ್ರಿಪೇಯ್ಡ್ ಮೊಬೈಲ್ ಸಿಮ್ ಮಾದರಿಯಲ್ಲಿ ಮೊದಲೇ ಹಣ ಕಟ್ಟಿ ವಿದ್ಯುತ್ ಸಂಪರ್ಕ ಪಡೆಯಬೇಕಾಗುತ್ತದೆ. ಪ್ರಿಪೇಯ್ಡ್ ಸಿಮ್ ಕಾರ್ಡ್‌ಗಳ ರೀತಿಯಲ್ಲೇ ಪ್ರಿಪೇಯ್ಡ್ ಸ್ಮಾರ್ಟ್ ಮೀಟರ್‌ಗಳೂ ಕಾರ್ಯ ನಿರ್ವಹಿಸುತ್ತವೆ. ಪ್ರಿಪೇಯ್ಡ್ ಸಿಮ್ ಕಾರ್ಡ್‌ಗಳನ್ನು ರೀಚಾರ್ಜ್ ಮಾಡಿಸಿ ತಮಗೆ ಬೇಕಾದಷ್ಟು ಟಾಕ್ ಟೈಮ್, ಇಂಟರ್‌ನೆಟ್ ಡೇಟಾ ಪಡೆಯಬಹುದು.

ಹಾಗೆಯೇ, ಗ್ರಾಹಕರು ಪ್ರಿಪೇಯ್ಡ್ ವಿದ್ಯುತ್ ಮೀಟರ್‌ಗಳನ್ನು ಆನ್‌ಲೈನ್ ಮೂಲಕ ಅಥವಾ ಸಮೀಪದ ವಿದ್ಯುತ್ ವಿತರಣಾ ಕಚೇರಿಗಳಲ್ಲಿ ರೀಚಾರ್ಜ್ ಮಾಡಿಸಿ ತಮಗೆ ಬೇಕಾದಷ್ಟು ಯೂನಿಟ್‌ಗಳನ್ನು ಪಡೆಯಬಹುದು.


**ಸ್ಮಾರ್ಟ್ ಮೀಟರ್ ದರ ಎಷ್ಟು ಗೊತ್ತಾ?:** ವಿದ್ಯುತ್ ದರ ಪ್ರತಿ ಯೂನಿಟ್‌ಗೆ 36 ಪೈಸೆ ಹೆಚ್ಚಳ ಮಾಡಲಾಗಿದೆ. ವಿದ್ಯುತ್ ಪ್ರಸರಣ ಮತ್ತು ಎಸ್ಕಾಮ ಸಿಬ್ಬಂದಿಯ ಪಿಂಚಣಿ, ಗ್ರಾಚ್ಯುಟಿಗಾಗಿ ಗ್ರಾಹಕರಿಂದ ವಸೂಲಿಗೆ ಕೆಇಆರ್‌ಸಿ ಮುಂದಾಗಿದ್ದು, ದರ ಹೆಚ್ಚಳದ ಆದೇಶ ಹೊರಡಿಸಿದೆ. ಎಪ್ರಿಲ್ 1 ರಿಂದಲೇ ಹೊಸ ಆದೇಶ ಜಾರಿಯಾಗಿದೆ. ಇದರ ಮಧ್ಯೆ ಸ್ಮಾರ್ಟ್ ಮೀಟರ್ ಗಳ ಅಳವಡಿಕೆ ಕಡ್ಡಾಯಗೊಳಿಸಿ ಬೆಸ್ಕಾಂ ಆದೇಶ ಹೊರಡಿಸಿದೆ. ಆದ್ರೆ, ಸದ್ಯ ಚಾಲ್ತಿಯಲ್ಲಿರುವ ಸ್ಟಾಟಿಕ್ ಮೀಟರ್‌ಗಳಿಗೂ ಹೊಸ ಸ್ಮಾರ್ಟ್ ಮೀಟರ್‌ಗಳ ದರಕ್ಕೂ ಅಜಗಜಾಂತರ ವ್ಯತ್ಯಾಸವಿದೆ. ಸ್ಮಾರ್ಟ್ ಮೀಟರ್ ದರ ಶೇ.400ರಿಂದ 800ರಷ್ಟು ಏರಿಕೆಯಾಗಿದ್ದು, ಹೊಸ ಸಂಪರ್ಕಕ್ಕೆ ಸ್ಮಾರ್ಟ್ ಮೀಟರ್ ಕಡ್ಡಾಯವಾಗಿದೆ. ಎಲ್ ಟಿ ಸಿಂಗಲ್ ಫೇಸ್ 2 ಸ್ಟಾಟಿಕ್ ಮೀಟರ್ ದರ 980 ರೂಪಾಯಿ ಇದ್ದು, ಸ್ಮಾರ್ಟ್ ಮೀಟರ್ ದರ 4,800 ರೂ. ಇದೆ. ಎಲ್ ಟಿ 3 ಫೇಸ್ 4 ಸ್ಟಾಟಿಕ್ ಮೀಟರ್ 2,430 ರೂಪಾಯಿ ಇದ್ರೆ, ಸ್ಮಾರ್ಟ್ ಮೀಟರ್ ದರ 8,500 ರೂ. ಆಗಿದೆ. ಇನ್ನು ಎಲ್ ಟಿ 3 ಫೇಸ್ ಅಖಿ ಆಪರೇಟೆಡ್ 3450 ರಿಂದ 10,900 ರೂಪಾಯಿ ಆಗಿದೆ. ಇದರಿಂದ ಬಡ ವರಿಗೆ ನುಂಗಲಾಗದ ತುತ್ತಾಗಿ ಪರಿಣಮಿಸಿದ್ದು, ಇದೀಗ ಮಹಿಳೆಯೊಬ್ಬರು ಕೋರ್ಟ್ ಮೆಟ್ಟಿಲೇರಿ ಈಗ ಸ್ಮಾರ್ಟ್ ಮೀಟರ್ ಓಟಕ್ಕೆ ಬ್ರೇಕ್ ಹಾಕಿಸಿದ್ದಾರೆ.

## ಜನಿವಾರ ವಿವಾದ: ಬೀದರ್‌ನ ಸುಚಿವ್ರತ್ ಕುಲಕರ್ಣಿಗೆ ಸರ್ಕಾರದಿಂದ ಎರಡು ಆಯ್ಕೆ

• ಉದಯವಾಹಿನಿ, ಬೆಂಗಳೂರು

ಜನಿವಾರ ಹಾಕಿದ್ದಕ್ಕೆ ಸಿಇಟಿ ಪರೀಕ್ಷೆಗೆ ಅವಕಾಶ ನೀಡದ ಪ್ರಕರಣಕ್ಕೆ ಸಂಬಂಧಿಸಿದಂತೆ ಪರೀಕ್ಷೆಯಿಂದ ವಂಚಿತರಾದ ಬೀದರ್‌ನ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಅವರಿಗೆ ಸರ್ಕಾರ ಎರಡು ಆಯ್ಕೆಗಳನ್ನು ನೀಡಿದೆ. ಭೌತವಿಜ್ಞಾನ, ರಾಸಯನ ವಿಜ್ಞಾನ ವಿಷಯಗಳಲ್ಲಿ ಪಡೆದ ಸರಾಸರಿ ಅಂಕಗಳನ್ನು ಗಣಿತ ವಿಷಯಕ್ಕೆ ನೀಡುವುದು. ಬೇಡವೆಂದರೆ ಮತ್ತೊಮ್ಮೆ ಪರೀಕ್ಷೆ ಬರೆಯುವ ಅವಕಾಶವನ್ನು ಸರ್ಕಾರ ವಿದ್ಯಾರ್ಥಿ ಮುಂದಿಟ್ಟಿದೆ. ಈ ಮಾಹಿತಿಯನ್ನು ಸ್ವತಃ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ ಸುಧಾಕರ್ ಅವರು ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಅವರಿಗೆ ಕರೆ ಮಾಡಿ ತಿಳಿಸಿದ್ದಾರೆ. ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಆಯ್ಕೆಯ ನಂತರ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಒಪ್ಪಿಗೆ ನೀಡಲಿದೆ ಎಂದು ಸಚಿವರು ಹೇಳಿದ್ದಾರೆ.





**ಏನಿದು ಪ್ರಕರಣ?:** ಸುಚಿವೃತ ಕುಲಕರ್ಣಿ ಬೀದರ್‌ನ ಮನ್ನಳ್ಳಿ ರಸ್ತೆಯಲ್ಲಿರುವ ಸಾಯಿಸ್ಫೂರ್ತಿ ಕಾಲೇಜಿಗೆ ಸಿಇಟಿ ಪರೀಕ್ಷೆ ಬರೆಯಲು ತೆರಳಿದ್ದರು. ಈ ವೇಳೆ, ಅಲ್ಲಿನ ಸಿಬಂದಿ ಜನಿವಾರ ತೆಗೆದು ಪರೀಕ್ಷೆ ಹಾಜರಾಗುವಂತೆ ಸೂಚಿಸಿದ್ದರು.

ಇದಕ್ಕೆ ಒಪ್ಪದ ಸುಚಿವೃತ ಕುಲಕರ್ಣಿಯವರು ಜನಿವಾರ ತೆಗೆಯದೆ ವಾಪಸ್ ಮನೆಗೆ ಹೋಗಿದ್ದರು. ಅಧಿಕಾರಿಗಳ ಈ ಕ್ರಮದ ವಿರುದ್ಧ ಬ್ರಾಹ್ಮಣ ಮಹಾಸಭಾ ತೀವ್ರ ಆಕ್ಷೇಪ ವ್ಯಕ್ತಪಡಿಸಿತ್ತು. ಹಾಗೇ, ಜೆಡಿಎಸ್ ನಾಯಕ ನಿಖಿಲ್ ಕುಮಾರಸ್ವಾಮಿ, ಬಿಜೆಪಿ ನಾಯಕ ಬಸವರಾಜ ಬೊಮ್ಮಾಯಿ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸೇರಿದಂತೆ ಹಲವು ರಾಜಕೀಯ ನಾಯಕರು ಕೂಡ ಈ ಘಟನೆಯ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದರು.

### ಉಚಿತವಾಗಿ ಸೀಟ್ ಕೊಡಿಸುವುದಾಗಿ ಖಂಡ್ರೆ ಭರವಸೆ

**ಪರೀಕ್ಷೆಯಿಂದ ವಂಚಿತನಾದ ವಿದ್ಯಾರ್ಥಿ ಸುಚಿವ್ರತ್ ಕುಲಕರ್ಣಿ ಅವರಿಗೆ ಉಚಿತವಾಗಿ ಇಂಜಿನಿಯರಿಂಗ್ ಸೀಟ್ ಕೊಡಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಭರವಸೆ ನೀಡಿದ್ದರು. ಘಟನೆ ನಡೆದ ಬಳಿಕ ಸುಚಿವ್ರತ್ ಕುಲಕರ್ಣಿ ಮನೆಗೆ ಭೇಟಿ ನೀಡಿದ್ದ ಸಚಿವ ಈಶ್ವರ್ ಖಂಡ್ರೆ, ವಿದ್ಯಾರ್ಥಿ ಹಾಗೂ ಕುಟುಂಬದ ಸದಸ್ಯರಿಗೆ ಆತ್ಮಸ್ಥೈರ್ಯ ತುಂಬಿ, ಉಚಿತವಾಗಿ ಇಂಜಿನಿಯರಿಂಗ್ ಸೀಟ್ ಕೊಡಿಸುವುದಾಗಿ ಹೇಳಿದ್ದರು.**

## ದೇಶದ ಜನರು ಉಗ್ರವಾದದ ವಿರುದ್ಧ ಹೋರಾಡೋಣ

• ಉದಯವಾಹಿನಿ, ಬೆಂಗಳೂರು



ಬಿಬಿಎಂಪಿ ಅಧಿಕಾರಿ, ನೌಕರರ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಕಾಶ್ಮೀರ ಪಹಲ್ಗಾಮ್ ಉಗ್ರರ ದಾಳಿ ಖಂಡನೆ, ಕ್ಯಾಂಡಲ್ ಲೈಟ್ ಬೆಳಗುವ ಮೂಲಕ ಹುತಾತ್ಮರಿಗೆ ನಮನ ಸಲ್ಲಿಸುವ ಕಾರ್ಯ ಕ್ರಮ. ಅಧ್ಯಕ್ಷರಾದ ಎ.ಅಮೃತ್ ರಾಜ್‌ರವರು, ಅಧಿಕಾರಿ, ನೌಕರರು ಮೇಣದ ಬತ್ತಿ ಬೆಳಗಿಸಿ ಹುತಾತ್ಮರಿಗೆ ಗೌರವ ನಮನ ಸಲ್ಲಿಸಿದರು, ಎರಡು ನಿಮಿಷ ಮೌನ ಚರಣೆ ಮಾಡಿದರು. ಎ.ಅಮೃತ್ ರಾಜ್ ಮಾತನಾಡಿ ಪಹಲ್ಗಾಮ್ ದುರಂತದಲ್ಲಿ 28 ಜನ ಹುತಾತ್ಮರಾದರು. ಅದರಲ್ಲಿ ರಾಜ್ಯದ ಮಂಜುನಾಥ್ ರಾವ್, ಭರತ್ ಭೂಷಣ್, ಮಧುಸೂದನ್ ರಾವ್ ರಾಜ್ಯದವರು ವೀರ ಮರಣ ಹೊಂದಿದ್ದಾರೆ.

ಕುಟುಂಬದ ಧೈರ್ಯ, ಆತ್ಮಸ್ಥೈರ್ಯ ತುಂಬುವ ಶಕ್ತಿ ಭಗವಂತ ನೀಡಲಿ, ವೀರ ಮರಣ ಹೊಂದಿದವರಿಗೆ ಚಿರಶಾಂತಿ ಸಿಗಲಿ ಎಂದು ದೇವರಲ್ಲಿ ಪ್ರಾರ್ಥಿಸುತ್ತೇನೆ. ಪಹಲ್ಗಾಮ್ ದುರಂತದ ಉಗ್ರರ ವಿರುದ್ಧ ಹೋರಾಟ ಮಾಡಲು ದೇಶದ 140ಕೋಟಿ ಜನರು ಒಗ್ಗಾಟ್ಟಿನಿಂದ ಸಜ್ಜಾಗಿದ್ದಾರೆ. ಮನುಷ್ಯನ ಜಾತಿ ಒಂದೇ, ಎಲ್ಲರು ಸಹೋದರತ್ವದಲ್ಲಿ ಬಾಳಬೇಕು ಎಂದು ಹೇಳಿದರು. ಸಾಯಿಶಂಕರ್, ಕೆ.ಜಿ.ರವಿ, ಎಸ್.ಜಿ.ಸುರೇಶ್, ರಾಮಚಂದ್ರ, ಕೆ.ಮಂಜೇಗೌಡ, ಹೆಚ್.ಬಿ.ಹರೀಶ್, ಮಾರ್ಕೆಟ್ ಮಂಜುನಾಥ್, ಶ್ರೀಧರ್, ಮಂಜುನಾಥ್, ಕೆ.ನರಸಿಂಹ, ಎನ್.ಶಿವಪ್ರಸಾದ್, ಎನ್.ಹರೀಶ್ ಕುಮಾರ್ ರವರು ಭಾಗವಹಿಸಿದ್ದರು.

## ರನ್ಯಾ ರಾವ್ ವಿರುದ್ಧ ಕಾಫಿಪೋಸಾ ಜಾರಿ ಒಂದು ವರ್ಷ ಜೈಲೇ ಗತಿ

• ಉದಯವಾಹಿನಿ, ಬೆಂಗಳೂರು



ಸ್ಯಾಂಡಲ್‌ವುಡ್ ನಟಿ ರನ್ಯಾ ರಾವ್ ಗೋಲ್ಡ್ ಸ್ಮಗ್ಲಿಂಗ್ ಕೇಸ್‌ಗೆ ಬಿಗ್ ಟ್ವಿಸ್ಟ್ ಸಿಕ್ಕಿದೆ. ರನ್ಯಾ ರಾವ್ ಮತ್ತು ಸಂಗಡಿಗರು 1 ವರ್ಷ ಜೈಲಿನಲ್ಲೇ ಇರ ಬೇಕಾದ ಅನಿವಾರ್ಯ ಸ್ಥಿತಿ ಎದುರಾಗಿದೆ. ಹೌದು, ರನ್ಯಾ ರಾವ್ ವಿರುದ್ಧ ಕಾಫಿ ಪೋಸಾ ಕಾಯ್ದೆಯನ್ನು ಜಾರಿ ಮಾಡಲಾಗಿದೆ.

ಹೀಗಾಗಿ ರನ್ಯಾ ರಾವ್ 1 ವರ್ಷ ಕಾಲ ಜೈಲಿನಲ್ಲೇ ಇರಬೇಕಾದ ಅನಿವಾರ್ಯ ಎದುರಾಗಿದೆ. ರನ್ಯಾ ರಾವ್ 100 ಕೆಜಿಯಷ್ಟು ಚಿನ್ನವನ್ನು ವಿದೇಶದಿಂದ ಕಳ್ಳ ಸಾಗಾಣೆ ಮಾಡಿರುವುದು ತನಿಖೆಯಲ್ಲಿ ಬಹಿರಂಗವಾಗಿದೆ.

ಇದೀಗ ರನ್ಯಾ ರಾವ್, ತರುಣ್ ಕೊಂಡಾರಾಜ್, ಸಾಹಿಲ್ ಜೈನ್ ವಿರುದ್ಧ ಕಾಫಿಪೋಸಾ ಜಾರಿ ಮಾಡ ಲಾಗಿದೆ. ಆರೋಪಿಯು ಜಾಮೀನು ಪಡೆದು ಹೊರಗೆ ಬಂದರೆ ನಿರಂತರವಾಗಿ ಮತ್ತೆ ಕಳ್ಳ ಸಾಗಾಣಿಕೆ ಮಾಡುತ್ತಾರೆ. ಅಲ್ಲದೇ ಜೈಲಿನಿಂದ ಬಂದ ಬಳಿಕ ತಪ್ಪಿಸಿ ಕೊಳ್ಳಬಹುದು. ತನಿಖೆಗೆ ಸರಿಯಾಗಿ ಸಹಕಾರ ಕೊಡದೇ, ನಿರಂತರವಾಗಿ ಸ್ಮಗ್ಲಿಂಗ್‌ನಲ್ಲಿ ಮುಂದುವರೆಯುತ್ತಾರೆ ಎಂದು ಕಾಯ್ದೆ ಜಾರಿಗೊಳಿಸಲಾಗುತ್ತದೆ. ಕಾಫಿ ಪೋಸಾ ಕಾಯ್ದೆಯನ್ನು ಕೇಂದ್ರ ಆರ್ಥಿಕ ಗುಪ್ತಚರ ಬ್ಯೂರೋ ಜಾರಿ ಮಾಡುತ್ತದೆ. ಸಿಇಐಬಿಗೆ ವಿಚಾರ ನೀಡಬೇಕಿರೋದು ಡಿಆರ್‌ಐ(ಕಂದಾಯ ಗುಪ್ತಚರ ನಿರ್ದೇಶನಾಲಯ). ಕಾಫಿಪೋಸಾ ಕಾಯ್ದೆಯನ್ನು ಜಾರಿಗೊಳಿಸಿದರೆ ಆರೋಪಿಯು 1 ವರ್ಷಗಳ ಕಾಲ ಜೈಲಿನಲ್ಲೇ ಇರಬೇಕು.

### ಏನಿದು ಕಾಫಿಪೋಸಾ ಕಾಯ್ದೆ?

**ಕಾಫಿಪೋಸಾ ಎಂದರೆ ವಿದೇಶಿ ವಿನಿಮಯ ನಿಯಂತ್ರಣ, ಕಳ್ಳ ಸಾಗಾಣಿಕೆ ತಡೆ ಕಾಯ್ದೆಯಾಗಿದೆ. ಈ ಕಾಫಿಪೋಸಾ ಕಾಯ್ದೆಯನ್ನು ಕಳ್ಳಸಾಗಣೆ ಮಾಡುವವರ ವಿರುದ್ಧ ಹಾಕಲಾಗುತ್ತದೆ. ಆರೋಪಿಯು ಜಾಮೀನು ಪಡೆಯಬಾರದು ಎಂಬುದು ಇದರ ಮೂಲ ಉದ್ದೇಶವಾಗಿದೆ.**

## ಯುವ ವಕೀಲೆ ಜೊತೆಗೆ ಯುವಕನ ಶವ ಪತ್ತೆ

• ಉದಯವಾಹಿನಿಮ ಬೆಂಗಳೂರು

ನೆಲಮಂಗಲದ ಶ್ರೀನಿವಾಸಪುರದ ತೋಟದ ಮನೆಯಲ್ಲಿ ಇಬ್ಬರ ಶವಗಳು ಪತ್ತೆಯಾಗಿವೆ. ನೇಣು ಬಿಗಿದ ಸ್ಥಿತಿಯಲ್ಲಿ ವಕೀಲೆ ರಮ್ಯಾ (27), ಪುನೀತ್ ಎನ್ನುವ ಯುವಕನ ಮೃತದೇಹಗಳು ಪತ್ತೆ ಯಾಗಿದ್ದು, ಸ್ಥಳೀಯರು ಬೆಚ್ಚಿಬಿದ್ದಿದ್ದಾರೆ. ನಿನ್ನೆ (ಏಪ್ರಿಲ್ 24) ಸಂಜೆ ಮೃತಪಟ್ಟಿರುವ ಶಂಕೆ ವ್ಯಕ್ತವಾಗಿದೆ. ಆದ್ರೆ, ಸಾವಿನ ಹಲವು ಅನುಮಾನಗಳಿಗೆ ಎಡೆಮಾಟಿಕೊಟ್ಟಿದೆ. ಈ ಬಗ್ಗೆ ನೆಲಮಂಗಲ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಬೇರೆ ಬೇರೆ ಆಯಾಮಾಗಳಲ್ಲಿ ತನಿಖೆ ಕೈಗೊಂಡಿದ್ದಾರೆ.

27 ವರ್ಷದ ರಮ್ಯ ಮೃತದೇಹ ನೆಲಮಂಗಲದ ಶ್ರೀನಿವಾಸಪುರದ ತೋಟದ ಮನೆಯಲ್ಲಿ ನೇಣುಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದೆ.



ಇನ್ನು ವಕೀಲೆ ರಮ್ಯ ಮನೆಯಲ್ಲಿ ವಾಸವಿದ್ದ ಪುನೀತ್ ಎಂಬಾತನ ಮೃತ ದೇಹ ಕೆಂಪಲಿಂಗನಹಳ್ಳಿಯ ಮನೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ಈ ಸಾವಿಗೆ ಕಾರಣ ನಿಗೂಢವಾಗಿದೆ.

ಮರಣೋತ್ತರ ಪರೀಕ್ಷೆಗೆ ಮೃತ ದೇಹ ನೆಲಮಂಗಲ ಸರ್ಕಾರಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ. ರಮ್ಯಾ ಸಾವಿನ ಸುತ್ತಲೂ ಅನುಮಾನಗಳು ಹುಟ್ಟಿಕೊಂಡಿದ್ದು, ಕುಟುಂಬಸ್ಥರು ಉದ್ಯಮಿ ದಿನೇಶ್ ಎಂಬಾತನ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾರೆ. ಸದ್ಯ ಪೊಲೀಸರು ಕುಟುಂಬಸ್ಥರ ದೂರಿನ ಮೇರೆಗೆ ಕೊಲೆ ಆರೋಪದ (103) ಅಡಿ ಎಫ್ ಐಆರ್ ದಾಖಲಿಸಿಕೊಂಡು ತನಿಖೆ ನಡೆಸಿದ್ದಾರೆ.

## ಅಗ್ರಿಗೇಟರ್ ಕಂಪನಿಗಳಿಂದ ದುಪ್ಪಟ್ಟು ಹಣ ವಸೂಲಿ

• ಉದಯವಾಹಿನಿ, ಬೆಂಗಳೂರು,

ಆನ್‌ಲೈನ್ ಅಗ್ರಿಗೇಟರ್ ಕಂಪನಿಗಳ ವಸೂಲಿಗೆ ಪ್ರಯಾಣಿಕರು ಹೈರಾಣಾಗಿದ್ದಾರೆ. ಈ ವಿಚಾರ ಗೊತ್ತಿದ್ದರೂ, ಸಾರಿಗೆ ಇಲಾಖೆ ಮಾತ್ರ ಮೌನಕ್ಕೆ ಶರಣಾಗಿದೆ. ರಾಜ್ಯದಲ್ಲಿ ಮುಂದಿನ ಆರು ವಾರದೊಳಗೆ ಬೈಕ್ ಟ್ಯಾಕ್ಸಿ ಕಾರ್ಯಚರಣೆಯನ್ನು ಸ್ಥಗಿತಗೊಳಿಸುವಂತೆ ಹೈಕೋರ್ಟ್ ಏಪ್ರಿಲ್ 2ರಂದು ಆದೇಶ ಹೊರಡಿಸಿತ್ತು. ಈ ಬೆನ್ನಲ್ಲೇ ಓಲಾ, ಊಬರ್ ಮತ್ತು ನಮ್ಮ ಯಾತ್ರಿ ಯಂತಹ ಅಗ್ರಿಗೇಟರ್ ಕಂಪನಿಗಳು ಪ್ರಯಾಣಿಕರಿಂದ ಹೆಚ್ಚಿನ ಹಣ ಪಡೆಯುತ್ತಿವೆ.

ಆನ್‌ಲೈನ್ ಸಂಸ್ಥೆಗಳು ಆಟೋ ಪ್ರಯಾಣ ದರವನ್ನು ಒನ್‌ಟು ತ್ರಿಬಲ್ ಪಡೆಯುತ್ತಿದ್ದರೂ ಸಾರಿಗೆ ಇಲಾಖೆ ಮಾತ್ರ ಮೌನಕ್ಕೆ ಶರಣಾಗಿದ್ದು, ಪ್ರಯಾಣಿಕರ ಆಕ್ರೋಶಕ್ಕೆ ಕಾರಣವಾಗಿದೆ. ನಿಯಮದ ಪ್ರಕಾರ ಮೊದಲ ಎರಡು ಕಿಲೋ ಮೀಟರ್ 30 ರೂ. ಪಡೆಯಬೇಕು. ನಂತರ ಪ್ರತೀ ಕಿಲೋ ಮೀಟರ್‌ಗೆ 15 ರೂಪಾಯಿ ಪಡೆಯಬೇಕು. ಉದಾಹರಣೆಗೆ, ಸೌಂತ್ ಎಂಡ್ ಟು ಯಡಿಯೂರು ಕೆರೆದೂರದ ಪ್ರಯಾಣಕ್ಕೆ ನಿಮಯದ ಪ್ರಕಾರ 30 ರೂ. ಪಡೆಯಬೇಕು. ಆದರೆ, 55 ರೂಪಾಯಿ ಪಡೆಯಲಾಗುತಿದೆ. ಮೆಜೆಸ್ಟಿಕ್‌ನಿಂದ ರಾಜಾಜಿನಗರ ದೂರದ ಪ್ರಯಾಣಕ್ಕೆ ನಿಯಮದ ಪ್ರಕಾರ 50-60 ರೂಪಾಯಿ ಪಡೆಯಬೇಕು.

ಆದರೆ, 93 ರೂಪಾಯಿ ವಸೂಲಿ ಮಾಡಲಾಗುತ್ತಿದೆ. ಸೌತ್ ಎಂಡ್ ಸರ್ಕಲ್‌ನಿಂದ ಮೆಜೆಸ್ಟಿಕ್‌ಗೆ ದೂರದ ಪ್ರಯಾಣಕ್ಕೆ ನಿಯಮದ ಪ್ರಕಾರ 90-100 ರೂಪಾಯಿ ಪಡೆಯಬೇಕು ಆದರೆ, 125 ರೂಪಾಯಿ ಪಡೆಯಲಾಗುತ್ತಿದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಸಾರಿಗೆ ಇಲಾಖೆಯ ಅಡಿಷನಲ್ ಕಮೀಷನರ್ ಮಲ್ಲಿಕಾರ್ಜುನ ಮಾತನಾಡಿ, ಅಗ್ರಿಗೇಟರ್ ಕಂಪನಿಗಳು ಪ್ರಯಾಣಿಕರಿಂದ ದುಪ್ಪಟ್ಟು ಹಣ ವಸೂಲಿ ಮಾಡಿದರೆ ಅಂತಹ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳುತ್ತೇವೆ ಎಂದಿದ್ದಾರೆ.

### ರಾಜ್ಯದಲ್ಲಿ ಅನಧಿಕೃತವಾಗಿ ನೆಲೆಸಿರುವ ಪಾಕಿಸ್ತಾನಿಗಳ ವಿರುದ್ಧ ಕ್ರಮ: ಪರಮೇಶ್ವರ್

# ಇದು ರಾಜಕೀಯ ಮಾಡುವ ವಿಚಾರ ಅಲ್ಲ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪಾಕಿಸ್ಥಾನ ಪ್ರಜೆಗಳು ಭಾರತ ತೊರೆಯಲು ಕೇಂದ್ರ ಸರ್ಕಾರ ಸೂಚನೆ ನೀಡಿದೆ. ರಾಜ್ಯದಲ್ಲಿ ಅನಧಿಕೃತವಾಗಿ ಪಾಕಿಸ್ತಾನ ಪ್ರಜೆಗಳು ನೆಲೆಸಿದ್ದರೆ ಕ್ರಮ ಕೈಗೊಳ್ಳಲಾಗುವುದು. ಸ್ಲೀಪರ್ ಸೆಲ್‌ಗಳ ಪತ್ತೆ ಕಾರ್ಯವೂ ನಡೆಯುತ್ತಿದೆ. ಸ್ಲೀಪರ್ ಸೆಲ್‌ಗಳು ಪತ್ತೆಯಾದರೆ ಮಾಹಿತಿ ನೀಡುತ್ತೇವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಹೇಳಿದರು.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ದೇಶದ ಭದ್ರತೆ ವಿಚಾರವಾಗಿ ಕೇಂದ್ರ ಸರ್ಕಾರ ಈ ನಿರ್ಧಾರ ಕೈಗೊಂಡಿದೆ. ಕೇಂದ್ರ ಸರ್ಕಾರ ಮತ್ತಷ್ಟು ಕಠಿಣ ನಿರ್ಧಾರ ಕೈಗೊಳ್ಳಬಹುದು. ಕೇಂದ್ರ ಸರ್ಕಾರ ಕೈಗೊಳ್ಳುವ ನಿರ್ಧಾರಗಳ ಬಗ್ಗೆ ಮಾತನಾಡಲ್ಲ ಎಂದರು.


ಕೇಂದ್ರ ಸರ್ಕರ ಕೈಗೊಂಡಿರುವ ನಿರ್ಧಾರಗಳ ವಿಚಾರವಾಗಿ ನಾನು ಯಾರನ್ನೂ ದೂರುವುದಿಲ್ಲ, ಮಾತನಾಡಲ್ಲ. ಇದು ರಾಜಕೀಯ ಮಾಡುವ ವಿಚಾರವಲ್ಲ. ಈ ವಿಚಾರದಲ್ಲಿ ಯಾರೂ ರಾಜಕೀಯ ಮಾಡಬಾರದು ಎಂದು



### ಕೇಂದ್ರ ಸರಕಾರಕ್ಕೆ ಬೆಂಬಲ



**ಕಾಶ್ಮೀರದಲ್ಲಿ ಇಂತಹ ಘಟನೆ ಆಗಬಾರದಿತ್ತು. ಆದರೆ, ಘಟನೆ ನಡೆದಾಗ ಅಲ್ಲಿಯ ಜನತೆ ಪ್ರವಾಸಿಗರಿಗೆ ಸಹಕಾರ ನೀಡಿದ್ದಾರೆ. ಭಯೋತ್ಪಾದನೆಯನ್ನು ಎಲ್ಲಾರೂ ಖಂಡಿಸಬೇಕು. ನಾವೆಲ್ಲ ಭಾರತೀಯರು ಪಕ್ಷಭೇದ ಮರೆತು ಕೇಂದ್ರ ಸರಕಾರಕ್ಕೆ ಬೆಂಬಲ ನೀಡುತ್ತೇವೆ. ಇಂತಹ ಘಟನೆ ಮರು ಕಳುಹಿಸದಂತೆ ಎಚ್ಚರಿಕೆ ವಹಿಸಬೇಕು ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಹೇಳಿದರು.**



**ಹೊರದೇಶದಿಂದ ಬಂದು ಶಾಂತಿ ಕದಡುವ ಕೆಲಸ ಮಾಡಿದ್ದಾರೆ. ಅವರನ್ನು ಮುಗಿಸುವ ಕೆಲಸ ಆಗಬೇಕು. ಕೇಂದ್ರ ಸರ್ಕಾರ ಈಗಾಗಲೇ ಈ ಕೆಲಸ ಮಾಡುತ್ತಿದೆ. ಕೇಂದ್ರ ಸರ್ಕಾರಕ್ಕೆ ನಮ್ಮ ಸಂಪೂರ್ಣ ಸಹಕಾರ ಇದೆ. ಪಹಲ್ಗಾಮ್ ಉಗ್ರರ ದಾಳಿ ಖಂಡಿಸಿ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರದ್ಧಾಂಜಲಿ ಸಲ್ಲಿಸಿ ಅಂತ ಜಿಲ್ಲಾಧ್ಯಕ್ಷರುಗಳಿಗೆ ಹೇಳಿದ್ದೇನೆ. ಈ ಘಟನೆಯನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸುತ್ತದೆ. ನಾವು ಈ ದೇಶದ ಐಕ್ಯತೆ, ಶಾಂತಿ ಕಾಪಾಡಲು ಕೇಂದ್ರ ಸರ್ಕಾರಕ್ಕೆ ಸಂಪೂರ್ಣ ಬೆಂಬಲ ನೀಡುತ್ತೇವೆ**
**-ಡಿ.ಕೆ.ಶಿವಕುಮಾರ್, ಡಿಸಿಎಂ**

ಉಪಮುಖ್ಯ ಮಂತ್ರಿ ಡಿಕೆ ಶಿವಕುಮಾರ್ ಹೇಳಿದರು.

# ಚಿನ್ನ ವಂಚನೆ ಪ್ರಕರಣ: ಐಶ್ವರ್ಯ ಗೌಡ ಇಡಿ ವಶ

**ವಿನಯ್ ಕುಲಕರ್ಣಿ ಮನೆಯಲ್ಲಿನ ಶೋಧ ಅಂತ್ಯ** | **ಎಸಿಪಿ ಭರತ್ ರೆಡ್ಡಿ ಪತ್ರ**

• ಉದಯವಾಹಿನಿ, ಬೆಂಗಳೂರು

ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಹೆಸರೇಳಿಕೊಂಡು ಕೋಟ್ಯಂತರ ರೂ. ಮೌಲ್ಯದ ಚಿನ್ನ ವಂಚನೆ ಪ್ರಕರಣಕ್ಕೆ ಸಂಬಂಧಿಸಿ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ಆರೋಪಿ ಐಶ್ವರ್ಯ ಗೌಡ ಅವರನ್ನು ವಶಕ್ಕೆ ಪಡೆದಿದ್ದಾರೆ. ಮಂಡ್ಯ ಜಿಲ್ಲೆ ಮಳವಳ್ಳಿ ತಾಲ್ಲೂಕಿನ ಕಿರುಗಾವಲು ಗ್ರಾಮದಲ್ಲಿರುವ ಐಶ್ವರ್ಯ ಗೌಡ ನಿವಾಸ ಮತ್ತು ಗೊರಗುಂಟೆಪಾಳ್ಯದಲ್ಲಿರುವ ಫ್ಲ್ಯಾಟ್ ಮೇಲೆ ಇಡಿ ಅಧಿಕಾರಿಗಳು ಏ.24ರಂದು ದಾಳಿ ನಡೆಸಿದ್ದರು.

ಈ ವೇಳೆ ಇಡಿ ಅಧಿಕಾರಿಗಳು ಮಹತ್ವದ ದಾಖಲೆಗಳನ್ನು ಜಪ್ತಿ ಮಾಡಿಕೊಂಡಿದ್ದಾರೆ. ಇನ್ನು, ಇಡಿ ಅಧಿಕಾರಿಗಳು ಬೆಂಗಳೂರಿನ ಆರ್.ಆರ್.ನಗರದ ಕಾಂಗ್ರೆಸ್ ಮುಖಂಡ ತಿಬ್ಬೇಗೌಡ ನಿವಾಸದ ಮೇಲೂ ದಾಳಿ ನಡೆಸಿದ್ದರು. ತಿಬ್ಬೇಗೌಡ ಅವರ ಬ್ಯಾಂಕ್ ಅಕೌಂಟ್ಸ್ ಡೀಟೆಲ್ಸ್, ದಾಖಲೆಗಳನ್ನು ಇಡಿ ಅಧಿಕಾರಿಗಳು ಕೊಂಡೊಯ್ದಿದ್ದಾರೆ. ಐಶ್ವರ್ಯ ಗೌಡ ಅವರ ಬೆನ್ಜ್ ಕಾರು ಬಳಸುತ್ತಿದ್ದ ಕಾಂಗ್ರೆಸ್ ಶಾಸಕ ವಿನಯ ಕುಲಕರ್ಣಿ ಅವರ ಬೆಂಗಳೂರಿನ ಮನೆ ಮೇಲೂ ಇಡಿ ಅಧಿಕಾರಿಗಳು ದಾಳಿ ಮಾಡಿದ್ದರು. ಸತತ 28 ಗಂಟೆಗಳ ಕಾಲ ವಿನಯ ಕುಲಕರ್ಣಿ ಅವರ ಮನೆಯಲ್ಲಿ ಇಡಿ ಅಧಿಕಾರಿಗಳು ಶೋಧಕಾರ್ಯ ನಡೆಸಿದರು.




**ಏನಿದು ಪ್ರಕರಣ?:** ಆರೋಪಿ ಐಶ್ವರ್ಯ ಗೌಡ ತನಗೆ 3 ಕೋಟಿ 25 ಲಕ್ಷ ನಗದು, 430 ಗ್ರಾಂ ಚಿನ್ನಾಭರಣ ಪಡೆದು ವಂಚಿಸಿದ್ದಾರೆಂದು ಆರ್.ಆರ್.ನಗರ ಠಾಣೆಯಲ್ಲಿ ತಿಬ್ಬೇಗೌಡ ಪತ್ನಿ ಶಿಲ್ಪಗೌಡ ದೂರು ನೀಡಿದ್ದರು. ತಾನು ಮಾಜಿ ಸಂಸದ ಡಿ.ಕೆ.ಸುರೇಶ್ ಅವರ ಸಹೋದರಿ, ರಿಯಲ್ ಎಸ್ಟೇಟ್ ವಿಲ್ಲಾ ನಿರ್ಮಾಣ ಮಾಡುತ್ತೇನೆ. ಕಡಿಮೆ ಬೆಲೆಗೆ ಚಿನ್ನಾಭರಣ ಕೊಡಿಸುತ್ತೇನೆ ಅಂತ ಐಶ್ವರ್ಯ ಗೌಡ ಹಲವರಿಗೆ ವಂಚಿಸಿದ್ದರು. ಐಶ್ವರ್ಯ ಗೌಡ ಅಕ್ರಮ ಹಣ ವಹಿವಾಟು ಸಂಬಂಧ ಐಟಿ, ಇಡಿಗೆ ಬ್ಯಾಟರಾಯನಪುರ ಎಸಿಪಿ ಭರತ್ ರೆಡ್ಡಿ ಪತ್ರ ಬರೆದಿದ್ದರು.

### ಐಶ್ವರ್ಯ ಗೌಡ ಕಾರು ಬಳಕೆ

**ಐಶ್ವರ್ಯಗೌಡ ಪತಿ ಹರೀಶ್ ಹೆಸರಿನಲ್ಲಿರುವ ಬೆಂಝ್ ಕಾರನ್ನು ಮಾಜಿ ಸಚಿವ ವಿನಯ್ ಕುಲಕರ್ಣಿ ಬಳಸಿದ್ದ ಆರೋಪ ಕೇಳಿಬಂದಿತ್ತು. ಈ ಕಾರನ್ನು ಎಸಿಪಿ ಭರತ್ ರೆಡ್ಡಿ ಜಪ್ತಿ ಮಾಡಿದ್ದರು. ವಾರಾಹಿ ವರ್ಲ್ಡ್ ಆಫ್ ಗೋಲ್ಡ್ ಜುವೆಲ್ಲರಿಯ ಮಾಲೀಕರಿಗೆ ಐಶ್ವರ್ಯ ಗೌಡ ವಂಚನೆ ಎಸಗಿದ್ದಾರೆ ಎಂಬ ಆರೋಪವಿದೆ. ಇಷ್ಟೇ ಅಲ್ಲದೆ, ಮಾಜ ಸಂಸದ ಡಿಕೆ ಸುರೇಶ್ ಹೆಸರಿನಲ್ಲಿ ವಂಚನೆ ಎಸಗಿದ್ದರು ಎನ್ನಲಾಗಿದೆ. ಈ ವಿಚಾರವಾಗಿ ಬೆಂಗಳೂರು ನಗರ ಪೊಲೀಸ್ ಆಯುಕ್ತರಿಗೆ 2024ರ ಡಿ.ನಲ್ಲೇ ಡಿಕೆ ಸುರೇಶ್ ದೂರು ನೀಡಿದ್ದರು.**

ಪ್ರಕರಣ ಸಂಬಂಧ 2024 ರ ಡಿಸೆಂಬರ್‌ನಲ್ಲಿ ಐಶ್ವರ್ಯ ಗೌಡ ಮತ್ತು ಆಕೆಯ ಪತಿ ಕೆಎನ್ ಹರೀಶ್ ಅವರನ್ನು ಬಂಧಿಸಲಾಗಿತ್ತು. ಅದಾದ ನಂತರ ಐಶ್ವರ್ಯ ಗೌಡ ಅವರನ್ನು ನ್ಯಾಯಾಂಗ ಬಂಧನಕ್ಕೆ ನೀಡಿ ಕೋರ್ಟ್ ಆದೇಶಿಸಿತ್ತು.

# ಗ್ಯಾರಂಟಿ ಅನುಷ್ಠಾನದಲ್ಲಿ ಲೋಪವಾದರೆ ಅಧಿಕಾರಿಗಳೇ ಹೊಣೆ: ದಿನೇಶ್

• ಉದಯವಾಹಿನಿ, ಶ್ರೀರಂಗಪಟ್ಟಣ

ರಾಜ್ಯ ಸರ್ಕಾರ ಜನರ ಕಲ್ಯಾಣಕ್ಕಾಗಿ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದು, ಇವುಗಳ ಅನುಷ್ಠಾನದಲ್ಲಿ ಲೋಪ ಕಂಡು ಬಂದರೆ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಲ್. ದಿನೇಶ್ ಎಚ್ಚರಿಸಿದರು. ಪಟ್ಟಣದ ಪುರಸಭೆ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು. ಹಸಿವುಮುಕ್ತ ಕರ್ನಾಟಕ ಮಾಡಬೇಕು ಎಂಬ ಉದ್ದೇಶದಿಂದ ಸರ್ಕಾರ 'ಅನ್ನಭಾಗ್ಯ' ಯೋಜನೆಯನ್ನು ಜಾರಿಗೆ ತಂದಿದ್ದು, ಆಹಾರ ಮತ್ತು ನಾಗರಿಕ ಪೂರೈಕೆ ಇಲಾಖೆ ಅಧಿಕಾರಿಗಳು ಎಲ್ಲಾ ಅರ್ಹರಿಗೂ ಪಡಿತರ ದೊರೆಯುವಂತೆ ನೋಡಿಕೊಳ್ಳಬೇಕು. 'ಶಕ್ತಿ' ಯೋಜನೆಯಡಿ ಸಾರಿಗೆ ಸಂಸ್ಥೆ ಬಸ್‌ಗಳಲ್ಲಿ ಮಹಿಳೆಯರು ಉಚಿತವಾಗಿ ಪ್ರಯಾಣಿಸಲು ಅವಕಾಶ ಇದ್ದರೂ ಕೆಲವು ಕಡೆಗೆ ಸಾರಿಗೆ ಸಂಸ್ಥೆ ಬಸ್‌ಗಳ ಸಂಚಾರ ಇಲ್ಲ ಎಂಬ ದೂರುಗಳಿವೆ. ಪಟ್ಟಣದಿಂದ ಗುಂಬಸ್ ಮಾರ್ಗವಾಗಿ ನಿಮಿಷಾಂಬ ದೇವಾಲಯದವರೆಗೆ ಹಾಗೂ ಪಾಲಹಳ್ಳಿ ಮಾರ್ಗವಾಗಿ ಬೆಳಗೊಳ ವರೆಗೆಬಸ್‌ಗಳು ಸಂಚರಿಸುವಂತೆ ನೋಡಿಕೊಳ್ಳಿ' ಎಂದು ಅಧಿಕಾರಿಗಳಿಗೆ ಸೂಚಿಸಿದರು.

'ಯುವನಿಧಿ' ಯೋಜನೆಗೆ ಇದುವರೆಗೆ ಹೆಸರು ನೊಂದಾಯಿಸದ ನಿರುದ್ಯೋಗಿಗಳ ಪಟ್ಟಿಯನ್ನು ಸಿದ್ದಪಡಿಸಿ ಯೋಜನೆ ಪ್ರಯೋಜನ ಸಿಗುವಂತೆ ಕ್ರಮ ವಹಿಸಬೇಕು. 'ಗೃಹಲಕ್ಷ್ಮಿ' ಯೋಜನೆಯ ಹಣ ಸಕಾಲಕ್ಕೆ ಬಾರದಿದ್ದರೆ ಮೇಲಧಿಕಾರಿಗಳು, ಸಮಿತಿಯ ಗಮನಕ್ಕೆ ತರಬೇಕು. ಹೊಸ ಮನೆ ನಿರ್ಮಿಸಿರುವವರು, ಬಾಡಿಗೆಗೆ ಮನೆ ಪಡೆದಿರುವವರನ್ನು ಗೃಹ ಜ್ಯೋತಿ ಯೋಜನೆಗೆ ಸೇರಿಸಬೇಕು ಎಂದು ಎಂ.ಎಲ್. ದಿನೇಶ್ ತಿಳಿಸಿದರು. ತಾಲ್ಲೂಕು ಯೋಜನಾಧಿಕಾರಿ ತ್ರಿವೇಣಿ, ಪುರಸಭೆ ಮುಖ್ಯಾಧಿಕಾರಿ ಎಂ. ರಾಜಣ್ಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಅಮೃತಾ ಕುರಣೆ, ಆಹಾರ ಶಿರಸ್ತೇದಾರ್ ರಮಾ ಇನ್ನಿತರರಿದ್ದರು.

# ಮೈಸೂರಿಗೆ ಹೊಸ ಯೋಜನೆಗಳು ಹಣ ಲೂಟಿ ಹೊಡೆಯಲು ಮಾರ್ಗ

## ಕೆಆರ್‌ಎಸ್ ಅಭಿವೃದ್ಧಿಗೆ ಹಣ ನೀಡಿದರೆ ಅಧಿಕಾರಿಗಳು ದುರುಪಯೋಗ ಮಾಡಿಕೊಳ್ಳುತ್ತಾರೆ ವಿಶ್ವನಾಥ್

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

**ಕ್ಯಾಬಿನೆಟ್ ಸಭೆ ಟೀಕಿಸಿದ ವಿಶ್ವನಾಥ್**

ಕ್ಯಾಬಿನೆಟ್ ಸಭೆ ಹೊರ ಜಿಲ್ಲೆಗಳಲ್ಲಿ ಮಾಡುವುದರಿಂದ ದುಂದುವೆಚ್ಚ ಆಗುತ್ತದೆ ಎಂದು ವಿಧಾನ ಪರಿಷತ್ ಸದಸ್ಯ ಎಚ್ ವಿಶ್ವನಾಥ್ ಟೀಕಿಸಿದ್ದಾರೆ. ಅವರು ಮೈಸೂರಿನ ಜಲ ದರ್ಶಿನಿ ಅತಿಥಿ ಗೃಹದಲ್ಲಿ ಸುದ್ದಿಗೋಷ್ಠಿ ನಡೆಸಿದರು. ಸಚಿವ ಸಂಪುಟ ಸಭೆಗಳ ದುಂದುವೆಚ್ಚ ಬಗ್ಗೆ ಅಸಮಾಧಾನ ವ್ಯಕ್ತ ಪಡಿಸಿದರು. ನಿನ್ನೆ ಸಿಎಂ ಸಿದ್ದರಾಮಯ್ಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಸಚಿವ ಸಂಪುಟ ಸಭೆ ನಡೆಸಿದರು. ಈ ಹಿಂದೆ ಯಡಿಯೂರಪ್ಪ ಮತ್ತು ಸಿದ್ದರಾಮಯ್ಯ ಬೇರೆ ಬೇರೆ ಕಡೆ ಸಭೆ ಮಾಡಿದ್ದರು. ಆದರೆ ಯಾವುದೇ ಪ್ರಯೋಜನವಾಗಿಲ್ಲ ಎಂದು ವಿಶ್ವನಾಥ್ ಟೀಕಿಸಿದರು. ಸಚಿವ ಸಂಪುಟ ಸಭೆಗಳನ್ನು ಬೇರೆ ಕಡೆ ನಡೆಸುವುದರಿಂದ ದುಂದುವೆಚ್ಚವಾಗುತ್ತದೆ ಎಂದು ಹೇಳಿದರು.

ಕಾವೇರಿ ಆರತಿಗಾಗಿ 93 ಕೋಟಿ ರೂಪಾಯಿ ನೀಡುವುದಾಗಿ ಸರ್ಕಾರ ಹೇಳಿದೆ. ಆದರೆ ಕೆಆರ್‌ಎಸ್ ಈ ಹಿಂದೆ ಇದ್ದ ಹಾಗೆ ಇದೆಯಾ ಎಂದು ಪ್ರಶ್ನಿಸಿದರು. ಯೋಜನೆಗಳಿಗೆ ಹಣ ನೀಡಿದರೆ ಅಧಿಕಾರಿಗಳು ದುರುಪಯೋಗ ಮಾಡಿಕೊಳ್ಳುತ್ತಾರೆ ಎಂದು ಆರೋಪಿಸಿದರು. ಕೆಆರ್‌ಎಸ್ ಅನ್ನು ನೀರಾವರಿ ಇಲಾಖೆಯಿಂದ ಪ್ರವಾಸೋದ್ಯಮ ಇಲಾಖೆಗೆ ವರ್ಗಾಯಿಸಬೇಕು ಎಂದು ಆಗ್ರಹಿಸಿದರು.ಇಸ್ಲಾಮಿಕ್ ರಾಷ್ಟ್ರಗಳು ಧರ್ಮಾಧಾರಿತವಾಗಿ ನಡೆಯುತ್ತಿವೆ. ಪಾಕಿಸ್ತಾನದಲ್ಲಿ ಧರ್ಮದ ಆಧಾರದ ಮೇಲೆ ಆಡಳಿತ ನಡೆಯುತ್ತಿದೆ. ಆದರೆ ಭಾರತ ಜಾತ್ಯಾತೀತ ರಾಷ್ಟ್ರ. ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಉಗ್ರರು ದಾಳಿ ನಡೆಸಿದ ನಂತರ ಪ್ರಧಾನಿ ಮೋದಿ ಕ್ರಮ ಕೈಗೊಂಡಿದ್ದಾರೆ. ಮೋದಿ ಅವರ ನಿರ್ಧಾರಕ್ಕೆ ಎಲ್ಲರೂ ಬೆಂಬಲ ನೀಡಬೇಕು ಎಂದು ವಿಶ್ವನಾಥ್ ಹೇಳಿದರು. ರಾಬರ್ಟ್ ವಾದ್ರಾ ಅವರ ಹೇಳಿಕೆ ಅಪ್ರಸ್ತುತ ಎಂದರು. ಪ್ರಿಯಾಂಕಾ ಗಾಂಧಿ ಪತಿ ಎಂದು ಏನೇನೋ ಮಾತನಾಡಬಾರದು ಎಂದು ಟೀಕಿಸಿದರು.

**ರಾಬರ್ಟ್ ವಾದ್ರಾ ಹೇಳಿದ್ದೇನು?:** ಭಾರತದಲ್ಲಿ ಹಿಂದೂ ಮತ್ತು ಮುಸ್ಲಿಮರ ನಡುವೆ ಹೆಚ್ಚುತ್ತಿರುವ ವಿಭಜನೆಯ ಕಾರಣದಿಂದ ದಾಳಿಯಾಗಿದೆ. ಕೇಂದ್ರ ಸರ್ಕಾರ ಹಿಂದುತ್ವ ಬೆಳೆಸುವಲ್ಲಿ ತೊಡಗಿದೆ ಇತ್ತ ಅಲ್ಪಸಂಖ್ಯಾತರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಉಗ್ರದಾಳಿಯನ್ನು ಸಮರ್ಥಿಸುವ ರೀತಿ ರಾಬರ್ಟ್ ವಾದ್ರಾ ಹೇಳಿಕೆ ಕೊಟ್ಟಿದ್ದರು.

**ಕ್ರಿಕೆಟ್ ಸ್ಟೇಡಿಯಂ ಮುಖ್ಯವಾಗಿ ಆಗಲಿ:** ಮೈಸೂರಿನಲ್ಲಿ ಕ್ರಿಕೆಟ್ ಸ್ಟೇಡಿಯಂ ನಿರ್ಮಾಣದ ಬಗ್ಗೆ ಮಾತನಾಡಿದರು. ತುಂಬಾ ವರ್ಷಗಳಿಂದ ಸ್ಟೇಡಿಯಂ ಬೇಕು ಎಂಬ ಕೂಗು ಕೇಳಿ ಬರುತ್ತಿದೆ. ಕ್ರೀಡೆ ದೇಶದ ಅಭಿವೃದ್ಧಿಗೆ ಸಹಕಾರಿ. ಆರ್ಥಿಕವಾಗಿ ಟೂರಿಸಂ ಬಲಪಡಿಸಲು ಕ್ರೀಡೆ ಮುಖ್ಯ. ಕ್ರಿಕೆಟ್ ಅನ್ನು ಕೋಟಿ ಕೋಟಿ ಜನರು ನೋಡುತ್ತಾರೆ. ಹೀಗಾಗಿ 26 ಎಕರೆ ಭೂಮಿ ಕೊಟ್ಟು ಬೇಗ ಸ್ಟೇಡಿಯಂ ಕೆಲಸ ಆಗಬೇಕು. ಸ್ಟೇಡಿಯಂ ಮಾಡುವ ನಿರ್ಧಾರವನ್ನು ಸ್ವಾಗತಿಸುತ್ತೇನೆ ಎಂದು ಹೇಳಿದರು.

**ವೈಟ್ ಟಾಪಿಂಗ್ ಲೂಟಿ ಮಾಡುವ ಯೋಜನೆ**

ಮೈಸೂರಿನಲ್ಲಿ ರಸ್ತೆ ವೈಟ್ ಟ್ಯಾಪಿಂಗ್ ಮಾಡುವ ವಿಚಾರದ ಬಗ್ಗೆ ಮಾತನಾಡಿದರು. ಲೋ ಲೆವೆಲ್ ಏರಿಯಾದಲ್ಲಿ ವೈಟ್ ಟ್ಯಾಪಿಂಗ್ ಮಾಡಬೇಕು. ಮೈಸೂರಿನಲ್ಲಿ ಟ್ಯಾಪಿಂಗ್ ಮಾಡುವುದು ಲೂಟಿ ಮಾಡುವ ಕೆಲಸ ಎಂದು ಆರೋಪಿಸಿದರು. ಇದು ಶಾಸಕರಿಗೆ ಅನುಕೂಲ ಮಾಡಿಕೊಡುವ ಯೋಜನೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸಿದರು.

# ಮಿನಿ ನ್ಯೂಸ್

## ನಾನು ಒಂದು ಧರ್ಮದ ಪರ ಅಲ್ಲ

• ಉದಯವಾಹಿನಿ, ಚಾಮರಾಜನಗರ

ನಾನು ಸಿಎಂ ಆಗಿರುವವರೆಗೆ ಎಲ್ಲಾ ವರ್ಗದ ಜನರ ಪರವಾಗಿ ಇರುತ್ತೇನೆ. ನಾನು ಒಂದು ಧರ್ಮದ ಪರವಾಗಿ ಇಲ್ಲ ಎಂದು ಸಿಎಂ ಸಿದ್ದರಾಮಯ್ಯ ಸ್ಪಷ್ಟನೆ ನೀಡಿದರು. ಕನಕಭವನದ ಗುದ್ದಲಿ ಪೂಜೆ ನೆರವೇರಿಸಿ, ವೇದಿಕೆಯಲ್ಲಿ ಮಾತನಾಡಿದ ಅವರು, ಇಂದು ಜಾತಿಗೆ ಅಂಟಿಕೊಂಡಿಲ್ಲ. ನಮ್ಮ ಜನರನ್ನು ಮರೆಯುವುದಿಲ್ಲ. ಸಮಾಜದಲ್ಲಿ ಒಂದು ಧರ್ಮ, ಜಾತಿಯಿಂದ ನ್ಯಾಯ ಕೊಡಲು ಸಾಧ್ಯವಿಲ್ಲ. ಎಲ್ಲರ ಬೆಂಬಲ ಹಾಗೂ ಸಹಕಾರ ಮುಖ್ಯವಾಗಿದೆ. ಇಡೀ ರಾಜ್ಯದಲ್ಲಿ ಅಹಿಂದ ವರ್ಗದ ಜನರು ಹಾಗೂ ಬಡವರು ಸಹಾಯ ಮಾಡಿದ್ದಾರೆ. ಸಿಎಂ ಆಗುವುದು ಅಷ್ಟು ಸುಲಭದ ಕೆಲಸವಲ್ಲ ಎಂದರು.

ಚಾಮರಾಜನಗರವು ಬಹಳ ಹಿಂದುಳಿದ ಜಿಲ್ಲೆಯಾಗಿದೆ. ಈ ಜಿಲ್ಲೆಯಲ್ಲಿ ಶಿಕ್ಷಣ ಕಡಿಮೆ. ಶಿಕ್ಷಣಕ್ಕೆ ಆದ್ಯತೆ ಕೊಡಬೇಕಾಗಿದೆ. ಸಮುದಾಯ ಭವನದಲ್ಲಿ ಹಾಸ್ಟೆಲ್ ಮತ್ತು ಶಿಕ್ಷಣ ಭವನವನ್ನು ಮಾಡಬೇಕು. ಅಲ್ಲದೇ ಚಾಮರಾಜನಗರದ ಎಲ್ಲಾ ಅಹಿಂದ ವರ್ಗದ ಜನರು ಮುಖ್ಯವಾಹಿನಿಗೆ ಬರಬೇಕು. ಇದಕ್ಕೆ ಸರ್ಕಾರ ಅನೇಕ ಕಾರ್ಯಕ್ರಮ ಮಾಡಿದೆ ಎಂದು ಹೇಳಿದರು. ಶಕ್ತಿ ಯೋಜನೆಯಡಿ ಎಲ್ಲಾ ಜಾತಿಯ ಹೆಣ್ಣು ಮಕ್ಕಳು ಬಸ್‌ನಲ್ಲಿ ಉಚಿತವಾಗಿ ಓಡಾಡಬಹುದು. ಅದಕ್ಕೆ ಬಡತನ ಶ್ರೀಮಂತಿಕೆ ಇಲ್ಲ. ಎಲ್ಲಾ ಪಾರ್ಟಿ, ಧರ್ಮದ ಮಹಿಳೆಯರು ಬಸ್‌ನಲ್ಲಿ ಉಚಿತ ಪ್ರಯಾಣ ಮಾಡಬಹುದು ಎಂದರು.

## ಪತ್ತಿನ ಸಹಕಾರ ಸಂಘ ಸ್ಥಾಪನೆಗೆ ಏಕಪಕ್ಷೀಯ ಧೋರಣೆ: ಆರೋಪ

• ಉದಯವಾಹಿನಿ, ಪಾವಗಡ

ತಾಲ್ಲೂಕಿನ ಗುಜ್ಜನಡು ಗ್ರಾಮದಲ್ಲಿ ನಿಯಮಾವಳಿ ಉಲ್ಲಂಘಿಸಿ ಕೃಷಿ ಪತ್ತಿನ ಸಹಕಾರ ಸಂಘ ಆರಂಭಿಸುವ ಕಸರತ್ತು ನಡೆಸಲಾಗುತ್ತಿದೆ ಎಂದು ಕೆ.ಟಿ.ಹಳ್ಳಿ ಕೃಷಿಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಆರ್. ಭೀಮಯ್ಯ ಆರೋಪಿಸಿದರು. ಗ್ರಾಮದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮದಲ್ಲಿ ನೂತನ ಸಹಕಾರಿ ಸಂಘ ಸ್ಥಾಪನೆಗೆ ಸಂಬಂಧಿಸಿದಂತೆ ಗುರುವಾರ ಏಕಾಏಕಿ ಡಿಸಿಸಿ ಬ್ಯಾಂಕ್ ಸಿಬ್ಬಂದಿಯನ್ನು ಕರೆಸಿ ತಮಗಿಷ್ಟ ಬಂದವರನ್ನು ಸೇರಿಸಿಕೊಂಡು ಸಭೆ ನಡೆಸಲಾಗಿದೆ. ರಾಜಕೀಯ ಪಕ್ಷದ ಏಜೆಂಟರಂತೆ ಅಧಿಕಾರಿಗಳು ವರ್ತಿಸುತ್ತಿರುವುದು ವಿಪರ್ಯಾಸ' ಎಂದು ಆರೋಪಿಸಿದರು.

ಸರ್ಕಾರದ ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿ ಏಕಪಕ್ಷೀಯ ನಿರ್ಧಾರಗಳೊಂದಿಗೆ ಪರಿಶಿಷ್ಟ ಜಾತಿ, ಪಂಗಡದವರನ್ನು ಕಡೆಗಣಿಸಲಾಗಿದೆ. ಕೂಡಲೇ ಜಿಲ್ಲಾಮಟ್ಟದ ಅಧಿಕಾರಿಗಳು ಗ್ರಾಮದಲ್ಲಿ ಸಭೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಹಕಾರಿ ಸಂಘದ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಸದಸ್ಯರು, ಸಹಕಾರಿ ಸಂಘದಲ್ಲಿರುವ ಸದಸ್ಯರುಗಳನ್ನು ಪರಿಗಣಿಸದೆ ಸಭೆ ನಡೆಸಿರುವುದು ರೈತರಲ್ಲಿ ಗೊಂದಲ ಮೂಡಿಸಿದೆ ಎಂದು ಗ್ರಾಮದ ಅಶೋಕ್ ಕುಮಾರ್ ಆರೋಪಿಸಿದರು.

## ಕಾರ್ಯಾಚರಣೆ ನಡುವೆಯೇ ಕರು ಮೇಲೆ ಹುಲಿ ದಾಳಿ

• ಉದಯವಾಹಿನಿ, ಗೋಣಿಕೊಪ್ಪಲು

ಪೊನ್ನಂಪೇಟೆ ತಾಲ್ಲೂಕಿನ ತೆರಾಲು ಗ್ರಾಮದಲ್ಲಿ ಹುಲಿ ಸೆರೆಗೆ ಅರಣ್ಯ ಇಲಾಖೆ ಎರಡು ಸಾಕಾನೆಗಳ ಸಹಾಯದೊಂದಿಗೆ ಕಳೆದ ಶನಿವಾರದಿಂದ ಕಾರ್ಯಾಚರಣೆ ನಡೆಸುತ್ತಿರುವ ಬೆನ್ನಲ್ಲೆ ಒಂದು ಕಿಲೋಮೀಟರ್ ವ್ಯಾಪ್ತಿಯಲ್ಲಿ ಕರು ಮೇಲೆ ದಾಳಿ ನಡೆಸಿ ಕೊಂದು ಹಾಕಿದೆ. ಗ್ರಾಮದ ಬೊಳ್ಳರ ಎಂ.ಚಿಣ್ಣಪ್ಪ ಕೊಟ್ಟಿಗೆಗೆ ಗುರುವಾರ ಮುಂಜಾನೆ ಆರು ಗಂಟೆ ವೇಳೆಗೆ ಹಸು ಅರಚುವ ಶಬ್ದ ಕೇಳಿ ನೋಡಿದಾಗ ಕರುವನ್ನು ಹುಲಿ ಎಳೆದೊಯ್ದಿರುವುದು ಕಂಡು ಬಂದಿದೆ.

ನಂತರ ಪರಿಶೀಲನೆ ನಡೆಸಿದಾಗ ಸಮೀಪದ ಕಾಫಿ ತೋಟದ ಹಳ್ಳದಲ್ಲಿ ಕರುವನ್ನು ಭಾಗಶಃ ತಿಂದು ಹಾಕಿದೆ. ಸುದ್ದಿ ತಿಳಿದೊಡನೆ ಸ್ಥಳಕ್ಕೆ ರಾಜ್ಯ ವನ್ಯಜೀವಿ ಸಂಘದ ಸದಸ್ಯ ಸಂಕೇತ್ ಪೂವಯ್ಯ, ಕಾರ್ಯಾಚರಣೆ ಸ್ಥಳ್ಳೆ ಭೇಟಿ ನೀಡಿ ಸ್ಥಳ ಬದಲಾಯಿಸುವಂತೆ ಸೂಚಿಸಿದರು. ಜತೆಗೆ ಸುತ್ತಮುತ್ತ ಕ್ಯಾಮರಾ ಅಳವಡಿಸುವಂತೆ ಹೇಳಿದರು. ಈ ಹಿನ್ನೆಲೆ ಅರಣ್ಯ ಇಲಾಖೆ ಕಾರ್ಯಾಚರಣೆ ತಂಡ ಹಲವು ಕ್ಯಾಮರಾ ಅಳವಡಿಸಿದ್ದು 14 ಅಡಿ ಅಟ್ಟಣಿಗೆ ನಿರ್ಮಿಸಿ ಹುಲಿ ಅರವಳಿಕೆ ನೀಡುವ ಗುಂಡು ಹಾರಿಸಿ ಸೆರೆ ಹಿಡಿಯಲು ಅಥವಾ ಚಲನವಲನ ಗುರುತಿಸಲು ಕ್ರಮ ಕೈಗೊಳ್ಳಲಾಗಿದೆ.

## ಕಾಡಾನೆ ದಾಳಿಗೆ ಸಿಲುಕಿ ವ್ಯಕ್ತಿ ಸಾವು

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯ ವಿರಾಜಪೇಟೆ ತಾಲ್ಲೂಕಿನ ಮಾಲ್ದಾರೆ ಅರಣ್ಯ ವ್ಯಾಪ್ತಿಯ ಬಸವನಹಳ್ಳಿ ಹಾಡಿ ಬಳಿ ಕಾಡಾನೆ ದಾಳಿಗೆ ಸಿಲುಕಿ ಚಿಣ್ಣಪ್ಪ (76) ಎಂಬುವವರು ಮೃತಪಟ್ಟಿದ್ದಾರೆ. ಶುಕ್ರವಾರ ನಸುಕಿನಲ್ಲಿ ಮನೆಯಿಂದ ಹೊರಬಂದಾಗ ಕಾಡಾನೆಯೊಂದು ದಾಳಿ ನಡೆಸಿದೆ. ಇದರಿಂದ ತೀವ್ರವಾಗಿ ಗಾಯಗೊಂಡ ಅವರು ಮೃತಪಟ್ಟರು. ಸ್ಥಳಕ್ಕೆ ಡಿಸಿಎಫ್ ಭಾಸ್ಕರ್ ಸೇರಿದಂತೆ ಅರಣ್ಯ ಇಲಾಖೆಯ ಅಧಿಕಾರಿಗಳು ಭೇಟಿ ನೀಡಿದ್ದಾರೆ. ಗುರುವಾರಷ್ಟೇ ವಿರಾಜಪೇಟೆ ತಾಲ್ಲೂಕಿನ ಪಾಲಿಬೆಟ್ಟ ಸಮೀಪದ ಎಮ್ಮೆಗುಂಡಿ ಎಸ್ಟೇಟ್ ಬಳಿ ವ್ಯಕ್ತಿಯೊಬ್ಬರು ಕಾಡಾನೆ ದಾಳಿಗೆ ಸಿಲುಕಿ ಮೃತಪಟ್ಟಿದ್ದರು.

## 6 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೇತಮಂಗಲ

ತಾಲ್ಲೂಕಿನ ವಿವಿಧ ಹಳ್ಳಿಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಿಗೆ 6 ಕೋಟಿ ವೆಚ್ಚದಲ್ಲಿ ಡಾಂಬರೀಕರಣ ಕಾಮಗಾರಿ ಕೈಗೊಳ್ಳಲಾಗಿದೆ ಎಂದು ಶಾಸಕಿ ರೂಪಕಲಾ ಶಶಿಧರ್ ತಿಳಿಸಿದರು. ಶುಕ್ರವಾರ ಸುಂದರಪಾಳ್ಯ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತಲ್ಲಪಲ್ಲಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಡಾಂಬರೀಕರಣ ಕಾಮಗಾರಿಯನ್ನು ಪರಿಶೀಲಿಸಿ, ನಂತರ ಮಾತನಾಡಿದರು. ವಿ.ಕೋಟಿ ಮುಖ್ಯರಸ್ತೆಯಿಂದ ತಲ್ಲಪಲ್ಲಿ ಗ್ರಾಮಕ್ಕೆ ಸುಮಾರು 70 ಲಕ್ಷ ಅನುದಾನದಲ್ಲಿ ಡಾಂಬರೀಕರಣ ಮಾಡಲಾಗುತ್ತಿದೆ. ಬಡಮಾಕನಹಳ್ಳಿ, ತಾತೇನಹಳ್ಳಿ ಮಾರಿಕೊಪ್ಪ ಸೇರಿದಂತೆ ಹಲವು ಕಡೆಗಳಲ್ಲಿ 6 ಕೋಟಿ ವೆಚ್ಚದಲ್ಲಿ ಡಾಂಬರೀಕರಣ ಕಾಮಗಾರಿ ಈಗಾಗಲೇ ಕೈಗೊಳ್ಳಲಾಗಿದೆ ಎಂದರು.

ತಾಪಂ ಮಾಜಿ ಸದಸ್ಯ ಜಯರಾಮ್ ರೆಡ್ಡಿ ಮಾತನಾಡಿದರು. ಈ ಸಂದರ್ಭದಲ್ಲಿ ಪಂಚಾಯತ್ ರಾಜ್ ಇಲಾಖೆಯ ಭಾರತಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೃಷ್ಣಮೂರ್ತಿ, ಕಾರಿ ಪ್ರಸನ್ನ, ರಾಮ್ ಬಾಬು, ವೆಂಕಟರಾಮ್, ಕೊದಂಡ ರೆಡ್ಡಿ ಇನ್ನಿತರರಿದ್ದರು.

# ಕಚೇರಿಗೆ ಬೀಗ ಜಡಿದು ಪ್ರತಿಭಟನೆ: ರೈತರ ಆಕ್ರೋಶ

• ಉದಯವಾಹಿನಿ, ರಾಮನಗರ


ಉದಯವಾಹಿನಿ ಚಿತ್ರ

ಅಧಿಕಾರ ದುರುಪಯೋಗಪಡಿಸಿಕೊಂಡು ಹಾಲು ಉತ್ಪಾದಕರಿಗೆ ತೊಂದರೆ ನೀಡುತ್ತಿರುವ ಸಹಕಾರ ಸಂಘಗಳ ಉಪ ನಿಬಂಧಕ ವೆಂಕಟೇಶ್ ವಿರುದ್ಧ ಮೇಲಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ, ಬಮೂಲ್ ನಿರ್ದೇಶಕ ಎಚ್.ಸಿ.ಜಯಮುತ್ತು ನೇತೃತ್ವದಲ್ಲಿ ಚನ್ನಪಟ್ಟಣ ತಾಲ್ಲೂಕಿನ ರೈತರು, ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಉಪ ನಿಬಂಧಕರ ಕಚೇರಿಗೆ ಬೀಗ ಜಡಿದು ಪ್ರತಿಭಟನೆ ನಡೆಸಿದರು.

ಚನ್ನಪಟ್ಟಣದ ಕೃಷ್ಣಾಪುರ ಹಾಲು ಉತ್ಪಾದಕರ ಸಹಕಾರ ಸಂಘ, ತಾಲ್ಲೂಕಿನಲ್ಲೇ ಹಾಲು ಉತ್ಪಾದನೆಯಲ್ಲಿ ಮುಂಚೂಣಿಯಲ್ಲಿದೆ. ಸಂಘದ ಅಧ್ಯಕ್ಷರು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದರೂ, ಅವರ ಸುಳ್ಳು ಆರೋಪಗಳನ್ನು ಹೊರಿಸಲಾಗಿದೆ. ಅಧಿಕಾರ ದುರುಪಯೋಗಪಡಿಸಿಕೊಂಡು ಅಧ್ಯಕ್ಷರನ್ನು ಪದಚ್ಯುತಿಗೊಳಿಸಿ ಉಪಾಧ್ಯಕ್ಷರಿಗೆ ಅಧಿಕಾರ ನೀಡಿರುವುದು ಕಾನೂನುಬಾಹಿರವಾಗಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ರಾಜಕೀಯ ಒತ್ತಡದಿಂದಾಗಿ ವೆಂಕಟೇಶ್ ಅಧಿಕಾರ ದುರ್ಬಳಕೆ ಮಾಡಿಕೊಂಡಿದ್ದಾರೆ. ಅಧ್ಯಕ್ಷರ ಪದಚ್ಯುತಿ ಹಿಂಪಡೆಯುವ ಜೊತೆಗೆ ಸಂಘಕ್ಕೆ ಹೊಸದಾಗಿ ಕಾರ್ಯನಿರ್ವಹಣಾಧಿಕಾರಿ ನೇಮಕ ಆದೇಶವನ್ನು ರದ್ದುಪಡಿಸುವಂತೆ ಡಿ.ಆರ್.ಗೆ ಕಳೆದ ವಾರ ಮನವಿ ಸಲ್ಲಿಸಲಾಗಿದೆ. ಆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ವೆಂಕಟೇಶ್ ಐದು ದಿನಗಳಿಂದ ಕಚೇರಿಗೆ ಬಂದಿಲ್ಲ ಎಂದು ಆರೋಪಿಸಿದರು. ಸ್ಥಳಕ್ಕೆ ವೆಂಕಟೇಶ್ ಬರುವವರೆಗೆ ಕಚೇರಿ ಬಿಟ್ಟು ಕದಲುವುದಿಲ್ಲ. ಮೇಲಧಿಕಾರಿಗಳು ಮನವಿಗೆ ಸ್ಪಂದಿಸುವವರೆಗೆ ಎಂದು ಪ್ರತಿಭಟನಾಕಾರರು ಪಟ್ಟು ಹಿಡಿದರು. ವಿಷಯ ತಿಳಿದು ಸ್ಥಳಕ್ಕೆ ಬಂದ ಪೊಲೀಸರು, ಸರ್ಕಾರಿ ಅಧಿಕಾರಿಗಳ ಕರ್ತವ್ಯಕ್ಕೆ ಅಡ್ಡಿಪಡಿಸದೆ ಶಾಂತಿಯುತವಾಗಿ ಪ್ರತಿಭಟನೆ ನಡೆಸಬೇಕು. ಅಲ್ಲದೆ, ನಿಮ್ಮ ಬೇಡಿಕೆ ಈಡೇರಿಕೆಗಾಗಿ ಮೇಲಧಿಕಾರಿಗಳ ಭೇಟಿಗೆ ವ್ಯವಸ್ಥೆ ಮಾಡುವ ಭರವಸೆ ನೀಡಿದರು. ಬಳಿಕ ಪಟ್ಟು ಸಡಿಲಿಸಿದ ಪ್ರತಿಭಟನಾಕಾರರು, ಕಂದಾಯ ಭವನದಲ್ಲಿರುವ ಡಿ.ಆರ್ ಕಚೇರಿಗೆ ನಿಯೋಗ ತೆರಳಿ ಅಧಿಕಾರಿಗೆ ಮನವಿ ಸಲ್ಲಿಸಿದರು. ಮನವಿ ಪರಿಶೀಲಿಸಿ ಸ್ಪಂದಿಸುವ ಭರವಸೆ ನೀಡಿದ ಬಳಿಕ ಪ್ರತಿಭಟನೆ ನಿಲ್ಲಿಸಿದರು.

# ಆದಿಚುಂಚನಗಿರಿ ವಿ.ವಿಗೆ ಬಸ್ ವ್ಯವಸ್ಥೆ

• ಉದಯವಾಹಿನಿ, ತುಮಕೂರು


ಉದಯವಾಹಿನಿ ಚಿತ್ರ

ತುಮಕೂರು– ಕುಣಿಗಲ್– ಎಡೆಯೂರು ಮಾರ್ಗವಾಗಿ ಬೆಳ್ಳೂರು ಕ್ರಾಸ್, ಬಿ.ಜಿ.ನಗರದ ಆದಿಚುಂಚನಗಿರಿ ವಿಶ್ವವಿದ್ಯಾಲಯಕ್ಕೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದೆ. ಮುಂದಿನ ವಾರದಲ್ಲಿ ಬಸ್ ಸಂಚಾರ ಆರಂಭವಾಗಲಿದೆ. ನಗರದಿಂದ ಬೆಳಿಗ್ಗೆ 7.10 ಗಂಟೆಗೆ ಹೊರಟು, 8.50ಕ್ಕೆ ವಿಶ್ವವಿದ್ಯಾಲಯದ ಆವರಣ ತಲುಪಲಿದೆ. ಸಂಜೆ 4.10ಕ್ಕೆ ಅಲ್ಲಿಂದ ಹೊರಡಲಿದೆ. ನಗರದಲ್ಲಿ ಶುಕ್ರವಾರ ಕೆಎಸ್‌ಆರ್‌ಟಿಸಿ ನಿಗಮದ ಅಧ್ಯಕ್ಷ, ಶಾಸಕ ಎಸ್.ಆರ್. ಶ್ರೀನಿವಾಸ್ ಅವರನ್ನು ಭೇಟಿ ಮಾಡಿದ ನಿಯೋಗ ಮನವಿ ಸಲ್ಲಿಸಿತು. ಮನವಿಗೆ ಸ್ಪಂದಿಸಿದ ಅಧ್ಯಕ್ಷರು ಬಸ್ ಸಂಚಾರಕ್ಕೆ ಅನುಮತಿ ನೀಡಿದರು. ಒಂದು ವಾರದಲ್ಲಿ ಶಾಲಾ– ಕಾಲೇಜಿನ ಸಮಯಕ್ಕೆ ಅನುಕೂಲವಾಗುವಂತೆ ಬಸ್ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಭೈರವೇಶ್ವರ ಬ್ಯಾಂಕ್ ಅಧ್ಯಕ್ಷ ಚಿಕ್ಕರಂಗೇಗೌಡ, ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ರವಿಗೌಡ, ಮುಖಂಡ ಹೆತ್ತೇನಹಳ್ಳಿ ಮಂಜುನಾಥ್, ವಕೀಲ ಸಿ.ಕೆ.ಮಹೇಂದ್ರ ನಿಯೋಗದಲ್ಲಿದ್ದರು.

ವಿಶ್ವವಿದ್ಯಾಲಯಕ್ಕೆ ತುಮಕೂರು, ಕುಣಿಗಲ್ ಮಾರ್ಗದಿಂದ 1,500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹೋಗುತ್ತಾರೆ. ಆದಿಚುಂಚನಗಿರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ಜಿಲ್ಲೆಯ ರೋಗಿಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸರಿಯಾದ ಬಸ್ ಸಂಪರ್ಕ ಇಲ್ಲದೆ ಜಿಲ್ಲೆಯ ಜನರು ಪರದಾಡುತ್ತಿದ್ದಾರೆ' ಎಂದು ಚಿಕ್ಕರಂಗೇಗೌಡ ಹೇಳಿದರು.

# ಹಿಂದೂ ಧರ್ಮ ಉಳಿಸಲು ಹೆಚ್ಚು ಮಕ್ಕಳು ಹೊಂದಿರಿ: ರಾಜೇಶನಾಥ್ ಸ್ವಾಮೀಜಿ

• ಉದಯವಾಹಿನಿ, ಹುಣಸೂರು


ಉದಯವಾಹಿನಿ ಚಿತ್ರ

ಭಾರತದಲ್ಲಿ ಹಿಂದೂಗಳ ಸಂತಾನ ಹೆಚ್ಚಿಸಿ ದೇಶಾಭಿಮಾನ, ಹಿಂದೂ ಧರ್ಮವನ್ನು ಉಳಿಸಿ ಬೆಳೆಸಬೇಕಾದ ಜವಾಬ್ದಾರಿ ಪ್ರತಿಯೊಬ್ಬ ನಾಗರಿಕರ ಹೆಗಲಿಗಿದೆ ಎಂದು ಕುಶಾಲನಗರದ ರಾಜೇಶನಾಥ್ ಸ್ವಾಮೀಜಿ ಕರೆ ನೀಡಿದರು. ತಾಲ್ಲೂಕಿನ ಶ್ರೀಕ್ಷೇತ್ರ ಕೆಂಡಗಣ್ಣಸ್ವಾಮಿ ದೇವಸ್ಥಾನದಲ್ಲಿ ವಿಶ್ವ ಹಿಂದೂ ಪರಿಷತ್, ಬೆಂಗಳೂರಿನ ಎಸ್.ಎಸ್.ಫೌಂಡೇಶನ್ ವತಿಯಿಂದ ಹಮ್ಮಿಕೊಂಡಿದ್ದ ಆದಿವಾಸಿ ಸಮುದಾಯದ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ 34 ವಧುವರರಿಗೆ ಆಶೀರ್ವದಿಸಿ ಮಾತನಾಡಿದರು. ಆದಿವಾಸಿ ಸಮುದಾಯ ಅರಣ್ಯ ರಕ್ಷಣೆಯೊಂದಿಗೆ ಇತರರಿಗೆ ಬದುಕು ಕಟ್ಟಿಕೊಳ್ಳಲು ಅಗತ್ಯ ಕಸುಬು ಗಳಲ್ಲಿ ಸಹಕಾರಿಯಾಗಿ ಬದುಕು ಕಟ್ಟಿಕೊಳ್ಳುತ್ತಿದ್ದಾರೆ. ಈ ಸಮುದಾಯದಲ್ಲಿನ ಶಿಕ್ಷಣ ಕೊರತೆಯನ್ನೇ ಬಂಡವಾಳ ಮಾಡಿಕೊಂಡ ಕೆಲವು ಸಂಘಟನೆಗಳು ಮತಾಂತರಿಸಿ ಅಡ್ಡದಾರಿ ಹಿಡಿಸಿದ್ದಾರೆ ಎಂದರು.

ವಿಶ್ವಹಿಂದೂ ಪರಿಷತ್ ಈ ಸಮುದಾಯವನ್ನು ಜಾಗೃತಿ ಗೊಳಿಸಿ ಶಿಕ್ಷಣ ಮತ್ತು ಧಾರ್ಮಿಕ ರಕ್ಷಣೆಗೆ ಕೈ ಜೋಡಿಸಲಾಗಿ 34 ಗಿರಿಜನ ವಧು ವರರನ್ನು ಹಿಂದೂ ಧಾರ್ಮಿಕ ಪದ್ಧತಿಯಲ್ಲಿ ವಿವಾಹ ನಡೆಸಿದೆ ಎಂದರು. ಪಿರಿಯಾಪಟ್ಟಣ ತಾಲ್ಲೂಕಿನ ಆದಿವಾಸಿ ಸಮುದಾಯದ ಸ್ವಾಮೀಜಿ ಹರೀಶ್ ಗುರುಜಿ ಮಾತನಾಡಿ, ಆದಿವಾಸಿ ಸಮುದಾಯದವರನ್ನು ಇತರೆ ಎಲ್ಲಾ ಸಮುದಾಯವರು ಹಿಂದುಳಿದ ಸಮಾಜ ಎಂದು ಸಮಾಜದಿಂದ ಹೊರಗಿಟ್ಟಿದ್ದಾರೆ. ಆದರೆ ಮೂಲತಃ ಆದಿವಾಸಿ ಸಮುದಾಯವೇ ಈ ಸಮಾಜ ಬೆಳೆಯಲು ಮೂಲ ಎನ್ನುವುದು ಪ್ರಜ್ಞಾವಂತ ಸಮಾಜಕ್ಕೆ ತಿಳಿದಿಲ್ಲ ಎಂದರು. ಆದಿವಾಸಿಗಳು ಅರಣ್ಯದಿಂದ ಹೊರ ಬಂದು ಇದೀಗ ಹೊಸ ಬದುಕು ಕಟ್ಟಿಕೊಳ್ಳುವ ದಿಕ್ಕಿನಲ್ಲಿ ಹೆಜ್ಜೆ ಹಾಕಿದ್ದು ಕೆಲವರು ಅಭಿವೃದ್ಧಿ ಹೊಂದಿದ್ದಾರೆ ಕೆಲವರು ಪ್ರಯತ್ನದಲ್ಲಿದ್ದಾರೆ. ಈ ನಡುವೆ ನಮ್ಮನ್ನು ಹಾಳು ಮಾಡಲು ಮದ್ಯದ ವ್ಯಾಮೋಹಕ್ಕೆ ಬಲಿಯಾಗಿ ಸುಂದರ ಕೌಟುಂಬಿಕ ವ್ಯವಸ್ಥೆಯಿಂದ ಹೊರಗುಳಿದು ಜೀವನ ಹಾಳು ಮಾಡಿಕೊಳ್ಳುತ್ತಿದ್ದೇವೆ ಎಂದರು.

ವಿ.ಎಚ್.ಪಿ ಧರ್ಮ ಪ್ರಸಾರ ವಿಭಾಗದ ಪ್ರಮುಖ್ ಸೂರ್ಯನಾರಾಯಣ ಮಾತನಾಡಿ, ಹಿಂದೂ ಜನಸಂಖೆ ಕಡಿಮೆ ಆಗುತ್ತಿರುವುದು ಆತಂಕ ಸೃಷ್ಟಿಸಿದ್ದು, ಈ ಕೊರತೆ ನೀಗಿಸಲು ಕನಿಷ್ಠ ಮೂರು ಮಕ್ಕಳನ್ನು ಹೊಂದುವುದು ಒಳಿತು.

**ಧನ ಸಹಾಯ:** ಮೂರು ಮಕ್ಕಳಿಗೆ ಜನ್ಮ ನೀಡುವ ದಂಪತಿಗೆ 1.50 ಲಕ್ಷ, ಒಂದು ಮಗು ಹೆತ್ತವರಿಗೆ 50 ಸಾವಿರ ಎರಡು ಮಗುವಿಗೆ 1 ಲಕ್ಷ ಸಹಾಯಧನ ನೀಡಲು ಬದ್ಧ ಎಂದು ಪ್ರಕಟಿಸಿದರು.

ಉಚಿತ ಸಾಮೂಹಿಕ ವಿವಾಹ ಸಮಾರಂಭದಲ್ಲಿ ಉಪವಿಭಾಗದ ಎಚ್.ಡಿ.ಕೋಟೆ, ಸರಗೂರು, ಹುಣಸೂರು ಮತ್ತು ಪಿರಿಯಾಪಟ್ಟಣ ತಾಲ್ಲೂಕಿನ ವಿವಿಧ ಹಾಡಿಗಳಿಂದ ವಧುವರರಿಗೆ ಸಂಘಟನೆ ವತಿಯಿಂದ ವಸ್ತ್ರ, ಪಾತ್ರೆ, ಹಾಸಿಗೆ ಮತ್ತು ಕೈಗಡಿಯಾರ ಉಡುಗೊರೆಯಾಗಿ ನೀಡಿದರು.

ಕಾರ್ಯಕ್ರಮದಲ್ಲಿ ವಿ.ಎಚ್.ಪಿ ಅಖಿಲ ಭಾರತ ಉಪಾಧ್ಯಕ್ಷ ಶ್ರೀಮೋಹನ್ ಮಂಗನಾಣೆ ಜೀ, ಜಿಲ್ಲಾ ಮಹಿಳಾ ಪ್ರಮುಖ್ ಕುಂಟೆ ಗೌಡ, ಜಿಲ್ಲಾ ಕಾರ್ಯದರ್ಶಿ ಮಹದೇವಪ್ಪ ಇನ್ನಿತರರಿದ್ದರು.

> **ಗಿರಿಜನ ಮಕ್ಕಳ ಶಿಕ್ಷಣಕ್ಕೆ ಸರ್ಕಾರ ಆಶ್ರಮ ಶಾಲೆ ತೆರೆದಿದ್ದರೂ ಪೋಷಕರು ಕೂಲಿ ಅರಸಿ ಹೋಗುವುದರಿಂದ ಮಕ್ಕಳ ಭವಿಷ್ಯದತ್ತ ಕಾಳಜಿ ಇಲ್ಲದೆ ಶಿಕ್ಷಣದಿಂದ ಹೊರಗುಳಿಯುತ್ತಿದ್ದಾರೆ**
> –ರಾಜೇಶನಾಥ್ ಸ್ವಾಮೀಜಿ

# ರೈತರ ಮೇಲಿನ ದಾಳಿ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಗೌರಿಬಿದನೂರು


ಉದಯವಾಹಿನಿ ಚಿತ್ರ

ಮಂಚೇನಹಳ್ಳಿಯ ಕನಗಾನಕೊಪ್ಪದಲ್ಲಿ ರೈತರ ಮೇಲೆ ನಡೆದ ಗುಂಡಿನ ದಾಳಿಯನ್ನು ಖಂಡಿಸಿ, ಅಖಿಲ ಕರ್ನಾಟಕ ರೈತ ಸಂಘಟನೆ ಮತ್ತು ಕನ್ನಡ ರಕ್ಷಣಾ ವೇದಿಕೆ ವತಿಯಿಂದ ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಈ ವೇಳೆ ಸಂಘದ ಅಧ್ಯಕ್ಷ ರವಿಚಂದ್ರ ರೆಡ್ಡಿ ಮಾತನಾಡಿ, ಜಿಲ್ಲೆಯಲ್ಲಿ ರೈತರ ಮೇಲೆ ಗುಂಡಿನ ದಾಳಿ ನಡೆಸಿರುವುದು ಖಂಡನೀಯ. ಈ ಘಟನೆಗೆ ಜಿಲ್ಲಾಧಿಕಾರಿಗಳೇ ಕಾರಣ. ಮಂಚೇನಹಳ್ಳಿ ರೈತರು ಹಲವು ವರ್ಷಗಳಿಂದ ಈ ಬಗ್ಗೆ ಪ್ರತಿಭಟನೆ ನಡೆಸುತ್ತಾ ಬಂದಿದ್ದಾರೆ. ಆದರೂ ಜಿಲ್ಲಾಧಿಕಾರಿಗಳು ರಸ್ತೆಗೆ ಅವಕಾಶ ನೀಡಿದ್ದಾರೆ. ಸರ್ಕಾರ ನಿರ್ಮಿಸಬೇಕಾದ ರಸ್ತೆಯನ್ನು ಗಣಿ ಮಾಲೀಕರು ನಿರ್ಮಿಸಲು ಮುಂದಾಗಿದ್ದಾರೆ. ಇದನ್ನು ತಡೆಯಲು ಮುಂದಾದಾಗ ರೈತರ ಮೇಲೆ ಗುಂಡಿನ ದಾಳಿ ನಡೆಸಿದ್ದಾರೆ. ಹಾಗಾಗಿ ಗುಂಡಿನ ದಾಳಿ ನಡೆಸಿದ ಆರೋಪಿಯನ್ನು ಗಡಿಪಾರು ಮಾಡಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಮಾಡುವುದಾಗಿ ಎಚ್ಚರಿಸಿದರು.

ಕರವೇ ಪ್ರಭಾಕರ್ ಮಾತನಾಡಿ, ಗಣಿ ಉದ್ಯಮಿಗಳು, ಸರ್ಕಾರ, ಜಿಲ್ಲಾಧಿಕಾರಿ, ಕಂದಾಯ ಇಲಾಖೆ, ಪೊಲೀಸ್ ಇಲಾಖೆ ಅಥವಾ ಗ್ರಾಮ ಪಂಚಾಯಿತಿಗಾಗಲಿ ತಿಳಿಸದೆ ಹಣ ಬಲ, ರಾಜಕೀಯ ಪ್ರಭಾವದಿಂದ ರಸ್ತೆ ನಿರ್ಮಾಣ ಮಾಡಲು ಮುಂದಾಗಿದ್ದಾರೆ. ಅಧಿಕಾರಿಗಳು ಸ್ಥಳ ಪರಿಶೀಲನೆ ಮಾಡಿ, ವರದಿ ನೀಡಬೇಕಾಗಿತ್ತು. ಆದರೆ, ಲಂಚ ಪಡೆದು ಕಚೇರಿಯಲ್ಲಿ ಕಡತಗಳಿಗೆ ಸಹಿ ಮಾಡಿದ್ದಾರೆ ಎಂದು ಆರೋಪಿಸಿದರು.

ಗಣಿ ಮಾಲೀಕರು ಅನಧಿಕೃತವಾಗಿ ರಸ್ತೆ ನಿರ್ಮಾಣ ಮಾಡಲು ಮುಂದಾದಾಗ, ಗ್ರಾಮಸ್ಥರು ಮತ್ತು ರೈತರು ತಡೆಯಲು ಹೋದಾಗ ರೈತರ ಮೇಲೆ ಗುಂಡು ಹಾರಿಸಲಾಗಿದೆ. ಜಿಲ್ಲೆಯಲ್ಲಿ ಇಂತಹ ಘಟನೆ ಎಂದು ನಡೆದಿರಲಿಲ್ಲ. ಘಟನಾ ಸ್ಥಳದಲ್ಲಿ ಭಾಗಿಯಾಗಿದ್ದ ಎಲ್ಲರ ಮೇಲು ರೌಡಿ ಹಾಳೆ ತೆಗೆಯಬೇಕು. ಜೊತೆಗೆ ಸಕಲೇಶ್ ಗನ್ ಪರವಾನಗಿಯನ್ನು ರದ್ದು ಮಾಡಬೇಕೆಂದು ಆಗ್ರಹಿಸಿದರು.

# ಗ್ರೇಟರ್ ಬೆಂಗಳೂರು ಮಾಡೇ ಮಾಡ್ತೀವಿ: ಡಿಕೆಶಿ

• ಉದಯವಾಹಿನಿ, ಮೈಸೂರು



ಕುಮಾರಸ್ವಾಮಿ ಅವರ ಕಾಲದಲ್ಲೇ 7 ಟೌನ್ ಶಿಪ್ ಮಾಡಲು ತೀರ್ಮಾನ ಆಗಿತ್ತು,ಅದಕ್ಕಾಗಿ 300 ಕೋಟಿ ಹಣ ಕೊಟ್ಟಿದ್ದರು,ಟೌನ್ ಶಿಪ್ ಪ್ಲಾನ್ ಅವರ ಕಾಲದಲ್ಲೇ ಆಗಿದ್ದು.ನಾನು ಡಿನೋಟಿಫಿಕೇಶ್ ಮಾಡಲು ಹೋಗಲ್ಲ ಎಂದು ಡಿಸಿಎಂ ಡಿ.ಕೆ ಶಿವಕುಮಾರ್ ಹೇಳಿದ್ದಾರೆ. ಬಿಡದಿ ಟೌನ್ ಶಿಪ್‌ಗೆ ರೈತರ ಭೂಮಿ ಕೈಬಿಡುವಂತೆ ಸಿಎಂಗೆ ದೇವೇಗೌಡರ ಪತ್ರ ಬರೆದ ಕುರಿತು ಮಾಧ್ಯಮದೊಂದಿಗೆ ಮಾತನಾಡಿ ಅವರು ಈ ಹಿಂದೆ ನನ್ನ ಮೇಲೆ ಏನೆಲ್ಲಾ ಹೇಳಿದ್ರು. ಅದೆಲ್ಲ ಇತಿಹಾಸ. ಟೌನ್ ಶಿಪ್ ಪಿತಾಮಹ ದೇವೇಗೌಡ ಹಾಗೂ ಕುಮಾರಸ್ವಾಮಿ,ಯಾರು ಏನೇ ಹೇಳಿದ್ರು ಗ್ರೇಟರ್ ಬೆಂಗಳೂರು ಮಾಡೇ ಮಾಡುತ್ತೇವೆ ಎಂದು ತಿರುಗೇಟು ನೀಡಿದರು.

ಬೆಂಗಳೂರಿಗಿಂತ ಚೆನ್ನಾಗಿ 10 ಸಾವಿರ ಎಕರೆಯಲ್ಲಿ ಉತ್ತಮ ಸಿಟಿ ಮಾಡುತ್ತೇವೆ. ಇದು ಮಾಡೆಲ್ ಸಿಟಿ ಆಗುತ್ತೆ.ರೈತರು ಜಮೀನಿನ ಬದಲಾಗಿ ದುಡ್ಡು ತೆಗೆದುಕೊಳ್ಳಬಹುದು.ಇಲ್ಲದಿದ್ರೆ ಅಭಿವೃದ್ಧಿ ಪಡಿಸಿದ ಭೂಮಿ ತೆಗೆದುಕೊಳ್ಳಬಹುದು ಎಂದು ತಿಳಿಸಿದರು. ಎರಡು ಬಾರಿ ಕುಮಾರಸ್ವಾಮಿ ಸಿಎಂ ಆದ್ರೂ ಯಾಕೆ ರೈತರ ಭೂಮಿ ಸ್ವಾಧೀನದಿಂದ ಕೈ ಬಿಡಲಿಲ್ಲ.ಈ ಬಗ್ಗೆ ದೇವೇಗೌಡರೇ ಹೇಳಲಿ,ಇದರಲ್ಲಿ ರಾಜಕೀಯ ಬೇಡ ಇದೆಲ್ಲ ನಿಮ್ಮ ಮಗನೆ ಮಾಡಿದ್ದು, ನಿಮ್ಮ ಕಾಲದಲ್ಲೇ ಆಗಿದ್ದು ಎಂದು ಡಿಕೆಶಿ ಟಾಂಗ್ ನೀಡಿದರು. ಕಾವೇರಿ ನಮ್ಮ ಜೀವನದಿ, ತಾಯಿಯ ಆರತಿ ಮಾಡ್ಬೇಕು.ಹೀಗಾಗಿ ಕಾವೇರಿ ಆರತಿ ಮಾಡಲು ಮುಂದಾಗಿದ್ದೇವೆ.ವ್ಯವಸಾಯ ,ಕುಡಿಯಲು ನೀರು ಎಲ್ಲವನ್ನೂ ತಾಯಿ ಕೊಡುತ್ತಿದ್ದಾಳೆ. ರಾಜ್ಯಕ್ಕೆ ,ಎಲ್ಲರಿಗೂ ಒಳಿತಾಗಲಿ ಎಂದು ಆರತಿ ಮಾಡುತ್ತೇವೆ ಎಂದು ಹೇಳಿದರು. ಕಾಶ್ಮೀರದಲ್ಲಿ ಉಗ್ರರ ಅಟ್ಟಹಾಸ ವಿಚಾರ ಬಗ್ಗೆ ಪ್ರತಿಕ್ರಿಯೆ ನೀಡಿ ನಾನು ಇಲ್ಲಿ ಯಾರ ಬಗ್ಗೆಯೂ ಬೊಟ್ಟು ಮಾಡಲ್ಲ ,ಯಾರ ವಿರುದ್ದವೂ ಮಾತನಾಡುವುದಿಲ್ಲ.ಇದು ರಾಜಕೀಯ ಮಾಡುವ ವಿಚಾರ ಅಲ್ಲ.ಯಾರು ಈ ವಿಚಾರದಲ್ಲಿ ಯಾರೂ ಕೂಡಾ ರಾಜಕೀಯ ಮಾಡಬಾರದು.ಪಕ್ಷದ ಅಧ್ಯಕ್ಷ ಹಾಗೂ ಡಿಸಿಎಂ ಆಗಿ ಹೇಳುತ್ತಿದ್ದೇನೆ ಎಂದರು.

ಹೊರದೇಶದಿಂದ ಬಂದು ಶಾಂತಿ ಕದಡುವ ಕೆಲಸ ಮಾಡಿದ್ದಾರೆ.ಅವರನ್ನು ಮುಗಿಸುವ ಕೆಲಸ ಆಗಬೇಕು.ಕೇಂದ್ರ ಸರ್ಕಾರ ಹೀಗಾಗಲೇ ಆ ಕೆಲಸ ಮಾಡಿದೆ.ಈ ವಿಚಾರವಾಗಿ ನಮ್ಮ ಸಂಪೂರ್ಣ ಸಹಕಾರ ಇರಲಿದೆ ಎಂದು ಸ್ಪಷ್ಟಪಡಿಸಿದರು. ರಾಮನಗರ ಹೆಸರು ಬದಲಾವಣೆ ವಿಚಾರದ ಬಗ್ಗೆ ಮಾತನಾಡಿ ,ಅದನ್ನು ಹೇಗೆ ಮಾಡಬೇಕು ಅಂತಾ ನನಗೆ ಗೊತ್ತು.ಮಾಡೇ ಮಾಡುತ್ತೇನೆ ಎಂದು ಸವಾಲು ಹಾಕಿದರು . ನಾವೇನು ಹೊರಗಿನಿಂದ ಬಂದವರಲ್ಲ. ನಮ್ಮ ಭೂಮಿ ನಮ್ಮ ನೆಲದ ಬಗ್ಗೆ ನಮಗೆ ಗೊತ್ತು.ಯಾರು ಅಪ್ಪ –ಅಮ್ಮನ ಹೆಸರು ಬದಲಾಯಿಸಲ್ಲ.ಅಫಿಡವಿಟ್ ಮಾಡಿಸಿಕೊಳ್ಳಬಹುದು ಅಷ್ಟೇ ಡಿ ಕೆ ಶಿವಕುಮಾರ್ ಬಗ್ಗೆ ಭಯನಾ , ಅಸೂಯೆನಾ,ಏನು ಅಂತಾ ಗೊತ್ತಿಲ್ಲ ಆದರೆ ನನ್ನ ಮೇಲೆ ಅತಿಯಾದ ಪ್ರೀತಿ ಮೈಸೂರಿನಲ್ಲಿ ಎಂದರು .

## ಕಾವೇರಿ ಆರತಿ ವೀಕ್ಷಿಸಲು ಟಿಕೆಟ್ ದರ ಇರುತ್ತೆ, ಉಚಿತ ವೀಕ್ಷಣೆಗೆ ಅವಕಾಶ ಇದೆಯಾ? ಡಿಕೆ ಶಿವಕುಮಾರ್ ಪ್ರತಿಕ್ರಿಯೆ

# ದಸರಾ ಜತೆಯಲ್ಲೇ ಕಾವೇರಿ ಆರತಿ ಮಾಡಲು ತರಾತುರಿ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಬೃಂದಾವನ ಉದ್ಯಾನವನ ಉನ್ನತೀಕರಣಕ್ಕಾಗಿ ಈಗಾಗಲೇ ಟೆಂಡರ್ ಕರೆಯಲಾಗಿದ್ದು, ಅಲ್ಲಿ ಯೋಜನಾ ಪ್ರಾಧಿಕಾರ ಮಾಡಲು ತೀರ್ಮಾನಿಸಿದ್ದು, ನಾಲ್ಕು ಪಂಚಾಯ್ತಿ ಸೇರಿಸಲಾಗುತ್ತಿದೆ. ಪಂಚಾಯ್ತಿಗಳ ಅಸ್ತಿತ್ವಕ್ಕೆ ತೊಂದರೆ ಆಗುವುದಿಲ್ಲ. ಅವುಗಳು ತಮ್ಮ ಕಾರ್ಯ ಮುಂದುವರಿಸಲಿವೆ. ಅವರ ಅಧಿಕಾರ ಮೊಟಕುಗೊಳಿಸುವುದಿಲ್ಲಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಕಾವೇರಿ ಆರತಿ ವೀಕ್ಷಿಸಲು ಟಿಕೆಟ್ ಕೂಡ ಇರುತ್ತದೆ, ಉಚಿತ ಪ್ರವೇಶ ವ್ಯವಸ್ಥೆಯೂ ಇರುತ್ತದೆ. ಬಡವ ಆರತಿ ನೋಡಲು ಬಂದರೆ ಆತನಿಗೆ ಬೇಡ ಎನ್ನಲು ಸಾಧ್ಯವೇ? ದಸರಾದಲ್ಲಿ ಕೆಲವರು ಟಿಕೆಟ್ ಪಡೆದು ವೀಕ್ಷಣೆ ಮಾಡುತ್ತಾರೆ, ಮತ್ತೆ ಕೆಲವರು ಉಚಿತವಾಗಿ ವೀಕ್ಷಣೆ ಮಾಡುತ್ತಾರೆ. ಅದೇ ರೀತಿ ಇಲ್ಲೂ ವ್ಯವಸ್ಥೆ ಕಲ್ಪಿಸಲಾಗುವುದು. ಸಾರ್ವಜನಿಕರು ಪೂಜೆ ಸಲ್ಲಿಸಲು ಅವಕಾಶ ನೀಡಲಾಗುವುದು ಎಂದು ಡಿ.ಕೆ.ಶಿವಕುಮಾರ್ ಮಾಹಿತಿ ನೀಡಿದರು.

ರಸ್ತೆ, ಪಾರ್ಕ್ ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಗೆ ಕಾನೂನು ಪ್ರಕಾರ ಜಾಗ ನೀಡುವ ಕೆಲಸವನ್ನು ಯೋಜನಾ ಪ್ರಾಧಿಕಾರ ಮಾಡಲಿದೆ. ಇದು ಅಭಿವೃದ್ಧಿ ಪ್ರಾಧಿಕಾರವಲ್ಲ, ಯೋಜನಾ ಪ್ರಾಧಿಕಾರ ಮಾತ್ರ. ಚಾಮುಂಡಿ ಬೆಟ್ಟ, ಮಲೆ ಮಹದೇಶ್ವರ ದೇವಾಲಯಕ್ಕೆ ಸಂಬಂಧಿಸಿದಂತೆ ಮಾಡಲಾಗಿರುವ ಯೋಜನಾ ಪ್ರಾಧಿಕಾರದಂತೆ ಇದು ಇರಲಿದೆ. ಇಲ್ಲಿಂದ ಬಂದ ಹಣವನ್ನು ಇಲ್ಲಿನ ಅಭಿವೃದ್ಧಿಗೆ ವಿನಿಯೋಗಿಸಲು ಈ ಪ್ರಾಧಿಕಾರ ಯೋಜನೆ ರೂಪಿಸಲಿದೆ ಎಂದು ಡಿಸಿಎಂ ತಿಳಿಸಿದರು. ಬೃಂದಾವನ ಉದ್ಯಾನವನ ಉನ್ನತೀಕರಣಕ್ಕೆ 7 ಸಂಸ್ಥೆಗಳು ಮುಂದಾಗಿದ್ದು, ಈ ಬಗ್ಗೆ ಚರ್ಚೆ ನಡೆಯುತ್ತಿದೆ. ಸದ್ಯದಲ್ಲೇ ಇದರ ರೂಪುರೇಷೆ ಸಿದ್ಧಪಡಿಸಲಾಗುವುದು. ಈ ಭಾಗದಲ್ಲಿ ಏನೇ ಉದ್ಯೋಗ ಸೃಷ್ಟಿ ಯಾದರೂ ಈ ಭಾಗದ ಪಂಚಾಯ್ತಿ ವ್ಯಾಪ್ತಿಯ ಜನರಿಗೆ ಮೊದಲು ಆದ್ಯತೆ ನೀಡಲು ಷರತ್ತು ಹಾಕಲಾಗಿದೆ.

**ಬೇಡ ಎನ್ನಲು ಸಾಧ್ಯವೇ?**

ಸ್ಥಳೀಯ ಯುವಕರಿಗೆ ಈ ಸಂಸ್ಥೆಗಳು ತರಬೇತಿ ನೀಡಿ ಉದ್ಯೋಗ ನೀಡಬೇಕು ಎಂದು ಸೂಚಿಸಲಾಗಿದೆ ಎಂದು ಡಿ.ಕೆ. ಶಿವಕುಮಾರ್ ಹೇಳಿದರು. ನಾನು ದಸರಾ ಜತೆಯಲ್ಲೇ ಕಾವೇರಿ ಆರತಿ ಮಾಡಲು ತರಾತುರಿಯಲ್ಲಿದ್ದೇನೆ. ಈ ವಿಚಾರವಾಗಿ ಸಚಿವ ಚೆಲುವರಾಯಸ್ವಾಮಿ ಅವರ ನೇತೃತ್ವದಲ್ಲಿ ಸಮಿತಿ ಮಾಡಲಾಗಿದೆ. ಈ ಸಮಿತಿ ರೂಪುರೇಷೆಗಳನ್ನು ಎಷ್ಟು ಬೇಗ ನೀಡುತ್ತಾರೋ ನೋಡೋಣ ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ತಪ್ಪು ಕಂಡುಹಿಡಿಯುವುದು, ಬೇರೆಯವರ ಮೇಲೆ ಆರೋಪ ಮಾಡುವುದು, ಚಾಡಿ ಹೇಳುವುದು ಬಹಳ ಸುಲಭ. ಇವು ಕಿವಿಗೆ ಬಹಳ ಇಂಪಾಗಿ ಕೇಳುತ್ತದೆ. ನಾವು ಎಲ್ಲಾ ಆಯಾಮಗಳಲ್ಲೂ ಪರಿಶೀಲನೆ ಮಾಡಬೇಕು. ನಾನು ಹೀಗಾಗಲೇ ಎಲ್ಲಾ ಅಣೆಕಟ್ಟುಗಳನ್ನು ಡ್ರೋನ್ ಮೂಲಕ ಸಮೀಕ್ಷೆ ಮಾಡಲಾಗಿದೆ. ಅಣೆಕಟ್ಟು ತುಂಬಿದಾಗ ಎಲ್ಲಿಯವರೆಗೆ, ಎಷ್ಟು ಮಟ್ಟದವರೆಗೆ ನೀರು ನಿಲ್ಲಲಿದೆ ಎಂದು ಗುರುತು ಮಾಡಲಾಗಿದೆ. ಮೊನ್ನೆ ನಡೆದ ಕೆರೆ ಅಭಿವೃದ್ಧಿ ಪ್ರಾಧಿಕಾರದ ಸಭೆಯಲ್ಲಿ ಮುಖ್ಯಮಂತ್ರಿಗಳು ಎಲ್ಲಾ ಕೆರೆಗಳ ಸಮೀಕ್ಷೆ ಮಾಡಲು ತೀರ್ಮಾನಿಸಲಾಗಿದೆ. ಅಣೆಕಟ್ಟಿನ ಆಸ್ತಿ ಮಾಪನ ಮಾಡಲು ಸರ್ವೇ ಇಲಾಖೆಗೂ ಹೇಳಲಾಗಿದೆ ಎಂದು

> **ನಾನು ಜಾಗ ಪರಿಶೀಲನೆ ಮಾಡಿದ್ದೇನೆ. ಈ ವಿಚಾರವಾಗಿ ತಾಂತ್ರಿಕ ಸಮಿತಿ ಅಭಿಪ್ರಾಯ ಪಡೆಯಲಾಗಿದೆ. ನೀರು ಸಂಗ್ರಹವಿರಬೇಕು, ಅಣೆಕಟ್ಟಿನಿಂದ ಸ್ವಲ್ಪ ದೂರದಲ್ಲಿ ಇರಬೇಕು. ಪಾರ್ಕಿಂಗ್ ವ್ಯವಸ್ಥೆ, ಕಲಾವಿದರು, ಪೂಜೆ ಮಾಡುವವರಿಗೆ ಜಾಗ ಕಲ್ಪಿಸಬೇಕು. ಇದಕ್ಕಾಗಿಯೇ ಪ್ರತ್ಯೇಕ ಜಾಗ ನಿರ್ಮಿಸಲಾಗುವುದು. ಬೋಟಿಂಗ್ ವ್ಯವಸ್ಥೆ ಜಾಗವೇ ಬೇರೆ, ಈ ಕಾರ್ಯಕ್ರಮದ ಜಾಗವೇ ಪ್ರತ್ಯೇಕವಾಗಿರಲಿದೆ. ಸಮಿತಿಯು ಈ ವಿಚಾರವಾಗಿ ತೀರ್ಮಾನ ಮಾಡಲಿದೆ**
> –ಡಿ.ಕೆ.ಶಿವಕುಮಾರ್, ಡಿಸಿಎಂ

**ಅವರ ತಪ್ಪೇನು ಇಲ್ಲ**

**ಬೃಂದಾವನ ಉದ್ಯಾನ ಅಭಿವೃದ್ಧಿಯಿಂದ ಅಣೆಕಟ್ಟಿಗೆ ತೊಂದರೆಯಾಗಲಿದೆ ಎಂದು ಕೆಲವು ಸಂಘಟನೆಗಳು ವಿರೋಧ ಮಾಡುತ್ತಿವೆ. ಈ ವಿಚಾರವಾಗಿ ಸಂಘಟನೆಗಳನ್ನು ಕರೆದು ಚರ್ಚೆ ಮಾಡಲಾಗುವುದು. ಈ ವಿಚಾರವಾಗಿ ಅನುಮಾನಗಳು ಮೂಡುವುದು ಸಹಜ. ಇದರಲ್ಲಿ ಅವರ ತಪ್ಪೇನು ಇಲ್ಲ.**

ಅಂತರಾಳದಿಂದ.. EDITORIAL

# ಸಾಂಕ್ರಾಮಿಕಗಳ ವಿರುದ್ಧದ ಹೋರಾಟ ಮಹತ್ವದ ಹೆಜ್ಜೆ ಇರಿಸಿದ ಮನುಕುಲ

ಸಾಂಕ್ರಾಮಿಕ ರೋಗ ನಿರ್ವಹಣೆಯ ಸಂಬಂಧದ ಕರಡುಒಪ್ಪಂದಕ್ಕೆ ಹಲವು ದೇಶಗಳು ಸಹಮತವನ್ನು ಸೂಚಿಸಿರುವುದು ಸಾಂಕ್ರಾಮಿಕಗಳ ವಿರುದ್ಧ ಮನುಕುಲ ನಡೆಸಿರುವ ಹೋರಾಟದಲ್ಲಿ ಒಂದು ಐತಿಹಾಸಿಕ ನಡೆ. ವಿಶ್ವ ಆರೋಗ್ಯ ಸಂಸ್ಥೆಯ (ಡಬ್ಲ್ಯುಎಚ್‌ಒ) ಮಾರ್ಗದರ್ಶನದಲ್ಲಿ ಈ ಸಹಮತ ಮೂಡಿದೆ. ಸುಮಾರು ನಾಲ್ಕು ವರ್ಷಗಳ ಮಾತುಕತೆಯ ನಂತರ ಈ ಕರಡು ಒಪ್ಪಂದಕ್ಕೆ ಜಿನೀವಾದಲ್ಲಿ ಕಳೆದ ವಾರ ಅಂತಿಮ ರೂಪ ಸಿಕ್ಕಿದೆ. ಈ ಕರಡನ್ನು ವಿಶ್ವ ಆರೋಗ್ಯ ಸಮಾವೇಶವು ಅಂಗೀಕರಿಸಲು ಸಜ್ಜಾಗಿದೆ. ಸಾಂಕ್ರಾಮಿಕಗಳನ್ನು ತಡೆಯಲು, ಅವುಗಳನ್ನು ನಿಭಾಯಿಸುವ ಸಲುವಾಗಿ ಸಿದ್ಧತೆಗಳನ್ನು ನಡೆಸಲು, ಅವು ಧುತ್ತೆಂದು ಎದುರಾದಾಗ ಪರಿಸ್ಥಿತಿ ಎದುರಿಸಲು ಹಲವು ಕ್ರಮಗಳನ್ನು ಈ ಒಪ್ಪಂದವು ಒಳಗೊಂಡಿದೆ. ಈ ಕರಡು ಒಪ್ಪಂದಕ್ಕೆ ಸಹಮತ ಮೂಡಿರುವುದು ಜಾಗತಿಕ ಆರೋಗ್ಯದ ಇತಿಹಾಸದಲ್ಲಿ ಒಂದು ನಿರ್ಣಾಯಕ ಕಾಲಘಟ್ಟ ಎಂದು ಬಣ್ಣಿಸಲಾಗಿದೆ. ಡಬ್ಲ್ಯುಎಚ್‌ಒ ಸದಸ್ಯ ರಾಷ್ಟ್ರಗಳೆಲ್ಲ ಈ ಒಪ್ಪಂದಕ್ಕೆ ಸಹಿ ಮಾಡುವ ನಿರೀಕ್ಷೆ ಇದೆ. ಆದರೆ ಡೊನಾಲ್ಡ್ ಟ್ರಂಪ್ ಅವರು ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ದಿನವೇ ಡಬ್ಲ್ಯುಎಚ್‌ಒದಿಂದ ಹೊರನಡೆದಿರುವ ಅಮೆರಿಕವು ಒಪ್ಪಂದಕ್ಕೆ ಸಹಿ ಹಾಕಲಿಕ್ಕಿಲ್ಲ. ಅಮೆರಿಕವು ಡಬ್ಲ್ಯುಎಚ್ ಒದಿಂದ ಹೊರನಡೆದಿರುವ ಪರಿಣಾಮವಾಗಿ ಒಪ್ಪಂದದ ಬಲ ಕುಗ್ಗಲಿದೆ.



ಆದರೆ, ಕೋವಿಡ್–19 ಸಾಂಕ್ರಾಮಿಕ ಸೃಷ್ಟಿಸಿದ ಯಾತನೆಯನ್ನು ಕಂಡಿರುವ ವಿಶ್ವದ ಇತರ ದೇಶಗಳು ಇದಕ್ಕೆ ಹೆಚ್ಚಿನ ಮಹತ್ವ ನೀಡಿವೆ. ಸಾಂಕ್ರಾಮಿಕ ಎದುರಾದಾಗ ಅದಕ್ಕೆ ತಕ್ಕ ಸ್ಪಂದನ ಇರಬೇಕು, ಅದಕ್ಕೆ ಒಂದು ಒಪ್ಪಂದದ ಅಗತ್ಯ ಇದೆ ಎಂಬುದು ಕೋವಿಡ್ ಸಾಂಕ್ರಾಮಿಕದ ಸಂದರ್ಭದಲ್ಲಿ ಅರಿವಾಯಿತು. ಒಪ್ಪಂದಕ್ಕಾಗಿ ಆಗಿನಿಂದಲೇ ಕೆಲವು ಕ್ರಮಗಳನ್ನು ಕೈಗೊಳ್ಳಲಾಯಿತು. ವಿವಿಧ ದೇಶಗಳ ಸರ್ಕಾರಗಳ ಜೊತೆ ಮಾತುಕತೆ ನಡೆಸಲು ಸಮಿತಿಯೊಂದನ್ನು 2021ರ ಡಿಸೆಂಬರ್‌ನಲ್ಲಿ ರಚಿಸಲಾಯಿತು. ಕರಡು ಒಪ್ಪಂದದ ಹಲವು ಅಂಶಗಳ ಬಗ್ಗೆ ಗಂಭೀರ ಸ್ವರೂಪದ ಭಿನ್ನಾಭಿಪ್ರಾಯಗಳು ಇದ್ದವು.

ಅದರಲ್ಲೂ ಮುಖ್ಯವಾಗಿ, ವೈಜ್ಞಾನಿಕ ಮಾಹಿತಿ ಹಂಚಿಕೊಳ್ಳುವುದು, ಸಾಂಕ್ರಾಮಿಕವನ್ನು ತಡೆಯುವ ವೈದ್ಯಕೀಯ ಔಷಧಗಳ ಸಮಾನ ಹಂಚಿಕೆಯ ವಿಚಾರವಾಗಿ ಭಿನ್ನಾಭಿಪ್ರಾಯಗಳು ಇದ್ದವು. ವೈಜ್ಞಾನಿಕ ದತ್ತಾಂಶವು ತಕ್ಷಣಕ್ಕೆ ಲಭ್ಯವಾಗುವಂತೆ ಇರಬೇಕು ಎಂದು ಮುಂದುವರಿದ ದೇಶಗಳು ಬಯಸಿದರೆ, ಅಭಿವೃದ್ಧಿಶೀಲ ದೇಶಗಳು ವೈಜ್ಞಾನಿಕ ಮಾಹಿತಿ ಹಂಚಿಕೆ ಮತ್ತು ಲಸಿಕೆ ಹಾಗೂ ಔಷಧಗಳ ಪೂರೈಕೆಯ ನಡುವೆ ಸಂಬಂಧ ಇರಬೇಕು ಎಂದು ಬಯಸಿದವು. ಏಕೆಂದರೆ, ಕೋವಿಡ್–19 ಸಾಂಕ್ರಾಮಿಕದ ಸಂದರ್ಭದಲ್ಲಿ ಕಡಿಮೆ ಹಾಗೂ ಮಧ್ಯಮ ಪ್ರಮಾಣದ ವರಮಾನದ ದೇಶಗಳು ಲಸಿಕೆ ಮತ್ತು ಔಷಧಗಳ ಪೂರೈಕೆಯ ವಿಚಾರದಲ್ಲಿ ತಾರತಮ್ಯ ಎದುರಿಸಿದ್ದವು. ಈ ಅನುಭವದ ಕಾರಣದಿಂದಾಗಿ ಈ ದೇಶಗಳು ಇಂಥದ್ದೊಂದು ಬೇಡಿಕೆ ಇರಿಸಿದವು. ಆದರೆ ಮಾತುಕತೆಯ ಸಂದರ್ಭದಲ್ಲಿ ಎರಡೂ ಗುಂಪಿನ ದೇಶಗಳು ಒಂದಿಷ್ಟು ಹೊಂದಾಣಿಕೆಗಳನ್ನು ಮಾಡಿಕೊಂಡಿವೆ. ಎರಡೂ ಕಡೆಯ ದೇಶಗಳ ಅಗತ್ಯ ಮತ್ತು ಕಳವಳಗಳಿಗೆ ಒಪ್ಪಂದವು ಸ್ಪಂದಿಸುವ ಕೆಲಸ ಮಾಡಿದೆ. ಆರೋಗ್ಯಸೇವಾ ಕಾರ್ಯಕರ್ತರಿಗೆ ಹೆಚ್ಚಿನ ಸುರಕ್ಷತೆ ಒದಗಿಸಲು ಒಪ್ಪಂದದಲ್ಲಿ ಅವಕಾಶ ಇದೆ. ಔಷಧ ತಯಾರಿಕಾ ಕಂಪನಿಗಳಿಗೆ ವೈಜ್ಞಾನಿಕ ಮಾಹಿತಿ ಪಡೆದುಕೊಳ್ಳುವುದಕ್ಕೆ ಒಪ್ಪಂದವು ವ್ಯವಸ್ಥೆಯೊಂದನ್ನು ರೂಪಿಸುತ್ತದೆ, ಇದಕ್ಕೆ ಪ್ರತಿಯಾಗಿ ಕಂಪನಿಗಳು ಹೆಚ್ಚು ಸಮಾನ ನೆಲೆಯಲ್ಲಿ ಔಷಧಗಳನ್ನು, ಲಸಿಕೆಗಳನ್ನು ಮತ್ತು ರೋಗಪತ್ತೆ ವಿಧಾನಗಳನ್ನು ಹಂಚಿಕೊಳ್ಳಬೇಕು. ಆದರೆ ಈ ವ್ಯವಸ್ಥೆಯು ಹೇಗೆ ಕೆಲಸ ಮಾಡಲಿದೆ ಎಂಬುದನ್ನು ಇನ್ನಷ್ಟೇ ತೀರ್ಮಾನಿಸಬೇಕಿದೆ. ಮಾಹಿತಿಯನ್ನು ಹಂಚಿಕೊಳ್ಳುವ ಕೆಲಸವು ತ್ವರಿತವಾಗಿ ಆಗಬೇಕು, ಸಕಾಲದಲ್ಲಿ ಆಗಬೇಕು ಎಂದು ಅದು ಹೇಳುತ್ತದೆ. ಸಾಂಕ್ರಾಮಿಕದ ಸಂದರ್ಭದಲ್ಲಿ ಔಷಧ ತಯಾರಿಕಾ ಕಂಪನಿಗಳು ಲಸಿಕೆ, ಔಷಧ ಮತ್ತು ರೋಗಪತ್ತೆ ಪರಿಕರಗಳ ಪೈಕಿ ಶೇಕಡ 20ರಷ್ಟನ್ನು ಡಬ್ಲ್ಯುಎಚ್ ಒಗೆ ಲಭ್ಯವಾಗುವಂತೆ ಮಾಡಬೇಕು ಎಂದು ಕರಡು ಒಪ್ಪಂದವು ಹೇಳುತ್ತದೆ.

ಆರೋಗ್ಯವನ್ನು ಕಾಪಾಡುವುದರ ಬಗ್ಗೆ ಈ ಒಪ್ಪಂದವು ಸಮಗ್ರವಾದ ನೋಟವೊಂದನ್ನು ಹೊಂದಿದೆ. ರೋಗಕಾರಕಗಳು ಪ್ರಾಣಿಗಳಿಂದ ಮನುಷ್ಯರಿಗೆ ಹರಡುವುದರ ಅಪಾಯವನ್ನು ತಗ್ಗಿಸಲು ದೇಶಗಳು ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳುತ್ತದೆ. ರಾಷ್ಟ್ರಗಳ ಮಟ್ಟದಲ್ಲಿ ಆರೋಗ್ಯ ಸೇವಾ ವ್ಯವಸ್ಥೆ ಬಲಪಡಿಸಬೇಕು ಎಂದು ಕೂಡ ಒಪ್ಪಂದವು ಹೇಳಿದೆ. ಜಾಗತಿಕ ಮಟ್ಟದಲ್ಲಿ ಸಮನ್ವಯದ ಹಣಕಾಸು ವ್ಯವಸ್ಥೆ, ಪೂರೈಕೆ ವ್ಯವಸ್ಥೆ, ಸಾಗಣೆ ವ್ಯವಸ್ಥೆ ಸಾಧ್ಯವಾಗಬೇಕು ಎಂದು ಹೇಳುತ್ತದೆ. ಕೋವಿಡ್‌ನ ಸಂದರ್ಭದಲ್ಲಿ ಸೃಷ್ಟಿಯಾದಂತಹ ಪರಿಸ್ಥಿತಿಯನ್ನು ತಡೆಯುವಲ್ಲಿ ಈ ಒಪ್ಪಂದವು ಜಗತ್ತಿಗೆ ನೆರವಾಗುತ್ತದೆ ಎಂಬ ಆಶಾಭಾವ ಇದೆ.


# ಸಾಹಿತಿ ವಿಶ್ವಾಸ್. ಡಿ. ಗೌಡರ ನಾಲ್ಕನೇ ಕೃತಿ ಚೈತ್ರದ ಚೈತನ್ಯ ಲೋಕಾರ್ಪಣೆ



ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ

ಸಕಲೇಶಪುರ ತಾಲ್ಲೂಕು ಚುಟುಕು ಸಾಹಿತ್ಯ ಪರಿಷತ್ ವತಿಯಿಂದ ಏ. 28 ರಂದು ಚುಟುಕು ಕವಿ ಕಾವ್ಯ ಕಾಜಾಣ, ರಾಜ್ಯ ಮಟ್ಟದ ಚುಟುಕು ಕವಿಗೋಷ್ಠಿ, ಬಸವಶ್ರೀ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಾಲ್ಲೂಕು ಚುಸಾಪ ಅಧ್ಯಕ್ಷ ಮಲ್ಲೇಶ್ ಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಕಾರ್ಯಕ್ರಮವು ಸಕಲೇಶಪುರ ಪಟ್ಟಣದ ಲಯನ್ಸ್ ಸಭಾಂಗಣದ ಜಾನಪದ ಜಂಗಮ ಎಸ್.ಕೆ ಕರೀಂ ಖಾನ್ ವೇದಿಕೆಯಲ್ಲಿ ಬೆಳಗ್ಗೆ 9 ಗಂಟೆಗೆ ಆರಂಭವಾಗಲಿದೆ, ಉದ್ಘಾಟನೆಯನ್ನು ಪರಿಷತ್ ಸಂಸ್ಥಾಪಕರಾದ ಡಾ ಎಂ ಜಿ ಆರ್ ಅರಸ್ ನೆರವೇರಿಸುವರು. ಹಾಸನ ಜಿಲ್ಲಾಧ್ಯಕ್ಷ ಬಾ.ನಂ ಲೋಕೇಶ್ ಅಧ್ಯಕ್ಷತೆ ವಹಿಸುವರು. ಶಾಸಕರಾದ ಸಿಮೆಂಟ್ ಮಂಜು ಅವರು ಬಸವೇಶ್ವರ ಪುತ್ಥಳಿಗೆ ಮಾಲಾರ್ಪಣೆ ಮಾಡುವರು.

ಯಸಳೂರಿನ ತೆಂಕಲಗೂಡು ಬೃಹನ್ಮಠದ ಶ್ರೀ ಶ್ರೀ ಶ್ರೀ ಷ. ಬ್ರ. ಚನ್ನಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿಯವರು ದಿವ್ಯ ಸಾನಿಧ್ಯವಹಿಸುವರು. ಚುಟುಕು ಸಾಹಿತ್ಯ ಪರಿಷತ್ತು, ಮೈಸೂರು ಜಿಲ್ಲಾಧ್ಯಕ್ಷರಾದ ಶ್ರೀಮತಿ ರತ್ನ ಹಾಲಪ್ಪ ಗೌಡ ರವರು ಕೃತಿಯನ್ನು ಬಿಡುಗಡೆ ಮಾಡಲಿದ್ದಾರೆ. ಈ ಸಮ್ಮೇಳನದಲ್ಲಿ ಹಾಸನ ಜಿಲ್ಲೆಯ, ಸಕಲೇಶಪುರ ತಾಲ್ಲೂಕಿನ ಖ್ಯಾತ ಬರಹಗಾರ, ಕತ್ತರಿ ಘಟ್ಟ ಮತ್ತು ಹರಿಸೇವಾ, ನೆನಪುಗಳ ಖಾತೆ ,ಬಾಳೊಂದು ಚೈತ್ರಾಮಯ ಕೃತಿಗಳ ಮೂಲಕ ಸಾಹಿತ್ಯ ಕ್ಷೇತ್ರದಲ್ಲಿ ಪಾದಾರ್ಪಣೆ ಮಾಡಿರುವ ಶ್ರೀ ವಿಶ್ವಾಸ್.ಡಿ.ಗೌಡ ರವರ ಚೈತ್ರದ ಚೈತನ್ಯ ಎಂಬ 4ನೇ ಕೃತಿಯು ಇದೇ ಕಾರ್ಯಕ್ರಮದಲ್ಲಿ ಲೋಕಾರ್ಪಣೆಯಾಗಲಿದೆ.





ಇತ್ತೀಚೆಗೆ ಪತ್ರಿಕೆಗಳಲ್ಲಿ ತಮ್ಮ ಬರಹಗಳ ಮೂಲಕ ಖ್ಯಾತಿ ಪಡೆದಿರುವ ವಿಶ್ವಾಸ್ ರವರು ತಮ್ಮ ಅಂಕಣ ಬರಹಗಳನ್ನೆಲ್ಲ ಸೇರಿಸಿ ಸುಂದರವಾದ 4ನೇ ಕೃತಿಯೊಂದನ್ನು ಮಾಡಿದ್ದಾರೆ. ಇವರ ಅನೇಕ ಕೃತಿಗಳು ಮುದ್ರಣ ಹಂತದಲ್ಲಿವೆ. ಮುದ್ರಣ ಹಂತದಲ್ಲಿರುವ ಕೃತಿಗಳು ಕೂಡ ಅಂಕಣ ಬರಹಗಳ ಜೊತೆಯಲ್ಲಿ ವಿಮರ್ಶಾ ಸಾಹಿತ್ಯದ ಕೃತಿಗಳಾಗಿದ್ದು,ಇವರ ಅನೇಕ ಉತ್ತಮ ಬರಹಗಳನ್ನು ಸೇರಿಸಿಕೊಂಡು ಚೈತ್ರದ ಚೈತನ್ಯ ಎಂಬ ಕೃತಿಯನುದ್ಧಿ ಮಾಡಿದ್ದಾರೆ.

ಈ ಕೃತಿಯು ಈ ಸುಂದರವಾದ ಕಾರ್ಯಕ್ರಮದಲ್ಲಿ ಲೋಕಾರ್ಪಣೆಯಾಗಲಿದೆ.

# ಇದು ಆರೋಗ್ಯಕ್ಕೆ ತುಂಬಾನೇ ಡಂಜರ್ ಅಂತೆ

ಇಂದಿನ ದಿನಗಳಲ್ಲಿ ಬಾಯಿರುಚಿ ಹೆಚ್ಚಿಸುವ ಜಂಕ್ ಫುಡ್‌ಗಳು, ಆರೋಗ್ಯಕ್ಕೆ ಸುರಕ್ಷತೆ ಅಲ್ಲ ಎಂದು ತಿಳಿದಿದ್ದರೂ ಕೂಡ ನಾವು ಮಾತ್ರ ಅಂತಹ ಆಹಾರಗಳನ್ನು ತಿನ್ನಲು ಹಿಂದೆ ಮುಂದೆ ನೋಡುವುದಿಲ್ಲ. ಕೊನೆಗೆ ಇಂತಹ ಆಹಾರಗಳಿಂದ ಏನಾದರೂ ತೊಂದರೆ ಆಗಿ ಯಾರ ಜೀವಕ್ಕಾದರೂ ಹಾನಿಯಾದರೆ ಅಥವಾ ದೀರ್ಘಕಾಲದ ಆರೋಗ್ಯ ಸಮಸ್ಯೆಗಳಿಗೆ ಇಂತಹ ಆಹಾರಗಳೇ ಕಾರಣ ಎಂದು ತಿಳಿದು ಬಂದರೆ ಮಾತ್ರ ನಾವು ಎಚ್ಚೆತ್ತುಕೊಳ್ಳುತ್ತೇವೆ. ಹೀಗಾಗಿ ಜನರ ಆರೋಗ್ಯದ ದೃಷ್ಟಿಯಿಂದ ದೇಶದ ಹಲವಾರು ರಾಜ್ಯದ ಸರ್ಕಾರಗಳು ಈಗಾಗಲೇ ಇಂತಹ ಅನೇಕ ಆಹಾರ ಪದಾರ್ಥಗಳನ್ನು ಮಾರಾಟ ಮಾಡದಂತೆ ನಿಷೇಧ ಹೇರಿವೆ! ಹೌದು ಇತ್ತೀಚೆಗೆ ತಮಿಳುನಾಡು ಸರ್ಕಾರ ಮೇಯನೇಸ್ ವಿರುದ್ಧ ಕಠಿಣ ಕ್ರಮ ಕೈಗೊಂಡಿದೆ. ಅಂದ್ರೆ ಹಸಿ ಮೊಟ್ಟೆಗಳಿಂದ ತಯಾರಿಸಿದ ಮೇಯನೇಸ್‌ಗೆ ಒಂದು ವರ್ಷದವರೆಗೆ ನಿಷೇದಾಜ್ಞೆ ಹೊರಡಿಸಿದೆ.



**ಸರ್ಕಾರ ಕೂಡ ಈಗ ದಿಟ್ಟ ಹೆಜ್ಜೆ ತಗೆದು ಕೊಳ್ಳುತ್ತಿದೆ:** ಕೃತಕ ಬಣ್ಣಗಳನ್ನು ಉಪಯೋಗಿಸುವ ಆಹಾರ ಪದಾರ್ಥಗಳು ಸೇರಿದಂತೆ ಆಹಾರದ ಸುರಕ್ಷತಾ ಮಾನದಂಡಗಳನ್ನು ಪಾಲಿಸದ ಅನೇಕ ಆಹಾರಗಳು ಈಗ ಒಂದೊಂದೇ ಮಾರುಕಟ್ಟೆಯಿಂದ ಹಿಂದೆ ಸರಿಯುತ್ತಿವೆ.

ಉದಾಹರ ಣೆಗೆ ಕೃತಕ ಬಣ್ಣ ಹಾಕಿ ಮಾಡಲಾಗುತ್ತಿದ್ದ ಗೋಬಿ ಮಂಚೂರಿ, ಬೇಕರಿ ಐಟಮ್ಸ್ ಗಳಾದ ವಿವಿಧ ಬಗೆಯ ಕೇಕ್ ಹಾಗೂ ಇದೇ ಪಟ್ಟಿಗೆ ಈ ಹಸಿ ಮೊಟ್ಟೆಗಳಿಂದ ತಯಾರಿಸಿದ ಮೇಯನೇಸ್ ಕೂಡ ಸೇರ್ಪಡೆಗೊಂಡಿದೆ.


**ಮೇಯನೇಸ್ ವಿರುದ್ಧ ಕಠಿಣ ಕ್ರಮ ತೆಗೆದುಕೊಂಡ ತಮಿಳುನಾಡು ಸರಕಾರ:** ತಮಿಳುನಾಡು ಸರ್ಕಾರ ಮೇಯನೇಸ್ ವಿರುದ್ಧ ಕಠಿಣ ಕ್ರಮ ಕೈಗೊಂಡಿದೆ. ಕಚ್ಚಾ ಮೊಟ್ಟೆಗಳಿಂದ ತಯಾರಿಸಿದ ಮೇಯನೇಸ್ ತಯಾರಿಕೆ, ದಾಸ್ತಾನು ಮತ್ತು ಮಾರಾಟವನ್ನು ಸರ್ಕಾರ ಒಂದು ವರ್ಷದವರೆಗೆ ನಿಷೇಧಿಸಿದೆ. ಜನರ ಆರೋಗ್ಯಕ್ಕಾಗಿ ಸರ್ಕಾರ ಈ ನಿರ್ಧಾರ ತೆಗೆದುಕೊಂಡಿದೆ ಎಂದು ಆರೋಗ್ಯ ತಜ್ಞರು ಕೂಡ ದೃಢಪಡಿಸಿದ್ದಾರೆ. ಸರ್ಕಾರವು ಮೇಯನೇಸ್ ಜನರ ಆರೋಗ್ಯದ ಹಾಳುಮಾಡುವ ವಿಷ ಎಂದು ಕರೆದು, ತಕ್ಷಣದಿಂದ ಜಾರಿಗೆ ಬರುವಂತೆ ಇದರ ಮಾರಾಟ ಮತ್ತು ಸಂಗ್ರಹಣೆಯನ್ನು ನಿಷೇಧಿಸಿದೆ.

**ಮೇಯನೇಸ್ ಎಂದರೇನು? ಸರ್ಕಾರ ಇದನ್ನು ಬ್ಯಾನ್ ಮಾಡಲು ಕಾರಣಗಳೇನು?:** ಮೇಯನೇಸ್ ಒಂದು ಅರೆ-ಘನ ಆಹಾರ ಪದಾರ್ಥವಾಗಿದ್ದು, ಇದನ್ನು ಸಾಮಾನ್ಯವಾಗಿ ಮೊಟ್ಟೆಯ ಹಳದಿ ಭಾಗ, ಎಣ್ಣೆ, ವಿನೆಗರ್, ಮಸಾಲೆಗಳಿಂದ ತಯಾರಿಸಲಾಗುತ್ತದೆ. ಇದನ್ನು ವಿಶೇಷ ವಾಗಿ ಷಾವರ್ಮಾ, ಬರ್ಗರ್‌ಗಳು ಮತ್ತು ಸ್ಯಾಂಡ್‌ವಿಚ್ ಗಳಂತಹ ತ್ವರಿತ ಆಹಾರಗಳಲ್ಲಿ ಬಳಸಲಾಗುತ್ತದೆ.

**ವೈದ್ಯರು ಹೇಳುವ ಪ್ರಕಾರ:** ದೆಹಲಿಯ ಜಿಟಿಬಿ ಆಸ್ಪತ್ರೆಯ ವೈದ್ಯಕೀಯ ವಿಭಾಗದ ಡಾ. ಅಜಿತ್ ಕುಮಾರ್ ಅವರು, ಮೇಯನೇಸ್ ಅನ್ನು ಹೆಚ್ಚಿನ ಪ್ರಮಾಣದಲ್ಲಿ ಸೇವಿಸಿದರೆ ಅದು ಆರೋಗ್ಯಕ್ಕೆ ಹಾನಿ ಮಾಡುವ ಸಾಧ್ಯತ ಹೆಚ್ಚಿರುತ್ತದೆ.

ಇನ್ನು ಇದರಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಕೊಬ್ಬಿನಾಂಶ ಕಂಡು ಬರುವುದರಿಂದ ರಕ್ತದಲ್ಲಿ ಕೆಟ್ಟ ಕೊಲೆಸ್ಟ್ರಾಲ್ ಅಂಶ ಹೆಚ್ಚಾಗಿ, ಹೃದಯಕ್ಕೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಕಾಣಿಸಿ ಕೊಳ್ಳುವ ಅಪಾಯ ಕೂಡ ಹೆಚ್ಚಿರುತ್ತದೆಯಂತೆ.

# ಮನೆಮದ್ದುಗಳು ಫ್ಯಾಟಿ ಲಿವರ್ ಸಮಸ್ಯೆಯನ್ನು ನಿಯಂತ್ರಣ ಮಾಡುತ್ತವೆ



ಕುಡಿದು ಕುಡಿದು ಲಿವರ್ ಹಾಳು ಮಾಡಿಕೊಳ್ಳಬೇಡ ಎಂದು ಮದ್ಯಪಾನ ಮಾಡುವವರಿಗೆ ಹಲವರು ತಿಳಿ ಹೇಳುವುದನ್ನು ನೋಡಿದ್ದೇವೆ. ಫ್ಯಾಟಿ ಲಿವರ್ ಕಾಯಿಲೆ ಬರಲು ಮಧ್ಯಪಾನ ಪ್ರಮುಖ ಕಾರಣವಾಗುತ್ತದೆ. ಆದರೆ ಕುಡಿಯದೆ ಇದ್ದವರಿಗೂ ಕೂಡ ಈ ಸಮಸ್ಯೆ ಕಾಣಿಸಿಕೊಳ್ಳುತ್ತದೆ ಎನ್ನುತ್ತಾರೆ ಆರೋಗ್ಯ ತಜ್ಞರು! ಮೊದಲನೇಯದಾಗಿ ಹೆಚ್ಚು ಆಲ್ಕೋಹಾಲ್ ಅಂದರೆ ಮದ್ಯಪಾನ ಮಾಡುವವರ ದೇಹದಲ್ಲಿ ಹೆಚ್ಚು ಕೊಬ್ಬಿನ ಅಂಶ ಶೇಖರಣೆ ಆಗುತ್ತಾ ಹೋಗುತ್ತದೆ.


ಅದರಲ್ಲೂ ವಿಶೇಷವಾಗಿ ಲಿವರ್ ಭಾಗದ ಜೀವಕೋಶಗಳಲ್ಲಿ ಇದು ಹೆಚ್ಚು ಶೇಖರಣೆ ಯಾಗಿ, ಲಿವರ್ ಉರಿಯುತಕ್ಕೆ ಕಾರಣವಾಗುತ್ತದೆ.ಆದರೆ ಮಧ್ಯಪಾನ ಮಾಡದೇ ಇರುವವರಲ್ಲಿ ಕೂಡ ಈ ಸಮಸ್ಯೆ ಕಂಡು ಬರುತ್ತಿದ್ದು, ಇದಕ್ಕೆ ಕಾರಣವನ್ನು ನೋಡುವುದಾದರೆ, ನಾವು ಅನುಸರಿಸುತ್ತಿರುವ ಜಡಜೀವನಶೈಲಿ ಹಾಗೂ ಅನಾರೋಗ್ಯಕಾರಿ ಆಹಾರಪದ್ಧತಿಯೇ ಇದಕ್ಕೆ ಪ್ರಮುಖ ಕಾರಣ. ಇದನ್ನು ವೈದ್ಯಕೀಯ ಭಾಷೆಯಲ್ಲಿ ನಾನ್ ಆಲ್ಕೋಹಾಲಿಕ್ ಫ್ಯಾಟಿ ಲಿವರ್ ಡಿಸೀಸ್ ಕಂಡು ಬರುತ್ತದೆ ಎಂದು ಡಾಕ್ಟರ್ ಹೇಳುತ್ತಾರೆ. ಇಂದಿನ ಲೇಖನದಲ್ಲಿ ಕೊಬ್ಬಿನ ಯಾಕೃತ್ ಸಮಸ್ಯೆಗೆ ಅಂದರೆ ಫ್ಯಾಟಿ ಲಿವರ್ ಸಮಸ್ಯೆಯನ್ನು ತಡೆಯಲು ಆಯುರ್ವೇದ ಪರಿಹಾರಗಳು, ಏನೆಲ್ಲಾ ಮುನ್ನೆಚ್ಚರಿಕೆ ತೆಗೆದುಕೊಳ್ಳಬೇಕು ಎಂಬುದನ್ನು ನೋಡೋಣ...

**ಆಯುರ್ವೇದ ತಜ್ಞರು ಹೇಳುವ ಹಾಗೆ:** ಆಚಾರ್ಯ ಬಾಲಕೃಷ್ಣ ಅವರ ಪ್ರಕಾರ, ಆಯುರ್ವೇದದಲ್ಲಿ ಉಲ್ಲೇಖಿ ಸಲಾದ ಶೋಧನ ಚಿಕಿತ್ಸಾ ಮೂಲಕ ಫ್ಯಾಟಿ ಲಿವರ್ ಸಮಸ್ಯೆಗೆ ಚಿಕಿತ್ಸೆ ನೀಡಲಾಗುತ್ತದೆ. ಕೊಬ್ಬಿನ ಪಿತ್ತಜನಕಾಂಗವನ್ನು ಪಿತ್ತರಸದ ಅಸಹಜತೆ ಯಿಂದ ಉಂಟಾಗುವ ಅಸ್ವಸ್ಥೆ ಎಂದು ಪರಿಗಣಿಸಲಾಗುತ್ತದೆ. ಇದರಲ್ಲಿ ಶುದ್ಧೀಕರಣವನ್ನು ಮಾಡಲಾಗುತ್ತದೆ. ಈ ಶುದ್ಧೀಕರಣದ ಪ್ರಕ್ರಿ ಯೆಯಿಂದ ಪಿತ್ತರಸ ಕಡಿಮೆಯಾಗುತ್ತದೆ ಮತ್ತು ದೇಹವು ನಿರ್ವಿಷಗೊಳ್ಳು ತ್ತದೆ. ಕೊಬ್ಬಿನ ಯಕೃತ್ತಿನಲ್ಲಿ ಶುದ್ಧೀಕರಣವನ್ನು ಪರಿಣಾಮಕಾರಿ ಎಂದು ಪರಿಗಣಿಸಲಾಗುತ್ತದೆ. ಇದಲ್ಲದೆ, ಕೊಬ್ಬಿನ ಯಕೃತ್ತನ್ನು ಗುಣಪಡಿ ಸುವಲ್ಲಿ ಪಂಚಕರ್ಮವು ಪರಿಣಾಮಕಾರಿ ಎಂದು ಸಾಬೀತುಪಡಿಸುತ್ತದೆ.?



**ಫ್ಯಾಟಿ ಲಿವರ್ ಸಮಸ್ಯೆಗೆ ಆಯುರ್ವೇದ ಪರಿಹಾರಗಳು**

**ನೆಲ್ಲಿಕಾಯಿ:** ಆಯುರ್ವೇದದಲ್ಲಿ ನೆಲ್ಲಿಕಾಯಿಗೆ ವಿಶೇಷ ಸ್ಥಾನವನ್ನು ನೀಡಲಾಗಿದೆ. ಪ್ರಮುಖವಾಗಿ ಈ ಪುಟ್ಟ ಕಾಯಿಲೆಯಲ್ಲಿ ಅಧಿಕ ಪ್ರಮಾಣ ದಲ್ಲಿ ವಿಟಮಿನ್ ಸಿ ಪ್ರಮಾಣ ಕಂಡುಬರುವುದರಿಂದ, ದೇಹದಿಂದ ವಿಷಕಾರಿ ಅಂಶಗಳನ್ನು ಹೊರ ಹಾಕುವಲ್ಲಿ ನೆರವಿಗೆ ಬರುತ್ತದೆ. ಈ ಮೂಲಕ ದೇಹದ ಲಿವರ್ ಆರೋಗ್ಯವನ್ನು ಅಭಿವೃದ್ಧಿಪಡಿಸು ವಲ್ಲಿ ಪರೀಕ್ಷವಾಗಿ ನೆರವಿಗೆ ಬರುತ್ತದೆ. ಒಳ್ಳೆಯ ಫಲಿತಾಂಶಕ್ಕಾಗಿ ಬೆಳಗಿನ ಸಂದರ್ಭದಲ್ಲಿ ಖಾಲಿ ಹೊಟ್ಟೆಯಲ್ಲಿ ತಾಜಾ ನೆಲ್ಲಿಕಾಯಿ ಸೇವಿಸುವ ಅಭ್ಯಾಸ ಇಟ್ಟುಕೊಳ್ಳಿ. ಇಲ್ಲಾಂದ್ರೆ ಪ್ರತಿದಿನ ದಿನಕ್ಕೆ 3 ಬಾರಿ ಸುಮಾರು 4 ಗ್ರಾಂ ಒಣಗಿದ ಆಮ್ಲಾ ಪುಡಿಯನ್ನು ನೀರಿನೊಂದಿಗೆ ಬೆರೆಸಿ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಒಳ್ಳೆಯದು. ಹೀಗೆ ದಿನಾ ಮಾಡುತ್ತಾ ಬಂದರೆ ಫ್ಯಾಟಿ ಲಿವರ್ ಸಮಸ್ಯೆ ತಕ್ಕಮಟ್ಟಿಗೆ ನಿಯಂತ್ರಣಕ್ಕೆ ಬರುತ್ತದೆ.



**ಮಜ್ಜಿಗೆ ಕುಡಿಯುವ ಅಭ್ಯಾಸ ಮಾಡಿಕೊಳ್ಳಿ:** ಆಯುರ್ವೇದದಲ್ಲಿ, ಮೊಸರಿಗಿಂತ ಮಜ್ಜಿಗೆ ಹೆಚ್ಚು ಪ್ರಯೋಜನಕಾರಿ ಎಂದು ಪರಿಗಣಿಸಲಾಗಿದೆ.

ಮಧ್ಯಾಹ್ನದ ಊಟದ ಬಳಿಕ ಒಂದು ಲೋಟ ಮಜ್ಜಿಗೆ ಕುಡಿದರೆ ತುಂಬಾನೇ ಒಳ್ಳೆಯದು. ಇನ್ನು ಮಜ್ಜಿಗೆಯನ್ನು ಹಾಗೆಯೇ ಕುಡಿಯುವ ಬದಲು ಇದಕ್ಕೆ ಚಿಟಿಕೆಯಷ್ಟು ಇಂಗು, ಕಪ್ಪು ಉಪ್ಪು, ಜೀರಿಗೆ ಮತ್ತು ಕರಿಮೆಣಸನ್ನು ಬೆರೆಸಿ ಕುಡಿಯುವ ಅಭ್ಯಾಸ ಮಾಡಿಕೊಂಡರೆ ಫ್ಯಾಟಿ ಲಿವರ್ ಸಮಸ್ಯೆಯಿಂದ ಪರಿಹಾರ ಕಂಡು ಕೊಳ್ಳಬಹುದು.

**ಗ್ರೀನ್ ಟೀ ಕುಡಿಯುವ ಅಭ್ಯಾಸ ಇಟ್ಟುಕೊಳ್ಳಿ:** ಇನ್ನು ಕೆಫೀನ್ ಅಂಶ ಹೆಚ್ಚಿರುವ ಟೀ-ಕಾಫಿ ಕುಡಿಯುವ ಬದಲು ಗಿಡ ಮೂಲಿಕೆ ಚಹಾ ಎಂದೇ ಪ್ರಸಿದ್ಧಿ ಪಡೆದಿರುವ ಗ್ರೀನ್ ಟೀ ಕುಡಿಯುವ ಅಭ್ಯಾಸ ಇಟ್ಟುಕೊಂಡರೆ ಬಹಳ ಒಳ್ಳೆಯದು ಎಂದು ಹೇಳಲಾಗುತ್ತದೆ. ಈ ಗಿಡಮೂಲಿಕೆ ಚಹಾದಲ್ಲಿ ಆಂಟಿ ಆಕ್ಸಿಡೆಂಟ್‌ಗಳನ್ನು ಹೆಚ್ಚಾಗಿ ಒಳ ಗೊಂಡಿದೆ. ಇದು ಲಿವರ್ ಕಾರ್ಯ ಚಟುವಟಿಕೆಯನ್ನು ಹೆಚ್ಚಿಸುವುದು ಮಾತ್ರವಲ್ಲದೆ ಕೊಬ್ಬಿನ ಅಂಶ ಶೇಖರಣೆ ಆಗದಂತೆ ನೋಡಿಕೊಳ್ಳುತ್ತದೆ.

**ಹಾಗಲಕಾಯಿ:** ಈಗಾಗಲೇ ಕೊಬ್ಬಿನ ಯಕೃತ್ತು ಅಥವಾ ಫ್ಯಾಟಿಲಿವರ್ ಸಮಸ್ಯೆ ಇರುವವರು ಹಾಗಲಕಾಯಿಯನ್ನು ಸೇವಿಸುವ ಅಭ್ಯಾಸ ಮಾಡಿಕೊಳ್ಳಬೇಕು. ಈ ತರಕಾರಿ ಕೊಬ್ಬಿನ ಅಂಶ ಶೇಖರಣೆ ಆಗದಂತೆ ನೋಡಿಕೊಳ್ಳುವುದ ಜೊತೆಗೆ, ಲಿವರ್ ಆರೋಗ್ಯವನ್ನು ಕೂಡ ಕಾಪಾಡುತ್ತದೆ. ಕೊಬ್ಬಿನ ಯಕೃತ್ತು ಹೊಂ ದಿರುವ ರೋಗಿಗಳು ಹಾಗಲಕಾಯಿ ತರಕಾರಿಯನ್ನು ಅಡುಗೆಯಲ್ಲಿ ಸೇರಿಸಿಕೊಂಡರೆ ಒಳ್ಳೆಯದು ಹಾಗೂ ಈ ತರಕಾರಿಯ ಜ್ಯೂಸ್ ಮಾಡಿ ಕುಡಿಯುವ ಅಭ್ಯಾಸ ಮಾಡಿಕೊಳ್ಳಬೇಕು.

# ಈ ಆರೋಗ್ಯ ಸಮಸ್ಯೆಯಿಂದ ಬಳಲುತ್ತಿರುವವರು ತಪ್ಪಿಯೂ ಕೂಡ ಮಾವಿನಹಣ್ಣು ತಿನ್ನಬಾರದು

**ಯುಗಾದಿ ಹಬ್ಬ ಕಳೆದ ನಂತರ ಮಾವಿನ ಹಣ್ಣುಗಳು ಭರಾಟೆ ಎಲ್ಲ ಕಡೆ ಪ್ರಾರಂಭವಾಗುತ್ತದೆ. ಸಕತ್ ರುಚಿಯಾಗಿರುವ ಈ ಹಣ್ಣುಗಳು ಮಾರುಕಟ್ಟೆಗೆ ಕಾಲಿಟ್ಟ ಎಂದರೆ ಉಳಿದ ಹಣ್ಣುಗಳ ಬೇಡಿಕೆ ಕೊಂಚ ಕುಸಿಯುತ್ತದೆ ಎಂದು ಹೇಳುತ್ತಾರೆ ಅಷ್ಟೊಂದು ಡಿಮ್ಯಾಂಡ್ ಇರುತ್ತೆ ಈ ಹಣ್ಣಿಗೆ. ಆದರೆ ಕೆಲವೊಂದು ಆರೋಗ್ಯ ಸಮಸ್ಯೆ ಇರುವವರು ತಪ್ಪಿಯೂ ಕೂಡ ಮಾವಿನಹಣ್ಣು ತನ್ನಬಾರದು**

**-ನಮಾಮಿ ಅಗರ್ವಾಲ್, ಪೌಷ್ಟಿಕತಜ್ಞೆ**

ಪ್ರಕೃತಿ ಕಾಲಕಾಲಕ್ಕೆ ತಕ್ಕ ಹಾಗೆ ನಿಸರ್ಗದತ್ತವಾದ ಹಣ್ಣು ಮತ್ತು ತರಕಾರಿ ಗಳನ್ನು ಮನುಷ್ಯನಿಗೆ ನೀಡುತ್ತಾ ಬರುತ್ತಿದೆ. ಹೀಗಾಗಿ ಋತುವಿಗೆ ಅನುಗುಣವಾಗಿ ಸಿಗುವ ಈ ಹಣ್ಣುಗಳನ್ನು ಮತ್ತು ತರಕಾರಿಗಳನ್ನು ಸೇವಿಸುತ್ತಾ ಬರುವುದರಿಂದ ನಮ್ಮ ಆರೋಗ್ಯವನ್ನು ಸದೃಢತೆಯನ್ನು ಕಾಯ್ದು ಕೊಳ್ಳಲು ನೆರವಾಗುವುದು, ಇದರಲ್ಲಿ ಮಾವಿನಹಣ್ಣು ಕೂಡ ಒಂದು. ಸಾಮಾನ್ಯವಾಗಿ ಏಪ್ರಿಲ್-ಮೇ ತಿಂಗಳು ಬಂತೆಂದರೆ ಮಾವಿನ ಹಣ್ಣಿನ ಸೀಜನ್ ಶುರುವಾಗಿ ಬಿಡುತ್ತದೆ. ಹಣ್ಣುಗಳ ರಾಜ ಎಂದೇ ಕರೆಯಲಾಗುವ ಈ ಹಣ್ಣು ಮಾರುಕಟ್ಟೆಗೆ ಕಾಲಿಟ್ಟ ಎಂದರೆ ಉಳಿದ ಹಣ್ಣುಗಳ ಬೇಡಿಕೆ ಕೊಂಚ ಕುಸಿಯುತ್ತದೆ! ಅಷ್ಟೊಂದು ಪವರ್ ಇದೆ ಈ ಹಣ್ಣಿಗೆ?



**ಮಾವಿನಹಣ್ಣಿನಲ್ಲಿ ಸಿಗುವ ಪೋಷ್ಟಿಕಸತ್ವಗಳ ಬಗ್ಗೆ ನೋಡುವುದಾರೆ:** ಮಾವಿನಹಣ್ಣಿನಲ್ಲಿ ಯಥೇಚ್ಛವಾಗಿ ವಿಟಮಿನ್ ಸಿ, ಕರಗುವ ನಾರಿನಾಂಶ, ದೇಹದಲ್ಲಿ ಉರಿಯೂತಕ್ಕೆ ಕಾರಣವಾಗುವ ಫ್ರೀರ್ಯಾಡಿಕಲ್ಸ್ ವಿರುದ್ಧ ಹೋರಾಡುವ ಆಂಟಿ ಆಕ್ಸಿಡೆಂಟ್, ಪೆಕ್ಟಿನ್ ಎನ್ನುವ ನೈಸರ್ಗಿಕ ಸಿಹಿ ಅಂಶಗಳು ಅಧಿಕ ಪ್ರಮಾಣದಲ್ಲಿ ಕಂಡುಬರುವುದರಿಂದ, ರಕ್ತದಲ್ಲಿ ಕೊಲೆಸ್ಟ್ರಾಲ್ ಮಟ್ಟಗಳು ಆರೋಗ್ಯಕರ ಮಿತಿಗಳಲ್ಲಿ ಇರುವಂತೆ ನೋಡಿಕೊಳ್ಳುವುದರ ಜೊತೆಗೆ, ಹೃದಯದ ಆರೋಗ್ಯ ಜೊತೆಗೆ ಹಲವಾರು ಕಾಯಿಲೆ ಯಿಂದ ನಮ್ಮನ್ನು ದೂರವಿರಿಸುತ್ತದೆ. ಆದರೆ ಇಷ್ಟೆಲ್ಲಾ ಆರೋಗ್ಯ ಪ್ರಯೋಜನಗಳು ಈ ಹಣ್ಣಿನಲ್ಲಿ ಕಂಡು ಬಂದರೂ ಕೂಡ, ಕೆಲವು ಆರೋಗ್ಯ ಸಮಸ್ಯೆಯು ಇರುವವರು ಮಾವಿನ ಹಣ್ಣಿನಿಂದ ದೂರ ಉಳಿದರೆ ಒಳ್ಳೆಯದು ಎಂದು ಪೌಷ್ಟಿಕ ತಜ್ಞೆ ನಮಾಮಿ ಅಗರ್ವಾಲ್ ಅವರು ಸಲಹೆ ನೀಡುತ್ತಾರೆ! ಹಾಗಾದ್ರೆ ಯಾವೆಲ್ಲಾ ಸಮಸ್ಯೆ ಇರುವವರು ಮಾವಿನಹಣ್ಣನ್ನು ಸೇವನೆ ಮಾಡಬಾರದು? ನೋಡೋಣ ಬನ್ನಿ....?

**ಮಧುಮೇಹಿಗಳು ದೂರವಿರಬೇಕು:** ಮಾವಿನಹಣ್ಣಿನಲ್ಲಿ ನೈಸರ್ಗಿಕ ಸಕ್ಕರೆ ಪ್ರಮಾಣ ಕಂಡು ಬರುವುದ ರಿಂದ ಮಧುಮೇಹ ಕಾಯಿಲೆ ಇರುವವರು ಸೇವಿಸಬಹುದು ಎಂದು ಹೆಚ್ಚಿನವರು ಭಾವಿಸುತ್ತಾರೆ.



ಆದರೆ ಪೌಷ್ಟಿಕಾಂಶ ತಜ್ಞರು ಹೇಳುವ ಪ್ರಕಾರ ಮಾವಿನ ಹಣ್ಣಿನಲ್ಲಿ ನೈಸರ್ಗಿಕ ಸಕ್ಕರೆಗಳಾದ ಫ್ರಕ್ಟೋಸ್ ಗ್ಲೂಕೋಸ್ ಅಂಶ ಹೆಚ್ಚಿನ ಪ್ರಮಾಣದಲ್ಲಿ ಕಂಡುಬರುವುದರ ಜೊತೆಗೆ ಕಾರ್ಬೋಹೈಡ್ರೇಟ್ ಗಳು ಅಧಿಕವಾಗಿರುವುದರಿಂದ ಇದು ರಕ್ತದಲ್ಲಿನ ಗ್ಲೂಕೋಸ್ ಮಟ್ಟವನ್ನು ಹೆಚ್ಚಿಸುತ್ತದೆ. ಇನ್ನು ಈ ಹಣ್ಣಿನಲ್ಲಿ ಗ್ಲೈಸೆಮಿಕ್ ಸೂಚ್ಯಂಕ ಸರಿಸುಮಾರು 51-56 ರಷ್ಟಿರುವುದರಿಂದ, ಮಧುಮೇಹಿಗ ಳಲ್ಲಿ ಶುಗರ್ ಲೆವೆಲ್ ಹೆಚ್ಚಿಸುವ ಸಾಧ್ಯತೆ ಹೆಚ್ಚಿರುತ್ತದೆಯಂತೆ! ?

**ತೂಕ ಇಳಿಸಿಕೊಳ್ಳಲು ಬಯಸುವವರು ಈ ಹಣ್ಣಿನಿಂದ ದೂರವಿರಿ:** ದೇಹದ ತೂಕ ಇಳಿಸಿಕೊಳ್ಳಲು ಬಯಸುವವರು ಈ ಹಣ್ಣಿನಿಂದ ದೂರವಿರಿ ಎಂದು ತಜ್ಞರು ಸಲಹೆ ನೀಡುತ್ತಾರೆ! ಇದಕ್ಕೆ ಪ್ರಮುಖ ಕಾರಣ ಇದರಲ್ಲಿ ಕಂಡು ಬರುವ ಅಧಿಕ ಪ್ರಮಾಣದ ಸಕ್ಕರೆಯಾಂಶ, ಕಾರ್ಬೋಹೈಡ್ರೇಟ್ ಗಳು ಮತ್ತು ಕ್ಯಾಲೋರಿ ಅಂಶಗಳಿಂದಾಗಿ ಮಾವಿನ ಹಣ್ಣು ತಿನ್ನಬೇಡಿ ಎಂದೇ ಸೂಚಿಸಲಾಗುತ್ತದೆ.


**ಹೊಟ್ಟೆಗೆ ಸಂಬಂಧಪಟ್ಟ ಸಮಸ್ಯೆ ಇರುವವರು:** ಮಾವಿನ ಹಣ್ಣು ದೇಹಕ್ಕೆ ಸ್ವಲ್ಪ ಉಷ್ಣದ ಪ್ರಭಾವವನ್ನು ಉಂಟು ಮಾಡುತ್ತದೆ. ಹೀಗಾಗಿ ಈ ಹಣ್ಣನ್ನು ಮಿತಪ್ರಮಾಣದಲ್ಲಿ ಸೇವನೆ ಮಾಡ ಬೇಕು ಎಂದು ತಜ್ಞರು ಸಲಹೆ ನೀಡುತ್ತಾರೆ. ಇದಕ್ಕೆ ಪ್ರಮುಖ ಕಾರಣ ಏನೆಂದ್ರೆ ಮಾವಿನಹಣ್ಣನ್ನು ಅತಿಯಾಗಿ ಸೇವನೆ ಮಾಡುವುದರಿಂದ, ಹೊಟ್ಟೆಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳುವ ಸಾಧ್ಯತೆ ಇರುತ್ತದೆ ಯಂತೆ! ಅದರಲ್ಲೂ ರಾತ್ರಿ ಸಮಯದಲ್ಲಿ ಮಾವಿನಹಣ್ಣನ್ನು ಜಾಸ್ತಿ ತಿನ್ನಲೇಬಾರದು.

**ಅಲರ್ಜಿ ಸಮಸ್ಯೆ ಇರುವವರು:** ಬೇಸಿಗೆಕಾಲ ಆದರೂ ಸರಿ ಅಥವಾ ಬೇರೆ ಯಾವುದೇ ಸಮಯ ಆದರೂ ಮಾವಿಹಣ್ಣು ಸಿಕ್ಕಿದಂತಹ ಸಂದರ್ಭದಲ್ಲಿ ಅವುಗಳ ಸೇವನೆ ಮಾಡುವ ಮುನ್ನ ಎಚ್ಚರಿಕೆ ವಹಿಸಿ! ಯಾಕೆಂದ್ರೆ ಮಾರುಕಟ್ಟೆಯಲ್ಲಿ ಮಾವಿನಹಣ್ಣು ಸರಿಯಾಗಿ ಹಣ್ಣಾಗಲು, ಕೆಮಿಕಲ್ಸ್ ಬಳಸಿರುತ್ತಾರೆ. ಆದರೆ ಇಂತಹ ರಾಸಾಯನಿಕ ಅಂಶಗಳು ತ್ವಚೆಗೆ ಸಂಬಂಧಪಟ್ಟ ಆರೋಗ್ಯ ಸಮಸ್ಯೆಗಳು ಹೆಚ್ಚಿಸುತ್ತವೆ! ಹೀಗಾಗಿ ಈಗಾಗಲೇ ಅಲರ್ಜಿ ಸಮಸ್ಯೆ ಇರುವವರು, ಅಥವಾ ಚರ್ಮದ ಸಮಸ್ಯೆಯಿಂದ ಬಳಲುತ್ತಿರು ವವರು ದೂರವಿದ್ದರೆ ಒಳ್ಳೆಯದು.



# ಪ್ರತಿದಿನ ಫ್ರೆಶ್ ಆಗಿರಬೇಕಾ?

ನೀವು ನಾಳೆ ಎದ್ದು ಫ್ರೆಶ್ ಆಗಿ ಯಾವುದಾದರೂ ಕೆಲಸ ಆರಂಭಿಸಬೇಕು ಅಂದುಕೊಳ್ಳುತ್ತೀರಿ, ಆದರೆ ಬೆಳಗ್ಗೆ ಎದ್ದಾಗ ನಿಮಗೆ ಯಾವುದೇ ಕೆಲಸ ಮಾಡಲು ಮನಸ್ಸೇ ಇರುವುದಿಲ್ಲ, ಏನೋ ಸುಸ್ತು, ಉದಾಸೀನ ಕಾಡುತ್ತದೆ. ಈ ಜಡತ್ವವನ್ನು ಹೋಗಲಾಡಿಸಲು ಹಲವಾರು ದಾರಿಗಳಿರಬಹುದು, ಕೆಲವರು ಒಂದು ಕಪ್ ಕಾಫಿ ಅಥವಾ ಟೀ ಕುಡಿಯುತ್ತಾರೆ, ಇನ್ನುಕೆಲವರು ವ್ಯಾಯಾಮ ಮಾಡುತ್ತಾರೆ. ಹಾಗೆಯೇ ಕೆಲವು ಯೋಗ ಭಂಗಿಗಳು ನಿಮ್ಮ ದೇಹದ ಜಡತ್ವ ತೆಗೆದು ಶಕ್ತಿ ತುಂಬಲು ಸಹಕಾರಿ. ನೀವು ಸರಿಯಾದ ರೀತಿಯಲ್ಲಿ ದಿನವನ್ನು ಆರಂಭಿಸಬೇಕೆಂದು ಬಯಸಿದರೆ ಖಂಡಿತವಾಗಿಯೂ ಈ ಯೋಗಾಭ್ಯಾಸಗಳನ್ನು ಪ್ರಯತ್ನಿಸಿ. ಸರಿಯಾದ ಯೋಗ ಭಂಗಿಗಳ ಕೆಲವೇ ನಿಮಿಷಗಳಲ್ಲಿ ನಿಮ್ಮ ದೇಹವನ್ನು ಸಕ್ರಿಯಗೊಳಿಸಬಹುದು, ನಿಮ್ಮ ಮನ ಸ್ಸನ್ನು ರಿಲ್ಯಾಕ್ಸ್ ಮಾಡಿ ಇಡೀ ದಿನಕ್ಕೆ ಸಕಾರಾತ್ಮಕ ಟೋನ್ ಅನ್ನು ಹೊಂದಿಸಬಹುದು. ಈ ಯೋಗಭಂಗಿಗಳು ರಕ್ತ ಪರಿಚಲನೆಯನ್ನು ಹೆಚ್ಚಿಸುವಲ್ಲಿ, ಒತ್ತಡವನ್ನು ಕಡಿಮೆ ಮಾಡುವಲ್ಲಿ, ನಮ್ಯತೆಯನ್ನು ಸುಧಾರಿಸುವಲ್ಲಿ ಪರಿಣಾಮಕಾರಿಯಾಗಿವೆ.



**ತಾಡಾಸನ:** ಈ ಭಂಗಿಯೊಂದಿಗೆ ನಿಮ್ಮ ಅಭ್ಯಾಸವನ್ನು ಪ್ರಾರಂಭಿಸಿ. ನಿಮ್ಮ ಪಾದಗಳನ್ನು ಸೊಂಟದ ಅಗಲದಿಂದ ಪ್ರತ್ಯೇಕಿಸಿ, ನಿಮ್ಮ ಪಾದಗಳ ಮೂಲಕ ನಿಮ್ಮನ್ನು ನೆಲೆಗೊಳಿಸಿಕೊಳ್ಳಿ. ನಿಮ್ಮ ಬೆನ್ನುಮೂಳೆಯನ್ನು ಉದ್ದವಾಗಿಸಿ, ನಿಮ್ಮ ಭುಜಗಳನ್ನು ಸಡಿಲಗೊಳಿಸಿ ಮತ್ತು ನಿಮ್ಮ ಕಣ್ಣುಗಳನ್ನು ನಿಧಾನವಾಗಿ ಮುಚ್ಚಿ, ನಿಮ್ಮ ಉಸಿರಾಟದ ಮೇಲೆ ಕೇಂದ್ರೀಕರಿಸಿ. ಈ ಭಂಗಿಯು ದೇಹದ ಅರಿವು ಮತ್ತು ಸ್ಥಿರತೆಯನ್ನು ಬೆಳೆಸುತ್ತದೆ.

**ಉತ್ತಾನಾಸನ:** ನಿಮ್ಮ ಸೊಂಟದಿಂದ ನಿಧಾನವಾಗಿ ಮುಂದಕ್ಕೆ ಮಡಚಿ, ನಿಮ್ಮ ಬೆನ್ನು ಮೂಳೆಯನ್ನು ಉದ್ದವಾಗಿರಿಸಿ. ನಿಮ್ಮ ತಲೆ ಕೆಳಗಿಳಿಸಿ ತೂಗಾಡಲು ಬಿಡಿ, ನಿಮ್ಮ ಕುತ್ತಿಗೆ ಮತ್ತು ಭುಜಗಳಲ್ಲಿ ಉದ್ವೇಗವನ್ನು ಬಿಡುಗಡೆ ಮಾಡುತ್ತದೆ. ಈ ಭಂಗಿಯು ಸ್ನಾಯುಗಳನ್ನು ಹಿಗ್ಗಿಸುತ್ತದೆ, ನರಮಂಡಲವನ್ನು ಶಾಂತ ಗೊಳಿಸುತ್ತದೆ ಮತ್ತು ಒತ್ತಡವನ್ನು ನಿವಾರಿಸುತ್ತದೆ.

**ಭುಜಂಗಾಸನ:** ನಿಮ್ಮ ಹೊಟ್ಟೆಯ ಮೇಲೆ ಮಲಗಿ ಮತ್ತು ನಿಮ್ಮ ಬೆನ್ನಿನ ಸ್ನಾಯುಗಳನ್ನು ಬಳಸಿಕೊಂಡು ನಿಮ್ಮ ಎದೆಯನ್ನು ಚಾಪೆಯಿಂದ ನಿಧಾನವಾಗಿ ಮೇಲ ಕ್ಕೆತ್ತಿ. ನಿಮ್ಮ ಭುಜಗಳನ್ನು ಆರಾಮವಾಗಿರಿಸಿ ಮತ್ತು ನಿಮ್ಮ ನೋಟವನ್ನು ಸ್ವಲ್ಪ ಮೇಲಕ್ಕೆ ಇರಿಸಿ. ನಾಗರಹಾವಿನ ಭಂಗಿಯು ಎದೆಯನ್ನು ತೆರೆಯು ತ್ತದೆ ಮತ್ತು ಬೆನ್ನುಮೂಳೆಯನ್ನು ಬಲಪಡಿಸುತ್ತದೆ ಮತ್ತು ನಮ್ಯತೆಯನ್ನು ಸುಧಾರಿಸುತ್ತದೆ.

**ಬಾಲಾಸನ:** ನಿಮ್ಮ ಹಿಮ್ಮಡಿಗಳ ಮೇಲೆ ಕುಳಿತುಕೊಳ್ಳುವ ಮೂಲಕ (ಅಥವಾ ಮೊಣಕಾಲುಗಳನ್ನು ಅಗಲವಾಗಿ ಚಾಪೆಯ ಮೇಲೆ ಚಪ್ಪಟೆಯಾಗಿಸಿ) ಮತ್ತು ಮುಂದೆ ಮಡಚಿ, ನಿಮ್ಮ ಹಣೆಯನ್ನು ಚಾಪೆಯ ಮೇಲೆ ಇರಿಸುವ ಮೂಲಕ ಮಗುವಿನ ಭಂಗಿಯಲ್ಲಿ ವಿಶ್ರಾಂತಿ ಪಡೆಯಿರಿ. ಈ ಭಂಗಿಯು ಮನಸ್ಸನ್ನು ಶಾಂತಗೊಳಿಸುತ್ತದೆ ಮತ್ತು ಸೊಂಟ ಮತ್ತು ಬೆನ್ನಿನಲ್ಲಿ ಉದ್ವೇಗವನ್ನು ಬಿಡುಗಡೆ ಮಾಡುತ್ತದೆ.

**ತ್ರಿಕೋನಾಸನ:** ನಿಮ್ಮ ಪಾದಗಳನ್ನು ಅಗಲವಾಗಿ ಇರಿಸಿ ಮತ್ತು ನಿಮ್ಮ ತೋಳುಗಳನ್ನು ಬದಿಗಳಿಗೆ ಚಾಚಿ. ಬದಿಗೆ ಬಾಗಿ, ಒಂದು ಕೈಯನ್ನು ನಿಮ್ಮ ಪಾದದ ಕಡೆಗೆ ತಲುಪಿಸಿ ಮತ್ತು ಇನ್ನೊಂದು ಕೈಯನ್ನು ಛಾವಣಿಯ ಕಡೆಗೆ ಚಾಚಿ. ಈ ಭಂಗಿಯು ಸೊಂಟ, ಕಾಲುಗಳು ಮತ್ತು ಬೆನ್ನುಮೂಳೆಯನ್ನು ವಿಸ್ತರಿ ಸುತ್ತದೆ, ಸಮತೋಲನ ಮತ್ತು ನಮ್ಯತೆಯನ್ನು ಸುಧಾರಿಸುತ್ತದೆ.

# ರಾಮಾಯಣ



ದಶರಥರಾಯನ ಪ್ರಲಾಪ

• ಹಿಂದಿನ ಸಂಚಿಕೆಯಿಂದ **78ನೆಯ ಅಧ್ಯಾಯ**

ನೀನು ನಿನ್ನ ಅತ್ಯಂತ ಉನ್ನತವಾಗಿ ವಾಯುವೇಗ ಮನೋವೇಗವುಳ್ಳ ಕೊಬ್ಬಿದ ಕುದುರೆಗಳಿಂದ ಶೀಘ್ರ ಗತಿಯುಳ್ಳ ರಥವನ್ನೇರಿಕೊಂಡು ಹೋದರೆ ನಾವು ನಿನ್ನ ಬೆನ್ನು ಹಿಡಿದು ಬರಲಾರವು. ನೀನು ವನಕ್ಕೆ ಹೋಗುವುದನ್ನು ಕಂಡು ವೃಕ್ಷಗಳು ಚಲಿಸುವ ತಳಿರುಗಳೆಂಬ ಕೈಗಳನ್ನು ಬೀಸುತ್ತ ತಮ್ಮಲ್ಲಿರುವ ಪಕ್ಷಿಗಳ ಧ್ವನಿಗಳಿಂದ ನಿಲ್ಲುನಿಲ್ಲು ಸ್ವಾಮಿ, ಲೋಕರಕ್ಷಕ ಎಂದು ಕರೆಯುತ್ತಿರು ವಂತೆ ಕಾಣುತ್ತಿದೆ. ಪಕ್ಷಿಗಳೆಲ್ಲವೂ ಸರ್ವಭೂತದಯಾಪರನಾದ ನೀನು ವನವನ್ನೆ ದುವುದನ್ನು ಕಂಡು ಒಂದು ಕೊಂಬೆಯಿಂದ ಮತ್ತೊಂದು ಕೊಂಬೆಗೆ ಹಾರುತ್ತ ಸಂಚಾರವನ್ನೂ ಆಹಾರಗಳನ್ನೂ ಬಿಟ್ಟಿವೆ ಎಂದು ನುಡಿದರು. ಈ ರೀತಿಯಲ್ಲಿ ಹಂಬಲಿಸುತ್ತ ಹಿಂದೋಡಿಬರುತ್ತಿದ್ದ ಬ್ರಾಹ್ಮಣರನ್ನು ತಿರುಗಿ ಕಳುಹಿಸ ಬೇಕೆಂದು ದಾರಿಯನ್ನಡಗಟ್ಟಿತೋ ಎಂಬಂತೆ ತಮಸಾನದಿಯು ಸಮೀಪವಾಯಿತು ಆಗ ಸಾರಥಿಯಾದ ಸುಮಂತ್ರಮ ರಥಕ್ಕೆ ಕಟ್ಟಿದ ಕುದುರೆಗಳನ್ನು ಬಿಚ್ಚಿ ಅವುಗಳ ಮೈಯನ್ನಾಜ್ಞೆ ನೀರು ಕುಡಿಯಿಸಿ ಮಾರ್ಗದ ಬಳಲಿಕೆಯನ್ನು ಪರಿಹರಿಸಿದನು. ತಮಸಾನದಿಯ ತೀರದಲ್ಲಿ ರಥವು ನಿಂತಿತು.

## ಶ್ರೀರಾಮನು ತನ್ನ ಹಿಂದೆ ಬಂದ ಪ್ರಜೆಗಳನ್ನು ಬಿಟ್ಟು ವನಕ್ಕೆ ಹೋದದ್ದು

ಆಮೇಲೆ ಶ್ರೀರಾಮನು ಮನೋಹರವಾದ ತಮಸಾನದೀತೀರವಕ್ಕೆದಿ ತನ್ನ ಪ್ರಾಣಕಾಂತೆಯಾದ ಸೀತಾದೇವಿಯನ್ನು ನೋಡಿ ಲಕ್ಷ್ಮಣನನ್ನು ಕುರಿತು ಹೀಗೆ ನುಡಿದನು ಲಕ್ಷ್ಮಣ. ವನವಾಸದಲ್ಲಿ ಸಂತೋಷವಾಗುವಂತೆ ಯತ್ನವನ್ನು ಮಾಡು. ನಿರ್ಜನಪ್ರದೇಶವಾದ ಅರಣ್ಯವನ್ನು ನೋಡು ಅಲ್ಲಲ್ಲಿ ಮೃಗಪಕ್ಷಿಗಳು ತಮ್ಮ ಸ್ಥಾನಗಳನ್ನು ಸೇರುವುದನ್ನು ನೋಡು. ಪಕ್ಷಿಗಳ ಧ್ವನಿಗಳಿಂದ ಈ ವನವು ರೋದನಮಾಡುತ್ತಿದೆಯೋ ಎಂಬಂತೆ ಭಯಂಕರವಾಗಿದೆ. ನಮ್ಮ ತಂದೆಯಾದ ದಶರಥರಾಯನ ರಾಜಧಾನಿಯಾದ ಅಯೋಧ್ಯಾ ಪಟ್ಟಣದಲ್ಲಿರುವ ಸ್ತ್ರೀಯರೂ ವೃದ್ಧರೂ ಗೋಳಿಡುತ್ತಿರುವರು. ಈ ಅರ್ಥದಲ್ಲಿ ಸಂಶಯವಿಲ್ಲ. ದಶರಥರಾಯನೂ ಭರತಶತ್ರುಘ್ನರೂ ನಮ್ಮನ್ನು ನೆನೆದು ಹಂಬಲಿಸುತ್ತಿರುವರು. ನಾವು ನಮ್ಮ ತಂದೆಯಾದ ದಶರಥ ರಾಯನನ್ನೂ ಕೌಸಲ್ಯಾದೇವಿಯನ್ನೂ ನೆನೆದು ಹಂಬಲಿಸುತ್ತಿದ್ದೇವೆ. ಭರತಶತ್ರುಘ್ನರಿಬ್ಬರೂ ನಮ್ಮಲ್ಲಿ ಪ್ರೀತಿಯುಳ್ಳವರಾಗಿ ಬಹಳ ದಃಖಪಡುತ್ತಿರುವರು. ಧರ್ಮಾತ್ಮನಾದ ಭರತನು ದಶರಥರಾಯನನ್ನೂ ಕೌಸಲ್ಯಾದೇವಿಯನ್ನೂ ಮೃದುನುಡಿಗಳಿಂದ ಸಂತವಿಡುವನು. ಭರತನ ಸತ್ಯಸಂಧತ್ವವನ್ನು ಬಲ್ಲ ನಾವು ನಮ್ಮ ತಾಯಿತಂದೆಗಳಿಗಾಗಿ ಚಿಂತಿಸುವುದೇಕೆ ಲಕ್ಷ್ಮಣ.

ನೀನು ನನ್ನ ಸಂಗಡ ಬಂದು ಕರ್ತವ್ಯವನ್ನು ಮಾಡಿದೆ. ಈ ಸೀತಾದೇವಿಯ ರಕ್ಷಣಾರ್ಥವಾಗಿ ಒಂದು ಉಪಾಯವನ್ನು ಮಾಡಬೇಕು. ಈಗ ಉದಕಾಹಾರವನ್ನು ಮಾಡಿ ಈ ರಾತ್ರಿಯನ್ನು ಕಳೆಯೋಣ ಉದಾಹಾರವನ್ನೇ ಮಾಡಬೇಕೆಂದು ನನ್ನ ಬುದ್ಧಿಗೆ ತೋರುತ್ತವೆ ಎಂದು ನುಡಿದು ಸುರಥಿಯಾದ ಸುಮಂತ್ರನನ್ನು ಕುರಿತು ಸುಮಂತ್ರ, ನೀನು ಸಾವಧಾನದಿಂದ ಕುದುರೆ ಗಳನ್ನು ರಕ್ಷಿಸು ಎಂದು ಹೇಳಿದನು. ಸುಮಂತ್ರನು ಸೂರ್ಯಾಸ್ತಮಯವಾಗುತ್ತಿರಲು ಆ ಕಾ?ರೆಗಳನ್ನು ಒಂದು ಕಡೆ ಕಟ್ಟಿ ಬೇಕಾದಷ್ಟು ಹುಲ್ಲು ಹಾಕಿದನು. ಅನಂತರ ಸಂಧ್ಯಾವಂದನವನ್ನು ಮಾಡಿ ಲಕ್ಷ್ಮಣನ ಜೊತೆಯಲ್ಲಿ ರಾಮನಿಗೆ ತಳಿರುಪಾಸಿಗೆಯನ್ನು ನಿರ್ಮಿಸಿದನು. ಶ್ರೀರಾಮನು ಸೀತಾಸಮೇತನಾಗಿ ಆ ತಳಿದ ಹಾಸಿಗೆಯಲ್ಲಿ ಪವಡಿಸಿ ನಿದ್ರೆಗೈವರು. ಅದನ್ನು ಕಂಡು ಲಕ್ಷ್ಮಣನು ವನದಲ್ಲಿ ಮಲಗಿದ್ದವರನ್ನು ಸಾವಧಾನದಿಂದ ಕಾದಿರಬೇಕೆಂಬ ಬುದ್ಧಿಯಿಂದ ನಿದ್ರೆಯನ್ನು ತೊರೆದು ಸುಮಂತ್ರನ ಸಂಗಡ ಶ್ರೀರಾಮನ ಗುಣಗಳನ್ನು ಹೇಳುತ್ತ ಎಚ್ಚರವಾಗಿಯೇ ರಾತ್ರಿಯನ್ನು ಕಳೆದನು.

ಮುಂದುವರಿಯುವುದು...

## ದಿನ ಭವಿಷ್ಯ

| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
|---|---|---|
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನೀವು ಒಂದು ದೀರ್ಘ ಪ್ರಯಾಣಕ್ಕೆ ಹೋಗಲು ಯೋಜನೆ ಹಾಕುತ್ತಿದ್ದ ಹಾಗೆ ನಿಮ್ಮ ಆರೋಗ್ಯ ಮತ್ತು ಇಂಧನ ಸಂರಕ್ಷಣೆಯ ಹವ್ಯಾಸ ನಿಮಗೆ ಅಪಾರವಾದ ಉಪಯೋಗವುಂಟುಮಾಡುತ್ತದೆ.

**ವೃಷಭ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಮಿಥುನ** ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ಭೂಮಿ ಅಥವಾ ಯಾವುದೇ ಆಸ್ತಿಯಲ್ಲಿ ಹೂಡಿಕೆ ಮಾಡುವುದು ನಿಮಗೆ ಮಾರಕವಾಗಬಹುದು.

**ಕರ್ಕಾಟಕ** ಸಂಗಾತಿಯೊಡನೆ ಚಲನಚಿತ್ರ – ರಂಗಭೂಮಿ ಅಥವಾ ಊಟ ನಿಮ್ಮನ್ನು ಒಂದು ಶಾಂತ ಮತ್ತು ಅದ್ಭುತವಾದ ಮನಸ್ಥಿತಿಯಲ್ಲಿರುತ್ತದೆ ಗಡಿಬಿಡಯ ನಿರ್ಧಾರಗಳನ್ನು ಕೈಗೊಳ್ಳಬೇಡಿ.

**ಸಿಂಹ** ಸಣ್ಣ ಸಣ್ಣ ವಿಷಯಗಳು ನಿಮ್ಮ ಮನಸ್ಸು ಕೆಡಿಸಲು ಬಿಡಬೇಡಿ. ನಿಮ್ಮ ಯಾವುದೇ ಹಳೆಯ ಸ್ನೇಹಿತ ಇಂದು ವ್ಯಾಪಾರದಲ್ಲಿ ಲಾಭ ಗಳಿಸಲು ನಿಮಗೆ ಸಲಹೆ ನೀಡಬಹುದು.

**ಕನ್ಯಾ** ನಿಮ್ಮ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ಹಣಕಾಸಿನಲ್ಲಿ ಸುಧಾರಣೆ ನೀವು ಪ್ರಮುಖ ಖರೀದಿಗಳನ್ನು ಮಾಡುವುದನ್ನು ಅನುಕೂಲಕರವಾಗಿಸುತ್ತದೆ.

**ತುಲಾ** ಇಂದು ರಾತ್ರಿ ಸಣ್ಣ ವಿಷಯಗಳಲ್ಲೂ ಕೂಡ ನಿಮ್ಮ ಪ್ರಿಯತಮೆಯ ಜೊತೆಗಿನ ಸಂಬಂಧಗಳು ಶಿಥಿಲಗೊಳ್ಳುತ್ತವೆ. ಹೊಸ ಯೋಜನೆಗಳು ಮತ್ತು ವಿಚಾರಗಳನ್ನು ಕಾರ್ಯರೂಪಕ್ಕೆ ತರಲು ಒಳ್ಳೆಯ ದಿನ.

**ವೃಶ್ಚಿಕ** ವಿಶೇಷವಾಗಿ ಬಿಕ್ಕಟ್ಟಿನ ಸಮಯದಲ್ಲಿ ನಿಮ್ಮ ತಾಳ್ಮೆ ಕಳೆದುಕೊಳ್ಳಬೇಡಿ. ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ.

**ಧನಸ್ಸು** ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ಮನೆಯಲ್ಲಿ ಸಾಮರಸ್ಯ ತರಲು ನಿಕಟ ಸಹಕಾರದೊಂದಿಗೆ ಕೆಲಸ ಮಾಡಬೇಕು. ಪ್ರಣಯ ಸಂತೋಷಕರವೂ ಮತ್ತು ಅದ್ಭುತವೂ ಆಗಬಹುದು.

**ಮಕರ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು.

**ಕುಂಭ** ನಿಮ್ಮ ಉತ್ತಮ ಆರೋಗ್ಯದ ಸಲುವಾಗಿ ದೀರ್ಘ ನಡಿಗೆಗೆ ಹೋಗಿ. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ. ಸಂಬಂಧಗಳೊಂದಿಗಿನ ಸಂಬಂಧಗಳು, ಬಂಧಗಳ ನವೀಕರಣದ ಒಂದು ದಿನ.

**ಮೀನ** ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ.

### ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿನ ಬೇಸಿಗೆ ನೀರಿನ ಸಮಸ್ಯೆ ನಿರ್ವಹಣೆ ಹಾಗೂ ಉದ್ಯೋಗ ಖಾತ್ರಿ, ಕಾಮಗಾರಿ ಪರಿಶೀಲನೆ

# ದಿನಕ್ಕೆ ಸಾವಿರ ಜನರಿಗೆ ಉದ್ಯೋಗ ಖಾತ್ರಿ ಕೆಲಸ ನೀಡದ ಅಧಿಕಾರಿಗಳ ವಿರುದ್ಧ ಕ್ರಮ

• **ಉದಯವಾಹಿನಿ ಆಳಂದ**

ಪ್ರತಿ ಗ್ರಾಪಂನಲ್ಲಿ ಪ್ರತಿದಿನ ಕನಿಷ್ಟ ಸಾವಿರ ಜನರಿಗೆ ಕೆಲಸಕೊಡಬೇಕು. ಹಿಂದೇಟು ಹಾಕುವ ಗ್ರಾಪಂ ಅಭಿವೃದ್ಧಿ ಅಧಿಕಾರಿಗಳ ಮೇಲೆ ಮೂಲಾಜಿಲ್ಲದೆ ಶಿಸ್ತು ಕ್ರಮಜರುಗಿಸಲಾಗುವುದು ಎಂದು ಜಿಲ್ಲಾ ಪಂಚಾಯತ್ ಸಿಇಒ ಭಂವರಸಿಂಗ್ ಮೀನಾ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

**ಉದ್ಯೋಗ ಖಾತ್ರಿ ಕಾಮಗಾರಿ ಪರಿಶೀಲನೆ**

ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿನ ಬೇಸಿಗೆ ನೀರಿನ ಸಮಸ್ಯೆ ನಿರ್ವಹಣೆ ಹಾಗೂ ಉದ್ಯೋಗ ಖಾತ್ರಿ ಕಾಮಗಾರಿ ಪರಿಶೀಲಿಸಿದ ಬಳಿಕ ಪಟ್ಟಣದ ತಾಪಂ ಕಚೇರಿಯಲ್ಲಿ ಕರೆದ ಗ್ರಾಪಂ ಅಧಿಕಾರಿಗಳ ಮತ್ತು ಸಿಬ್ಬಂದಿಗಳ ಸಭೆಯಲ್ಲಿ ಅವರು ಮಾತನಾಡಿ ತಾಕೀತು ಮಾಡಿದರು.

ತಾಪಂ ಇಒ ಮಾನಪ್ಪ ಕಟ್ಟಿಮನಿ ಅವರು ಗ್ರಾಪಂಗಳ ವರದಿ ಮಂಡಿಸಿ ತಾಲ್ಲೂಕಿನ ವಿವಿಧ ಗ್ರಾಪಂಗಳಲ್ಲಿ 16 ಸಾವಿರ ಕಾರ್ಮಿಕರು ಕೆಲಸ ನಿರ್ವಹಿಸಿದ್ದಾರೆ. ಒಟ್ಟು 25 ಸಾವಿರ ಕಾರ್ಮಿಕರಿಗೆ ಕೆಲಸ ನೀಡುವುದು, ಅಲ್ಲದೆ ಜೂನ್ 2ರವರೆಗೆ ಮಳೆ ಬರುವ ತನಕ ಕಾಮಗಾರಿ ನೀಡುವ ಗುರಿ ಹೊಂದಲಾಗಿದೆ ಎಂದು ಸಭೆಯಲ್ಲಿ ಸಿಇಒ ಅವರ ಗಮನಕ್ಕೆ ತಂದು, ಪ್ರತಿದಿನ 25 ಸಾವಿರ ಕೆಲಸ ಕೊಡುವ ಗುರಿಯನ್ನು ವಾರದಲ್ಲಿ ತಲುಪಲಾಗುವುದು ಎಂದು ಭರವಸೆ ನೀಡಿದರು.

ಬೇಸಿಗೆ ಮುಗಿಯುವತನ ಪ್ರತಿದಿನ ಪ್ರತಿ ಗ್ರಾಪಂನಲ್ಲಿ ಸಾವಿರ ಜನಕ್ಕೆ ಉದ್ಯೋಗ ಖಾತ್ರಿಯಡಿ ಕೆಲಸ ಕೊಡಲೇಬೇಕು ಇಲ್ಲವಾದಲ್ಲಿ ಕ್ರಮ ಜರುಗಿಸಲಾಗುವುದು ಎಂದು ಸಭೆಯಲ್ಲಿದ್ದ ಪಿಡಿಒಗಳಿಗೆ ಅವರು ತಾಕೀತು ಮಾಡಿದರು.


ಉದಯವಾಹಿನಿ ಚಿತ್ರ

> ಈ ಅಭಿಯಾನದ ಭಾಗವಾಗಿ, ಗ್ರಾಮ ಪಂಚಾಯತ್‌ನಿಂದ ಡೊಂಗರು ಹಾಗೂ ಕಸ ಸಂಗ್ರಹದ ವಾಹನಗಳ ಮೂಲಕ ಪ್ರತಿ ಗ್ರಾಮದಲ್ಲೂ ಘೋಷಣೆಗಳು, ಮಾಧ್ಯಮ ಜಾಗೃತಿ ಕಾರ್ಯಕ್ರಮಗಳು ನಡೆಸಬೇಕು ಹಾಗೂ ಸಮಾಜದ ಎಲ್ಲಾ ವರ್ಗದವರು ಈ ಯೋಜನೆಯ ಉಪಯೋಗ ಪಡೆಯುವಂತೆ ಬ್ಯಾಂಕ್‌ಗಳು ಸಹ ಜವಾಬ್ದಾರಿಯಿಂದ ತಾವು ಮಾಡುವ ಕಾರ್ಯಗಳಲ್ಲಿ ಜನ ಜಾಗೃತಿ ಮೂಡಿಸಬೇಕು -ಭಂವರಸಿಂಗ್ ಮೀನಾ, ಸಿಇಒ

ಜಿಪಂ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಭಂವರಸಿಂಗ್ ಮೀನಾ ಅವರು ಪ್ರಧಾನಮಂತ್ರಿ ಸುರಕ್ಷಾ ಭೀಮಾ ಯೋಜನೆಯ ಕುರಿತು ಜನರಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕೆಂದು ಸಲಹೆ ನೀಡಿದರು.

18 ರಿಂದ 50 ವರ್ಷ ಮತ್ತು 18 ರಿಂದ 60 ವರ್ಷದೊಳಗಿನವರು ಈ ಯೋಜನೆಯ ಲಾಭ ಪಡೆಯಬಹುದೆಂದು. ಈ ಪಾಲಿಸಿಗೆ ಸರ್ಕಾರಿ ನೌಕರರು, ಕೂಲಿ ಕಾರ್ಮಿಕರು, ರೈತರು ಸೇರಿದಂತೆ ಸಮಾಜದ ಎಲ್ಲಾ ವರ್ಗದವರು ಅರ್ಹರಾಗಿದ್ದಾರೆ ಎಂದು ಹೇಳಿದರು. ಪಾಲಿಸಿಯ ಲಾಭ ಪಡೆಯಲು ಖಾತೆದಾರರು ಪ್ರತಿ ವರ್ಷ ಮೇ ತಿಂಗಳಲ್ಲಿ ತಮ್ಮ ಬ್ಯಾಂಕ್ ಖಾತೆಯಲ್ಲಿ ಕನಿಷ್ಟ 500 ರೂಪಾಯಿ ಜಮಾ ಮಾಡಿಕೊಂಡಿರಬೇಕು. ಇದರೊಂದಿಗೆ 20 ರೂಪಾಯಿ ಅಥವಾ 400 ರೂ. ಮೌಲ್ಯದ ಎರಡು ವಿಭಿನ್ನ ಪಾಲಿಸಿಗಳನ್ನು ಆರಿಸಬಹುದಾಗಿದೆ.

ಈ ಮೊತ್ತವು ಖಾತೆಯಿಂದ ನೇರವಾಗಿ ಕಡಿತವಾಗುತ್ತದೆ. ಪಾಲಿಸಿದಾರರಿಗೆ ಯಾವುದೇ ಅವಘಡ ಅಥವಾ ಅಪಘಾತ ಸಂಭವಿಸಿದರೆ, 24 ಗಂಟೆಗಳ ಒಳಗೆ ವಿಮಾ ಮೊತ್ತವನ್ನು ಪರಿಹಾರವಾಗಿ ನೀಡಲಾಗುತ್ತದೆ ಎಂಬ ಆಶ್ವಾಸನವನ್ನು ದೊರೆಯುತ್ತದೆ. ಈ ಯೋಜನೆಯ ಬಗ್ಗೆ ಜನರಲ್ಲಿ ಅರಿವು ಹೆಚ್ಚಿಸಲು, ಏಪ್ರಿಲ್ 23ರಿಂದ 25ರವರೆಗೆ ಮೂರು ದಿನಗಳ ಮೇಘಾ ಅಭಿಯಾನ ಹಮ್ಮಿಕೊಳ್ಳಲಾಗುತ್ತದೆ.

**ಜನತೆಗೆ ಕುಡಿಯಲು ಶುದ್ಧ ನೀರು ಕೊಡಬೇಕು**


ನೀರಿಲ್ಲದಕ್ಕೆ ಖಾಸಗಿ ನೀರು ತೆಗೆದುಕೊಂಡವರ ಹಣ ಪಾವತಿಗೆ ವಿಳಂಬವಾದರೆ ಸಂಬಂಧಿತ ಗ್ರಾಪಂ ಅಭಿವೃದ್ಧಿ ಅಧಿಕಾರಿಯ ಮೇಲೆ ಕ್ರಮ ಜರುಗಿಸಲಾಗುವುದು ತಕ್ಷಣಕ್ಕೆ ನೀರು ಕೊಟ್ಟವರಿಗೆ ಹಣ ಪಾವತಿಸಬೇಕು. ಅಲ್ಲದೆ, ಜನತೆಗೆ ಕುಡಿಯಲು ಶುದ್ಧ ನೀರು ಕೊಡಬೇಕು. ಪಂಪ್ ಆಪರೇಟರ್‌ಗಳಿಗೆ ನೀಡಿದ ನೀಡಿದ ಕಿಟ್‌ಗಳ ಮೂಲಕ ಪ್ರತಿ ವಾರಕೊಮ್ಮೆ ನೀರಿನ ಮಟ್ಟವನ್ನು ಪರಿಶೀಲಿಸಿ ಪೂರೈಸಬೇಕು. ಬೇಸಿಗೆ ನೀರಿನ ಪ್ರಮಾಣ ಕಡಿಮೆಯಾದ ಬಗ್ಗೆ ಶುದ್ಧ ನೀರಿನ ಬಗ್ಗೆ ಮಾಹಿತಿ ನೀಡಬೇಕು. ನೀರು ಕುಡಿಯಲು ಯೋಗ್ಯವಾಗದಿದ್ದಲ್ಲಿ ಜನರಿಗೆ ನೀರು ಕುಡಿಯದಂತೆ ನಾಮಫಲಕ ಹಾಕಬೇಕು ಎಂದು ಹೇಳಿದ ಅವರು, ಪೂರೈಕೆಯ ಎಲ್ಲಾ ನೀರಿನ ಮೂಲಗಳನ್ನು ಕಾಲಕಾಲಕ್ಕೆ ಸ್ವಚ್ಛತೆ ಕೈಗೊಳ್ಳಿ, ನೀರು ಸೋರಿಕೆಯಾಗದಂತೆ ನೋಡಿಕೊಂಡು ನೀರು ಮಿತವಾಗಿ ಬಳಕೆ ಮುಂದಾಗಬೇಕು ಎಂದು ಅವರು ಎಚ್ಚರಿಸಿದರು.

## ಕುಡಿಯುವ ನೀರಿನ ಸಮಸ್ಯೆ ಆಗದಂತೆ ನೋಡಿಕೊಳ್ಳಿ

• **ಉದಯವಾಹಿನಿ ಭಾಲ್ಕಿ**

ತಾಲ್ಲೂಕಿನ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆಯಿಂದ ಜನರಿಗೆ ಅನಾನುಕೂಲ ಆಗದಂತೆ ಎಲ್ಲಾ ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಜಾಗೃತಿಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ ಹೇಳಿದರು.

ಪಟ್ಟಣದ ತಾಲ್ಲೂಕು ಪಂಚಾಯಿತಿಯಲ್ಲಿ ನಡೆದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಿಸಿಲಿನ ಪ್ರಖರತೆ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು, ಜಲಮೂಲ ಬತ್ತುತ್ತಿದೆ. ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ವಿವಿಧ ಮೂಲಗಳಿಂದ ನೀರಿನ ವ್ಯವಸ್ಥೆ ಮಾಡಿಕೊಂಡು ಸಾರ್ವಜನಿಕರಿಗೆ, ಗ್ರಾಮಸ್ಥರಿಗೆ ನೀರಿನ ತೊಂದರೆ ಆಗದಂತೆ ಎಚ್ಚರ ವಹಿಸಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ನರೇಗಾ


ಉದಯವಾಹಿನಿ ಚಿತ್ರ

ಯೋಜನೆ ಅಡಿಯಲ್ಲಿ ಸ್ಥಳೀಯವಾಗಿ ಹೆಚ್ಚೆಚ್ಚು ಉದ್ಯೋಗ ಸೃಷ್ಟಿಸಬೇಕು. ಯಾವುದೇ ಕಾರಣಕ್ಕೂ ಕೂಲಿ ಕಾರ್ಮಿಕರು ಗುಳೇ ಹೋಗದಂತೆ ನೋಡಿಕೊಳ್ಳಬೇಕು ಎಂದು ತಾಕೀತು ಮಾಡಿದರು. ವಿವಿಧ ಗ್ರಾಮ ಪಂಚಾಯಿತಿಗಳ ಅಭಿವೃದ್ಧಿ ಅಧಿಕಾರಿಗಳು ತಾಲ್ಲೂಕಿನ ವಿವಿಧಡೆ ಈಗಾಗಲೇ ಟ್ಯಾಂಕರ್ ಮೂಲಕ ನೀರು ಪೂರೈಸಲಾಗುತ್ತಿರುವ ಸುಮಾರು ಹತ್ತು ಗ್ರಾಮಗಳ ಮತ್ತು ಮುಂಬರುವ ದಿನಗಳಲ್ಲಿ ನೀರಿನ ಸಮಸ್ಯೆ ಉದ್ಭವಿಸಬಹುದಾದ ಸುಮಾರು 22 ಗ್ರಾಮಗಳ ಮಾಹಿತಿಯನ್ನು ಸಭೆಗೆ ನೀಡಿದರು.

## ಆರ್‌ಸಿಯು ಶುಲ್ಕ ಎರಡೂವರೆ ಪಟ್ಟು ಹೆಚ್ಚಳ: ಆಕ್ಷೇಪ

• **ಉದಯವಾಹಿನಿ ಬೆಳಗಾವಿ**

ಇಲ್ಲಿನ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ 2025–26ನೇ ಸಾಲಿನ ವೃತ್ತಿಪರವಲ್ಲದ ಸ್ನಾತಕ ಕೋರ್ಸ್‌ಗಳ ಪ್ರಥಮ ಸೆಮಿಸ್ಟರ್‌ನ ಪ್ರವೇಶ ಶುಲ್ಕವನ್ನು ಎರಡೂವರೆ ಪಟ್ಟು ಹೆಚ್ಚಳ ಮಾಡಿದ್ದಕ್ಕೆ ಆಕ್ಷೇಪ ವ್ಯಕ್ತವಾಗಿದೆ.

ಬೆಳಗಾವಿ ಮತ್ತು ವಿಜಯಪುರ ಜಿಲ್ಲೆ ಒಳಗೊಂಡ ಆರ್‌ಸಿಯುನಲ್ಲಿ ಪ್ರತಿ ವರ್ಷ ಸ್ನಾತಕ ಕೋರ್ಸ್‌ಗಳ ಪ್ರಥಮ ಸೆಮಿಸ್ಟರ್ 40 ಸಾವಿರ ವಿದ್ಯಾರ್ಥಿಗಳು ಪ್ರವೇಶ ಪಡೆಯುತ್ತಾರೆ. ಈ ಸಲ ಶುಲ್ಕ ಹೆಚ್ಚಳ ಬಡ ವಿದ್ಯಾರ್ಥಿಗಳಿಗೆ ಹೊರೆಯಾಗಿದೆ.

2024–25ರಲ್ಲಿ ಇಲ್ಲಿ ವೃತ್ತಿಪರವಲ್ಲದ ಸ್ನಾತಕ ಕೋರ್ಸ್‌ಗಳ(ಬಿ.ಎ, ಬಿ.ಎಸ್ಸಿ, ಬಿ.ಎಸ್ಸಿ(ಸಕ್ಕರೆ ತಂತ್ರಜ್ಞಾನ), ಬಿ.ಕಾಂ


ಉದಯವಾಹಿನಿ ಚಿತ್ರ

ಮುಂತಾದವು) ಪ್ರಥಮ ಸೆಮಿಸ್ಟರ್‌ಗೆ 1,500 ಪ್ರವೇಶ ಶುಲ್ಕವಿತ್ತು. ಈಗ ಅದು 4.300ಕ್ಕೆ ಏರಿಕೆಯಾಗಿದೆ.

**ವೃತ್ತಿಪರ ಕೋರ್ಸ್ ಶುಲ್ಕವೂ ಹೆಚ್ಚಳ:** 2024–25ರಲ್ಲಿ ವೃತ್ತಿಪರ ಕೋರ್ಸ್‌ಗಳ (ಬಿಬಿಎ, ಬಿ.ಕಾಂ– ಸಿಎಸ್), ಬಿ.ಎಸ್ಸಿ (ಸಿಎಸ್), ಬಿಎಸ್‌ಡಬ್ಲ್ಯು ಮುಂತಾದವು) ಪ್ರವೇಶ ಶುಲ್ಕ 3,660 ಇತ್ತು. 2025 26ನೇ ಸಾಲಿನಲ್ಲಿ ಅದನ್ನು 4,800ಕ್ಕೆ ಹೆಚ್ಚಿಸಲಾಗಿದೆ. ಪ್ರವೇಶ ಪ್ರಕ್ರಿಯೆ ಆರಂಭವಾಗಿಲ್ಲ.

> ನನಗೆ ತಂದೆ ಇಲ್ಲ. ತಾಯಿ ಗಾರೆ ಕೆಲಸ ಮಾಡುತ್ತಾರೆ. ನನಗೆ ಬಿಬಿಎ ಕೋರ್ಸ್ ಓದುವ ಇಚ್ಛೆಯಿದೆ. ಆದರೆ, ಪ್ರವೇಶ ಶುಲ್ಕ ಹೆಚ್ಚಾದರೆ ಓದಲು ಕಷ್ಟವಾಗುವುದು' ಎಂದು ವಿಜಯಪುರ ಜಿಲ್ಲೆಯ ದೇವರ ನಿಂಬರಗಿಯ ವಿದ್ಯಾರ್ಥಿ ಶಿವಾನಂದ ಅಜನಾಳ ತಿಳಿಸಿದರು.

ಆದರೆ, ವಿಶ್ವವಿದ್ಯಾಲಯವು ಪ್ರವೇಶ ಶುಲ್ಕ ನಿಗದಿಪಡಿಸಿ, ಏಪ್ರಿಲ್ 17ರಂದು ಪ್ರಕಟಿಸಿದೆ. ಘಟಕ, ಸರ್ಕಾರಿ, ಅನುದಾನಿತ, ಅನುದಾನರಹಿತ, ಸ್ವಾಯತ್ತ ಕಾಲೇಜುಗಳಿಗೆ ಮಾಹಿತಿ ನೀಡಿದೆ.

## ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಹತ್ಯೆಗಳ ವಿರುದ್ಧ ಮುಸ್ಲಿಂರ ಆಕ್ರೋಶ

• **ಉದಯವಾಹಿನಿ ಕೆಂಭಾವಿ**

ಕಾಶ್ಮೀರದ ಪಹಲ್ಗಾಮ್‌ನಲ್ಲಿ ಅಮಾಯಕ ನಾಗರಿಕರ ಕ್ರೂರ ಹತ್ಯೆಯಾಗಿದ್ದು ಖಂಡಿಸಿ ಪಟ್ಟಣದ ಜಾಮಿಯಾ ಮಸ್ಜಿದ್ ಮುಸ್ಲಿಂ ಮುಖಂಡರು ತೀವ್ರವಾಗಿ ಖಂಡಿಸಿದರು.

ಜಾಮಿಯಾ ಮಸೀದಿಯ ಗುರುಗಳಾದ ಹಮೀದ್ ಮೋಲಾನಾ ವಡಕೇರಿ ಇವರ ನೇತೃತ್ವದಲ್ಲಿ ಜಾಮಿಯಾ ಮಸೀದಿಯ ಮುಂಭಾಗದಲ್ಲಿ ಜುಮಾ ಪ್ರಾರ್ಥನೆಯ ನಂತರ ಕೈಗಳಿಗೆ ಕಪ್ಪು ಪಟ್ಟಿಗಳನ್ನು ಧರಿಸಿ ಸಂಕೇತವಾಗಿ ಪ್ರತಿಭಟನೆ ನಡೆಸಿದರು. ತಮ್ಮ ಕೈಗಳಿಗೆ ಕಪ್ಪು ಪಟ್ಟಿಗಳನ್ನು


ಉದಯವಾಹಿನಿ ಚಿತ್ರ

ಧರಿಸಿ ಭಯೋತ್ಪಾದನೆಯ ವಿರುದ್ಧ ಘೋಷಣೆಗಳನ್ನು ಕೂಗಿದರು, ಸರ್ಕಾರದಿಂದ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ಅಮಾಯಕಗಳ ಕಳೆದ ಹೋದ ಜೀವಗಳಿಗೆ ನ್ಯಾಯ ಒದಗಿಸ ಬೇಕೆಂದು ಆಗ್ರಹಿಸಿದರು. ಅಧಿಕಾರಿಗಳು ನಿರ್ಣಾಯಕ ಕ್ರಮಗಳನ್ನು ತೆಗೆದುಕೊಳ್ಳುವಂತೆ ಮತ್ತು ಕಳೆದುಹೋದ ಅಮಾಯಕ ಜೀವಗಳಿಗೆ ಪ್ರತೀಕಾರ ತೀರಿಸಿಕೊಳ್ಳಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.


ಈ ಸಂಧರ್ಭದಲ್ಲಿ ಗುಲಾಮ್ ರಸೂಲ್ ಸಾಬ್, ಅಲ್ಲಾಬಕ್ಷ ಸಾಸನೂರ್, ಚಂದಾಸಾಬ್, ಅಬ್ದುಲ್ ನಾಶಿ, ಆದಂಸಾಬ್ ನಾಶಿ, ಖಾಲೀಲಅಹ್ಮದ್, ಶಬ್ಬೀರ್ ದಫೆದಾರ್, ಮೈನುದ್ದೀನ್ ನಾಶಿ, ನಯುಮ್ ಖಾಜಿ, ಬಶೀರ್ ನಾಶಿ, ಮುನ್ನಾ ಹುಣಚ್ಯಾಳ, ಆಸೀಫ್ ಸಾಸನೂರ್, ಬಿಲಾಲ್ ಹುಣಚ್ಯಾಳ,ಇಮ್ರಾನ್ ಪಟೇಲ್ ಕಾಚೂರ್, ಸೋಹೆಲ್ ಪೇಶಮಾಮ್ ಹಾಗೂ ಮುಸ್ಲಿಂ ಯುವಕರು ಇದ್ದರು.

## ರೈತರ ವಿವಿಧ ಬೇಡಿಕೆಗಳಿಗಾಗಿ ಮೇ 5ರಂದು ಇಂಡಿ ಬಂದ್

• **ಉದಯವಾಹಿನಿ ಇಂಡಿ**

ರೈತರ ವಿವಿಧ ಬೇಡಿಕೆಗಳಿಗಾಗಿ ಕೆಲವು ದಿನಗಳ ಹಿಂದೆ ಕರವೇ ಸಂಘಟನೆಯಿಂದ ಅಹೋರಾತ್ರಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿತ್ತು ಅಂದು ಕಂದಾಯ ಉಪ ವಿಭಾಗಾಧಿಕಾರಿ ಅನುರಾಧ ವಸ್ತ್ರದ ಹಾಗೂ ಕೃಷಿ ಇಲಾಖೆ ಸಹಾಯಕ ನಿರ್ದೇಶಕರು ಮಹದೇವಪ್ಪ ಏವುರ್ ತಮ್ಮ ಬೇಡಿಕೆಗಳ ಬಗ್ಗೆ ಸರಕಾರದ ಜೊತೆ ಚರ್ಚಿಸಿ ಈಡೇರಿಸುವುದಾಗಿ ಹೇಳಿ ಸತ್ಯಾಗ್ರಹ ಮುಟುಕುಗೋಳಿಸಿದ್ದರು.

ಆದರೆ ಇಲ್ಲಿಯವರೆಗೆ ಕ್ರಮಕೈಗೊಂಡಿರುವುದಿಲ್ಲ ಎಂದು ಕರವೇ ಅಧ್ಯಕ್ಷ ಬಾಳು ಮುಳಜಿ ಹೇಳಿದರು. ನಗರದಲ್ಲಿ ಆಯೋಜಿಸಿದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದ ಅವರು ರೈತರಿಗೆ ನಿರ್ಲಕ್ಷ್ಯ ತೋರಿದರೆ


ಉದಯವಾಹಿನಿ ಚಿತ್ರ

ಸಹಿಸುವುದಿಲ್ಲ. ರೈತರಿಗೆ ಮಾತು ಕೊಟ್ಟಂತೆ ನಡೆಯದುದ್ದರೆ ದಿನಾಂಕ 5/5/2025ರಂದು ಇಂಡಿ ನಗರ ಸೇರಿದಂತೆ ನಾಡಕೆ ಡಿ. ಸಾಲೋಟಗಿ, ಝಳಕಿ, ತಾಂಬಾ ಗ್ರಾಮಗಳಲ್ಲಿ ರಸ್ತೆ ತಡೆದು ಹೋರಾಟ ಮಾಡಲಾಗುವುದು ಎಂದು ಹೇಳಿದರು.

ಮಹೇಶ್ ಹೂಗಾರ, ಧರ್ಮರಾಜ್ ಸಾಲೋಟಗಿ, ಮಹಾವೀರ ಕಾಮನಕೇರಿ, ವಿಜಯಕುಮಾರ ರಾಠೋಡ, ಮಂಜು ದೇವರ ಇದ್ದರು.

## ದಿಢೀರ್ ಬಂದ್ ಕರೆ ಯಶಸ್ವಿ: ಸಾರ್ವಜನಿಕರಿಗೆ ಪರದಾಟ

• **ಉದಯವಾಹಿನಿ ಮೂಡಿಗೆರೆ**

ಕಾಶ್ಮೀರದ ಪಹಲ್ಲಾಮ್‌ನಲ್ಲಿ ಅಮಾಯಕ ಹಿಂದೂ ಪ್ರವಾಸಿಗರ ಮೇಲೆ ನಡೆಸಿದ ಉಗ್ರರ ದಾಳಿಯನ್ನು ವಿರೋಧಿಸಿ ಜೈ ಕರ್ನಾಟಕ ಹಾಗೂ ವಿವಿಧ ಹಿಂದೂ ಪರ ಸಂಘಟನೆ ಮುಖಂಡರು ನೀಡಿದ ದಿಢೀರ್ ಬಂದ್ ಕರೆಯು ಅತ್ಯಂತ ಯಶಸ್ವಿಯಾಯಿತು.

ವಾರದ ಸಂತೆ, ಮೆಡಿಕಲ್, ಹಾಲಿನ ಅಂಗಡಿ ಹಾಗೂ ಪೆಟ್ರೋಲ್ ಬಂಕ್‌ಗಳನ್ನು ಹೊರತು ಪಡಿಸಿ ಉಳಿದೆಲ್ಲ ಅಂಗಡಿ–ಮುಂಗಟ್ಟುಗಳನ್ನು ಬಂದ್ ಮಾಡಿ ವರ್ತಕರು ಬಂದ್‌ಗೆ ಬೆಂಬಲ ನೀಡಿದರು. ಬಂದ್ ಮಾಹಿತಿಯಿಲ್ಲದೇ ಗ್ರಾಮೀಣ ಪ್ರದೇಶದಿಂದ ಪಟ್ಟಣಕ್ಕೆ ಬಂದ ಜನರು ಪರದಾಡುತ್ತಿದ್ದ ದೃಶ್ಯಗಳು ಅಲ್ಲಲ್ಲಿ ಕಂಡು ಬಂದವು. ಬಂದ್ ಮಾಹಿತಿ ತಿಳಿಯದಿದ್ದ ಹಿನ್ನೆಲೆ ಶುಕ್ರವಾರ ಬೆಳಿಗ್ಗೆ ಎಂದಿನಂತೆ ಹೊಟೇಲ್, ಹೂವು, ತರಕಾರಿ, ದಿನಸಿ ಸೇರಿದಂತೆ ಎಲ್ಲಾ ಅಂಗಡಿ ಮಾಲೀಕರು ಬಾಗಿಲು ತೆರೆದು ವ್ಯಾಪಾರ ಆರಂಭಿಸಿದ್ದರು. ಬೆಳಿಗ್ಗೆ 9ಗಂಟೆಗೆ ದಿಢೀರ್ ಎಂಬಂತೆ ಹಿಂದೂ ಪರ ಸಂಘಟನೆಗಳ ಮುಖಂಡರು ಬಂದ್ ಕರೆ ನೀಡಿ, ಅಂಗಡಿ ಮಾಲೀಕರಿಗೆ ಬಾಗಿಲು ಮುಚ್ಚಿ ಸಹಕರಿಸುವಂತೆ ಮನವಿ ಮಾಡಿಕೊಂಡರು.

ಈ ಹಿನ್ನೆಲೆ ವರ್ತಕರು ಅಂಗಡಿ ಬಾಗಿಲು ಮುಚ್ಚಿ ಬಂದ್‌ಗೆ ಸಹಕರಿಸಿದರು. ಪಹಲ್ಲಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆಸಿದ ಉಗ್ರರ ದಾಳಿಯು ಊಹೆಗೂ ನಿಲುಕದ ಘಟನೆಯಾಗಿದ್ದು, ಇದನ್ನು ಖಂಡಿಸಿ ಬಂದ್ ಕರೆ ನೀಡಿದ್ದು ಶ್ಲಾಘನೀಯ.


ಉದಯವಾಹಿನಿ ಚಿತ್ರ

> ದಿಢೀರ್ ಬಂದ್‌ನಿಂದಾಗಿ ಕ್ಯಾಂಟೀನ್ ಹಾಗೂ ಹೊಟೇಲ್ಗಳಲ್ಲಿ ತಯಾರು ಮಾಡಿದ್ದ ಅಡುಗೆ ಹಾಗೆಯೇ ಇಡುವಂತ ಸ್ಥಿತಿ ಉಂಟಾಗಿತ್ತು. ಅಲ್ಲದೇ ಹೂವಿನ ಮಾರಾಟಗಾರರು ಬಿಸಿಲಿಗೆ ಬಾಡಿ ಹೋಗುವ ಹೂವುಗಳನ್ನು ಮಾರಾಟ ಮಾಡಲು ಸಾಧ್ಯವಾಗದೇ ತೊಂದರೆ ಅನುಭವಿಸುವಂತಾಯಿತು.

## ಕರಿಯಮ್ಮ ದೇವಾಲಯದ ಕಾಮಗಾರಿ ತ್ವರಿತವಾಗಿ ಮುಗಿಸಲು ಸೂಚನೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ ಅರಸೀಕೆರೆ**

ಅರಸೀಕೆರೆಯ ಶಕ್ತಿ ದೇವತೆ ಹಾಗೂ ಗ್ರಾಮ ದೇವತೆ ಶ್ರೀ ಕರಿಯಮ್ಮದೇವರ ಅದ್ದೂರಿ ಜಾತ್ರಾ ಮಹೋತ್ಸವ ಶೀಘ್ರದಲ್ಲಿ ಪ್ರಾರಂಭವಾಗಲಿದ್ದು ದೇವಾಲಯದ ಆವರಣದಲ್ಲಿ ನಡೆಯುತ್ತಿರುವ ಇಂಟರ್ಲಾಕ್ ಕಾಮಗಾರಿಯನ್ನು ಶೀಘ್ರದಲ್ಲೇ ಮುಗಿಸುವಂತೆ ನಗರಸಭೆ ಅಧ್ಯಕ್ಷರಾದ ಎಮ್ ಶಮಿವುಲ್ಲಾ ಸ್ಥಳಕ್ಕೆ ಭೇಟಿ ನೀಡಿ ಗುತ್ತಿಗೆದಾರರಿಗೆ ಸೂಚನೆ ನೀಡಿದರು

ದೇವಾಲಯದ ಆವರಣದಲ್ಲಿ ನಡೆಯುತ್ತಿರುವ ಕಾಮಗಾರಿ ಅಚ್ಚುಕಟ್ಟಾಗಿ ಮತ್ತು ಯಾವುದೇ ಲೋಪವಿಲ್ಲದೆ ನಡೆಸಬೇಕು ಜರುರಾಗಿ ಮುಗಿಸಿ ದೇವಾಲಯದ ಆವರಣದಲ್ಲಿ ನಡೆಯಲಿರುವ ಜಾತ್ರಾ ಮಹೋತ್ಸವಕ್ಕೆ ಅನುವು ಮಾಡಿಕೊಡಬೇಕು ಎಂದು ಎಮ್ ಶಮಿವುಲ್ಲಾ ರವರು ಕಾಮಗಾರಿಯನ್ನು ಪರಿಶೀಲನೆ ನಡೆಸಿ ಸೂಚನೆ ನೀಡಿದರು ಅರಸೀಕೆರೆ ನಗರಸಭೆಯ ಇಂಜಿನಿಯರ್‌ಗಳಾದ ಸುನಿಲ್. ರಮೇಶ್. ಮತ್ತು ಜಂಬೂರ್‌ರವರು. ಹಾಗೂ ನಗರಸಭೆ ಸದಸ್ಯರಾದ ಜಿ ಬಿ ದರ್ಶನ್ ಸೇರಿದಂತೆ ಹಲವಾರು ಮುಖಂಡರು, ನಗರಸಭೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಭಾರೀ ಬಿಸಿಲು: ನೆಲಕ್ಕೆ ಉದುರುತ್ತಿದೆ ಎಳೆ ಅಡಿಕೆ

• **ಉದಯವಾಹಿನಿ ಬಸವಾಪಟ್ಟಣ**

ಹೋಬಳಿಯಾದ್ಯಂತ ದಿನೇ ದಿನೇ ಬಿಸಿಲು ಏರುತ್ತಿದ್ದು, ಅಡಿಕೆ ತೋಟಗಳಲ್ಲಿ ಎಳೆ ಅಡಿಕೆ ನೆಲಕ್ಕೆ ಬೀಳುತ್ತಿರುವುದರಿಂದ ರೈತರು ಆತಂಕಗೊಂಡಿದ್ದಾರೆ.

ಕಳೆದ ಎರಡು ವರ್ಷಗಳಿಂದ ಈ ಭಾಗದಲ್ಲಿ ವಾಡಿಕೆಗಿಂತ ಬಿಸಿಲಿನ ಪ್ರಖರತೆ ಹೆಚ್ಚಾಗಿದೆ. ಪ್ರತಿದಿನ 38 ಡಿಗ್ರಿ ಸೆಲ್ಸಿಯಸ್ ಉಷ್ಣಾಂಶ ದಾಖಲಾಗುತ್ತಿದ್ದು. ಬಿಸಿಲ ತಾಪಕ್ಕೆ ಅಡಿಕೆ ಹರಳುಗಳು ನೆಲಕ್ಕೆ ಉದುರುತ್ತಿವೆ. ಇಳುವರಿಯೂ ಕಡಿಮೆಯಾಗಿದೆ. ಎಕರೆಗೆ ಕನಿಷ್ಠ 10ರಿಂದ 12 ಕ್ವಿಂಟಲ್ ಅಡಿಕೆ ಫಸಲು ಬರುತ್ತಿತ್ತು. ಈಗ 5 ರಿಂದ 6 ಕ್ವಿಂಟಲ್‌ಗೆ ಇಳಿದಿದೆ. ಉತ್ಪಾದನಾ ವೆಚ್ಚವೂ ಹೆಚ್ಚಾಗಿದ್ದು, ಈ ರೀತಿ ಹರಳು ಉದುರುತ್ತಿದ್ದರೆ ನಷ್ಟ ಗ್ಯಾರಂಟಿ ಎನ್ನುತ್ತಾರೆ ಅಡಿಕೆ ಬೆಳಗಾರರಾದ ರುದ್ರಪ್ಪ ಮತ್ತು ಹಾಲೇಶಪ್ಪ. ಚನ್ನಗಿರಿ ತಾಲ್ಲೂಕಿನಲ್ಲಿ ಸುಮಾರು 40,000 ಹೆಕ್ಟೇರ್, ಬಸವಾಪಟ್ಟಣ ಹೋಬಳಿಯಲ್ಲಿ ಸುಮಾರು 5,000 ಹೆಕ್ಟೇರ್ ಅಡಿಕೆ ಬೆಳೆ ಇದೆ. ವಾತಾವರಣದಲ್ಲಿನ ತೇವಾಂಶದಲ್ಲಿ ವ್ಯತ್ಯಾಸ ಮುಖ್ಯ ಕಾರಣವಾಗಿದೆ. ಲಘು ಪೋಷಕಾಂಶಗಳ ನಿರ್ವಹಣೆ. ಮೈಕ್ರೋ ನ್ಯೂಟ್ರಿಯನ್ಸ್‌ಗಳಾದ ಜಿಂಕ್ ಮತ್ತು ಬೋರಾನ್‌ಗಳನ್ನು ಒಂದು ಲೀಟರ್ ನೀರಿಗೆ 5 ಮಿ.ಲೀ. ಬೆರೆಸಿ ಅಡಿಕೆ ಮರಗಳ ಸುತ್ತಲೂ ಸಿಂಪರಣೆ ಮಾಡುವುದರಿಂದ ಹರಳು ಉದುರುವುದನ್ನು ತಡೆಯಬಹುದು ಎಂದು ಸಹಾಯಕ ತೋಟಗಾರಿಕೆ ಅಧಿಕಾರಿ ಸೌರಭ್ ತಿಳಿಸಿದ್ದಾರೆ.


ಉದಯವಾಹಿನಿ ಚಿತ್ರ

## ಅವಧಿ ಮುಗಿದರೂ ಪೂರ್ಣಗೊಳ್ಳದ ಸೇತುವೆ: ಆರೋಪ

• **ಉದಯವಾಹಿನಿ ಕಾರವಾರ**

ಕುಮಟಾ ತಾಲ್ಲೂಕಿನ ತಾರಿಬಾಗಿಲು ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಸೇತುವೆ ಕಾಮಗಾರಿಯು ನಿಗದಿತ ಅವಧಿ ಮುಗಿದರೂ ಪೂರ್ಣಗೊಂಡಿಲ್ಲ. ಇದರಿಂದ ಈ ಭಾಗದ ಜನರಿಗೆ ಸುತ್ತು ಬಳಸಿ ಸಂಚರಿಸುವ ಸ್ಥಿತಿ ಎದುರಾಗಿದೆ' ಎಂದು ಸಾಮಾಜಿಕ ಕಾರ್ಯಕರ್ತ ಮಂಜುನಾಥ ಕುಮಾರ ದೂರಿದರು.

ಇಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 2023ರಲ್ಲಿ ಸೇತುವೆ ಕಾಮಗಾರಿ ಆರಂಭಗೊಂಡಿದ್ದು 2025ರ ಜ.16ರ ಒಳಗೆ ಪೂರ್ಣಗೊಳಿಸಬೇಕಿತ್ತು. 18 ಕೋಟಿ ವೆಚ್ಚದ ಕಾಮಗಾರಿಯನ್ನು ಈವರೆಗೆ ಸರಿಯಾಗಿ ನಿರ್ವಹಿಸಿಲ್ಲ' ಎಂದು ಆರೋಪಿಸಿದರು.

'ಸೇತುವೆಯ ಕ್ರಿಯಾ ಯೋಜನೆಯಲ್ಲಿ ಸಂಪರ್ಕ ರಸ್ತೆ ನಿರ್ಮಿಸುವ ಇತ್ತು. ಈವರೆಗೂ ಸಂಪರ್ಕ ರಸ್ತೆ ನಿರ್ಮಾಣ ಮಾಡಿಲ್ಲ. ಸೇತುವೆ ನಿರ್ಮಿಸುವ ಮುನ್ನ ಹೆಗಡೆ ಗ್ರಾಮದಿಂದ ಮಿರ್ಜಾನ್‌ಗೆ ಬಾರ್ಜ್ ಸಂಚರಿಸುತ್ತಿತ್ತು. ಈಗ 8 ಕಿ.ಮೀನಷ್ಟು ದೂರ ಸುತ್ತುಬಳಸಿ ಸಾಗಬೇಕಾಗುತ್ತಿದೆ. ಕಾಮಗಾರಿ ಪೂರ್ಣಗೊಳಿಸದ ಗುತ್ತಿಗೆ ಕಂಪನಿಯನ್ನು ಕಪ್ಪುಪಟ್ಟಿಗೆ ಸೇರಿಸುವಂತೆ ಜಿಲ್ಲಾಧಿಕಾರಿಗೆ ದೂರು ನೀಡಲಾಗಿದೆ' ಎಂದರು.

### • ನಗರವ್ಯಾಪ್ತಿಯಲ್ಲಿ ಪ್ರತಿದಿನ ಕಸ ಸಂಗ್ರಹದ ವಾಹನಗಳ ಮೂಲಕ 35 ಟನ್ ಕಸ ಸಂಗ್ರಹವಾಗುತ್ತಿದೆ

# ಪರಿಸರ ಮಾಲಿನ್ಯ: ಕಸದ ಆಗರವಾದ ಸಾಗರ, ಸ್ಥಳೀಯ ಆಡಳಿತಕ್ಕೆ ತಲೆ ನೋವು

• **ಉದಯವಾಹಿನಿ ಸಾಗರ**

ನಗರದ ವಿವಿಧ ಬಡಾವಣೆಗಳಲ್ಲಿ ಎಲ್ಲೆಂದರಲ್ಲಿ ರಸ್ತೆಯ ಪಕ್ಕದಲ್ಲಿ ಕಸವನ್ನು ಎಸೆಯುವ ಪ್ರವೃತ್ತಿ ಹೆಚ್ಚುತ್ತಿರುವುದು ಸ್ಥಳೀಯ ಆಡಳಿತಕ್ಕೆ ತಲೆ ನೋವಾಗಿ ಪರಿಣಮಿಸಿದೆ. ನಗರಸಭೆಯಿಂದ ವಾಹನಗಳ ಮೂಲಕ ನಿಯಮಿತವಾಗಿ ಕಸದ ಸಂಗ್ರಹಣೆ ಕಾರ್ಯವೇನೋ ನಡೆಯುತ್ತಿದೆ. ಆದಾಗ್ಯೂ ಕೆಲವರು ರಾತ್ರಿ ಹಾಗೂ ಬೆಳಗಿನ ಜಾವದ ವೇಳೆಯಲ್ಲಿ ವಾಹನಗಳಲ್ಲಿ ರಾಶಿರಾಶಿ ಕಸವನ್ನು ತಂದು ಸುರಿಯುತ್ತಿರುವುದರಿಂದ ಪರಿಸರ ಮಾಲಿನ್ಯ ಉಂಟಾಗುತ್ತಿದೆ.

ನಗರದ ಹೃದಯ ಭಾಗದಲ್ಲಿರುವ ವಿವಿಧ ವೃತ್ತಗಳಲ್ಲಿ ಸುರಕ್ಷತೆ, ಕಸ ಸುರಿಯುವುದನ್ನು ತಡೆಗಟ್ಟುವ ದೃಷ್ಟಿಯಿಂದ 24 ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಲಾಗಿದೆ. ನಗರದ ಹೊರ ವಲಯದಲ್ಲಿ 9 ಕಡೆ ಕಸ ಸುರಿದರೆ ದಂಡ ವಿಧಿಸಲಾಗುವುದು ಎಂಬ ಎಚ್ಚರಿಕೆಯ ಫಲಕದೊಂದಿಗೆ ಸಿ.ಸಿ.ಟಿ.ವಿ ಕ್ಯಾಮೆರಾದ ಕಾವಲು ಇದೆ ಎಂದು ತಿಳಿಸಲಾಗಿದೆ.

ಆದರೆ ಹೀಗೆ ತಿಳಿಸಲಾಗಿರುವ ಫಲಕಗಳ ಬಳಿ ಕೆಲವಡೆ ಸಿ.ಸಿ.ಟಿ.ವಿ ಕ್ಯಾಮೆರಾವನ್ನೇ ಅಳವಡಿಸಿಲ್ಲ. ನಗರದ ಹೃದಯ ಭಾಗದ ವೃತ್ತಗಳಲ್ಲಿ ಅಳವಡಿಸಿದ್ದ ಕ್ಯಾಮೆರಾ ಬಹುತೇಕ ಕಡೆ ಕೆಟ್ಟು ಕೂತಿದೆ. ಇದರಿಂದ ಕಸ ಎಸೆಯುವವರಿಗೆ ತಡೆ ಇಲ್ಲವಾಗಿದೆ.

ಹೀಗೆ ರಸ್ತೆಯ ಪಕ್ಕದಲ್ಲಿ, ಖಾಲಿ ನಿವೇಶನಗಳಲ್ಲಿ ಕಸ ಎಸೆಯುವ ಪ್ರವೃತ್ತಿ ಕೇವಲ ನಗರ ಪ್ರದೇಶಕ್ಕೆ ಮಾತ್ರ ಸೀಮಿತವಾಗಿಲ್ಲ. ಸಿಗಂದೂರು, ಜೋಗ ಮೊದಲಾದ ಪ್ರವಾಸಿ ಕೇಂದ್ರಗಳಿಗೆ ಬರುವ ಪ್ರವಾಸಿಗರ ಅಪಾರ ಪ್ರಮಾಣದಲ್ಲಿ ರಸ್ತೆಯ ಪಕ್ಕದಲ್ಲೇ ತ್ಯಾಜ್ಯ ಸುರಿದು ಹೋಗುತ್ತಿದ್ದಾರೆ.


ಉದಯವಾಹಿನಿ ಚಿತ್ರ

**ಕಸ ಸುರಿದರೆ ದಂಡ**

ಖಾಲಿ ಲೇಔಟ್‌ಗಳಲ್ಲಿ ರಾತ್ರಿ ವೇಳೆ ಪಾರ್ಟಿ ಮಾಡಿದವರು ಕೂಡ ರಸ್ತೆಯ ಬದಿಗಳಲ್ಲಿ ಕಸವನ್ನು ಎಸೆಯುತ್ತಿದ್ದಾರೆ. ಸ್ಥಳೀಯ ಆಡಳಿತ ಬೆಳಿಗ್ಗೆ ಹೀಗೆ ಎಸೆದ ಕಸಗಳನ್ನು ವಿಲೆ ಮಾಡಿದರೆ ಮರುದಿನದ ಹೊತ್ತಿಗೆ ಮತ್ತೆ ಕಸ ಬಿದ್ದಿರುವುದು ಸಾಮಾನ್ಯವಾಗಿದೆ.

ನಗರವ್ಯಾಪ್ತಿಯಲ್ಲಿ ಪ್ರತಿದಿನ ಕಸ ಸಂಗ್ರಹದ ವಾಹನಗಳ ಮೂಲಕ 35 ಟನ್ ಕಸ ಸಂಗ್ರಹವಾಗುತ್ತಿದೆ. ತ್ಯಾಜ್ಯ ವಿಲೇವಾರಿ ಘಟಕ ಸೇರಿದಂತೆ ಒಟ್ಟು 107 ಸಿಬ್ಬಂದಿ ಕಸ ಸಂಗ್ರಹಣೆ ಮತ್ತು ವಿಲೆ ಕಾರ್ಯದಲ್ಲಿ ನಿರತರಾಗಿದ್ದಾರೆ. ಈ ಕೆಲಸಕ್ಕೆ 21 ವಾಹನಗಳನ್ನು ಬಳಸಲಾಗುತ್ತಿದೆ' ಎನ್ನುತ್ತಾರೆ ನಗರಸಭೆಯ ಪರಿಸರ ಅಭಿಯಂತರ ಮದನ್.

ಈಚೆಗೆ ಸಂಗಳ ಗ್ರಾಮದಲ್ಲಿರುವ ತ್ಯಾಜ್ಯ ವಿಲೇವಾರಿ ಘಟಕದಲ್ಲಿನ ಕಸದ ರಾಶಿಗೆ ಬೆಂಕಿ ಹೊತ್ತಿಕೊಂಡು ವ್ಯಾಪಕ ಹೊಗೆ ಸುತ್ತಮುತ್ತಲ ಗ್ರಾಮಗಳನ್ನು ಅವರಿಸಿ ಪರಿಸರವನ್ನು ಹಾಳು ಮಾಡಿತ್ತು. ಈ ಕಾರಣಕ್ಕೆ ಗ್ರಾಮಸ್ಥರು ತ್ಯಾಜ್ಯ ವಿಲೆ ಘಟಕವನ್ನು ಬೇರೆಡೆ ಸ್ಥಳಾಂತರಿಸುವಂತೆ ಪ್ರತಿಭಟಿಸಿದ್ದ ಘಟನೆಯೂ ನಡೆದಿದೆ.

ರಸ್ತೆಯ ಬದಿ ಕಸ ಎಸೆಯುವುದು ಕಾನೂನಿನ ಪ್ರಕಾರ ಅಪರಾಧ. ಆದರೆ ಈವರೆಗೆ ನಗರಸಭೆ ವತಿಯಿಂದ 3 ಪ್ರಕರಣಗಳನ್ನು ಮಾತ್ರ ದಾಖಲಿಸಲಾಗಿದೆ. ಹೀಗೆ ಕಸ ಎಸೆಯುವವರನ್ನು ಪತ್ತೆ ಹಚ್ಚಿ ಕಟ್ಟುನಿಟ್ಟಿನ ಕಾನೂನು ಕ್ರಮ ಜರುಗಿಸಿದಲ್ಲಿ ಎಲ್ಲೆಂದರಲ್ಲಿ ಕಸ ಎಸೆಯುವ ಪ್ರವೃತ್ತಿಗೆ ಕಡಿವಾಣ ಹಾಕಬಹುದು ಎಂಬುದು ಸಾರ್ವಜನಿಕರ ಅಭಿಪ್ರಾಯವಾಗಿದೆ.

**ನಗರಸಭೆಯ ವಾಹನಕ್ಕೆ ಕಸ**

> ನೀಡುವವರು ಪ್ಲಾಸ್ಟಿಕ್ ಅನ್ನು ಕಸದಿಂದ ಪ್ರತ್ಯೇಕಿಸಿ ನೀಡಿದರೆ ದೊಡ್ಡ ತ್ಯಾಜ್ಯ ವಿಲೇವಾರಿ ಸುಲಭವಾಗುತ್ತದೆ. ಈಗ ಕಸದಿಂದ ಪ್ಲಾಸ್ಟಿಕ್ ಪ್ರತ್ಯೇಕಿಸುವುದೇ ದೊಡ್ಡ ಕೆಲಸವಾಗಿದೆ. ರಸ್ತೆ ಬದಿಗಳಲ್ಲಿ ಕಸ ಎಸೆಯುವವರ ವಿರುದ್ಧ ಮುಂದಿನ ದಿನಗಳಲ್ಲಿ ಬಿಗಿಯಾದ ಕ್ರಮ ಜರುಗಿಸುವ ಜೊತೆಗೆ ಜನಜಾಗೃತಿಯನ್ನೂ ಮೂಡಿಸಲಾಗುವುದು ಎಚ್. ಕೆ.ನಾಗಪ್ಪ ಪೌರಾಯುಕ್ತ ನಗರಸಭೆ ನಗರದ ಹೃದಯ ಭಾಗ ಹಾಗೂ ಹೊರ ವಲಯದಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ ಕ್ಯಾಮೆರಾಗಳನ್ನು ಸುಸ್ಥಿತಿಯಲ್ಲಿಡುವತ್ತ ಗಮನ ಹರಿಸಲಾಗುವುದು. ರಸ್ತೆಯ ಪಕ್ಕ ಕಸ ಎಸೆಯುವವರ ಬಗ್ಗೆ ಸಾರ್ವಜನಿಕರು ನಗರಸಭೆಗೆ ಮಾಹಿತಿ ನೀಡಿ ಸಹಕರಿಸಬೇಕು -ಮೈತ್ರಿ ಪಾಟೀಲ್, ಅಧ್ಯಕ್ಷರು ನಗರಸಭೆ

## ಬಿರುಗಾಳಿಗೆ ಸಿಲುಕಿ ಎರಡು ಎಕರೆ ಬಾಳೆ ಸಂಪೂರ್ಣ ನಾಶ

• **ಉದಯವಾಹಿನಿ, ಕಲಬುರಗಿ**

ಜಿಲ್ಲೆಯ ಹಲವೆಡೆ ಬಿರುಗಾಳಿ ಸಮೇತ ಮಳೆ ಸುರಿಯುತ್ತಿರುವ ಕಾರಣ ರೈತರು ಕಂಗಾಲಾಗಿದ್ದಾರೆ. ಅಫಜಲಪುರ ತಾಲ್ಲೂಕಿನ ರೇವೂರ್ (ಬಿ) ಗ್ರಾಮದಲ್ಲಿ ಬಿರುಗಾಳಿಯಿಂದಾಗಿ ರೈತ ಪರಮೇಶ ನಾಸಿ ಅವರಿಗೆ ಸೇರಿದ ಎರಡು ಎಕರೆ ಹೊಲದಲ್ಲಿ ಬೆಳೆದಿದ್ದ ಗೊನೆ ತುಂಬಿದ್ದ ಬಾಳೆ ಗಿಡಗಳು ನೆಲಕಚ್ಚಿವೆ. ಪರಮೇಶ ತಮ್ಮ ಎರಡು ಎಕರೆ ಜಮೀನಿನಲ್ಲಿ ಸುಮಾರು ಎರಡು ಸಾವಿರಕ್ಕೂ ಅಧಿಕ ಬಾಳೆಗಿಡಗಳನ್ನು ಬೆಳೆದಿದ್ದರು.

ಆದರೆ ಮಧ್ಯಾಹ್ನ ಸುರಿದ ಬಿರುಗಾಳಿ ಸಹಿತ ಮಳೆಯಿಂದಾಗಿ ಬಾಳೆ ಗಿಡಗಳು ಸಂಪೂರ್ಣ ತಲೆಕೆಳಗಾಗಿವೆ. ಹೀಗಾಗಿ ರೈತ ನಾಸಿ ಕುಟುಂಬ ಆತಂಕಗೊಂಡಿದೆ. ಬೆಳೆದು ನಿಂತಿದ್ದ ಬಾಳೆ ಗಿಡಗಳು ನಾಶವಾಗಿರುವ ಹಿನ್ನೆಲೆಯಲ್ಲಿ ಸರ್ಕಾರ ಕೂಡಲೆ ಪರಿಹಾರ ನೀಡಬೇಕೆಂದು ಪರಮೇಶ ನಾಸಿ ಒತ್ತಾಯಿಸಿದ್ದಾರೆ.


ಉದಯವಾಹಿನಿ ಚಿತ್ರ

# ಪಾಕಿಸ್ತಾನದಲ್ಲಿ ಒಣಗಲಿದೆ ಬೆಳೆದು ನಿಂತ ಫಸಲು

**ಹೊಸದಿಲ್ಲಿ:** ದೇಶ ವಿಭಜನೆ ಆದಾಗಿನಿಂದಲೂ ಕೈಯ್ಯಲ್ಲಿ ಬಾಂಬ್ ಹಿಡಿದುಕೊಂಡಿದ್ದ ಪಾಕಿಸ್ತಾನ ಈಗ ಭಿಕ್ಷಾಪಾತ್ರೆ ಹಿಡಿಯುವ ಸ್ಥಿತಿ ತಂದುಕೊಂಡಿದೆ,'' ಎಂದು ವರ್ಷದ ಹಿಂದೆ ಪ್ರಧಾನಿ ನರೇಂದ್ರ ಮೋದಿ ಹೇಳಿದ್ದರು. ಪಹಲ್ಗಾಮ್ ನರಮೇಧದ ಬಳಿಕ ಭಾರತ ಕೈಗೊಂಡಿರುವ ರಾಜತಾಂತ್ರಿಕ ಕ್ರಮಗಳಿಂದಾಗಿ ಈಗಾಗಲೇ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವ ಪಾಕಿಸ್ತಾನದ ಸ್ಥಿತಿ ಮತ್ತಷ್ಟು ಬಿಗಡಾಯಿಸಲಿದೆ.

ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರು ನಡೆಸಿದ ಹೇಯಕೃತ್ಯಕ್ಕೆ ಪ್ರತೀಕಾರವಾಗಿ ಪಾಕಿಸ್ತಾನ ವಿರುದ್ಧ ಭಾರತ ಪರೋಕ್ಷವಾಗಿ ಆರ್ಥಿಕ ಸಮರ ಸಾರಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ನಡೆದ ಭದ್ರತೆ ಕುರಿತ ಸಂಪುಟ ಸಮಿತಿ ಸಭೆ ಸಮಿತಿ ಕೈಗೊಂಡಿರುವ ತೀರ್ಮಾನಗಳ ಪರಿಣಾಮ ನೇರವಾಗಿ ಪಾಕಿಸ್ತಾನದ ಸಾಮಾನ್ಯ ಪ್ರಜೆಗಳ ಮೇಲೆ ಬೀರಲಿದೆ. ಮುಗ್ಧ ಜನರ ಹತ್ಯೆಯಿಂದ ರೊಚ್ಚಿಗೆದ್ದಿರುವ ಭಾರತ, ಇದೇ ಮೊದಲ ಬಾರಿಗೆ ಇಂತಹ ಕಠೋರ ಕ್ರಮಗಳಿಗೆ ಮುಂದಾಗಿದೆ.

ಸಮರಾಂಗಣದಲ್ಲಿ ನೇರ ಯುದ್ಧಕ್ಕೂ ಮೊದಲು ಶತ್ರು ರಾಷ್ಟ್ರದ ಬೆನ್ನೆಲುಬು ಮುರಿಯುವ ತಂತ್ರವನ್ನು ಮೋದಿ ಸರಕಾರ ಅನುಸರಿಸಿದೆ. ಮೊದಲ ಹಂತದಲ್ಲಿ ಸಿಂಧು ಜಲ ಒಪ್ಪಂದ ಅಮಾನತುಗೊಳಿಸಿ, ಅಟ್ಟಾರಿ-ವಾಘಾ ಗಡಿ ಬಂದ್ ಮಾಡುವ ಮೂಲಕ ವ್ಯಾಪಾರ ವಹಿವಾಟು ಸ್ಥಗಿತಗೊಳಿಸಲಾಗಿದೆ. ಜನಸಾಮಾನ್ಯರಿಗೆ ನೀಡಲಾಗುತ್ತಿದ್ದ ವೈದ್ಯಕೀಯ ವೀಸಾ ಸೇರಿದಂತೆ ಎಲ್ಲಾ ಬಗೆಯ ವೀಸಾ ರದ್ದುಗೊಳಿಸುವ ಮೂಲಕ ಉಭಯ ದೇಶಗಳ ನಡುವಿನ ದಿನನಿತ್ಯದ ವ್ಯವಹಾರಿಕ ಚಟುವಟಿಕೆಗೆ ಬ್ರೇಕ್ ಹಾಕಲಾಗಿದೆ.

### ವೀಸಾ ರದ್ದು ಸಂಕಟ

ಏ.27ರಿಂದ ಜಾರಿಗೆ ಬರುವಂತೆ ಭಾರತವು ಪಾಕಿಸ್ತಾನದ ಪ್ರಜೆಗಳಿಗೆ ನೀಡಿರುವ ಎಲ್ಲಾ ಬಗೆಯ ವೀಸಾಗಳನ್ನು ರದ್ದುಗೊಳಿಸಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಗುರುವಾರ ತಿಳಿಸಿದೆ. ಭಾರತ-ಪಾಕಿಸ್ತಾನದ ಗಡಿ ಪ್ರದೇಶದಲ್ಲಿ ದಿನ ನಿತ್ಯ ಸಾವಿರಾರು ಜನ ಓಡಾಡುತ್ತಿದ್ದರು. ವೀಸಾ ರದ್ದು ಕ್ರಮದಿಂದ ಜನ ಸಾಮಾನ್ಯರು, ಬೆಟ್ಟ ಪ್ರವಾಸಿಗರ ಓಡಾಟಕ್ಕೆ ಅಡ್ಡಿಯಾಗಲಿದೆ. ಗಡಿ ಜನರ ನಡುವಿನ ಆರ್ಥಿಕ, ಸಾಮಾಜಿಕ, ವೈಯಕ್ತಿಕ ಸಂಬಂಧಗಳು ಸಂಕಷ್ಟದ ಸುಳಿಗೆ ಸಿಲುಕಲಿವೆ. ಆರೋಗ್ಯ, ಶಿಕ್ಷಣ, ಸಾಂಸ್ಕೃತಿಕ ವಿನಿಮಯದಂತಹ ವಿಷಯವಾಗಿ ಭಾರತಕ್ಕೆ ಆಗಮಿಸುತ್ತಿದ್ದ ಪಾಕಿಸ್ತಾನಿ ಪ್ರಜೆಗಳ ಮೇಲೆ ಪ್ರತಿಕೂಲ ಪರಿಣಾಮ ಬೀರಲಿದೆ.




- ಭಾರತ ಮತ್ತು ಪಾಕಿಸ್ತಾನ ನಡುವಿನ ಸಿಂಧು ಜಲ ಒಪ್ಪಂದವನ್ನು ಅನಿರ್ದಿಷ್ಟಾವಧಿಗೆ ತಡೆ ಹಿಡಿದ ಭಾರತ
- ಇದು ಪಾಕಿಸ್ತಾನದ ಕೃಷಿ ಮತ್ತು ಆಹಾರ ಸುರಕ್ಷತೆಗೆ ತೀವ್ರ ಪರಿಣಾಮ ಬೀರುವ ಸಾಧ್ಯತೆ
- ಅಟ್ಟಾರಿ-ವಾಘಾ ಗಡಿಯನ್ನು ಬಂದ್ ಮಾಡಿದ ಭಾರತ, ಪಾಕಿಸ್ತಾನದ ವ್ಯಾಪಾರಕ್ಕೆ ತೀವ್ರ ಅಡ್ಡಿ
- ಪಾಕಿಸ್ತಾನ ಪ್ರಜೆಗಳಿಗೆ ನೀಡುವ ಎಲ್ಲಾ ಬಗೆಯ ವೀಸಾಗಳನ್ನು ರದ್ದುಗೊಳಿಸಿದ ಭಾರತ

ಭಾರತದ ಮೇಲೆ ಉಗ್ರ ದಾಳಿ ನಡೆದ ಸಂದರ್ಭದಲ್ಲಿ ಸಿಂಧು ಜಲ ಒಪ್ಪಂದ ವಿಚಾರ ಚರ್ಚೆಗೆ ಬರುತ್ತಿತ್ತು. ಆದರೆ, ಮಾನವೀಯತೆ, ಪ್ರಾದೇಶಿಕ ಹಿತ ಕಾಯ್ದುಕೊಳ್ಳಲು ಒಪ್ಪಂದ ಮುರಿಯುವ ಮನೋಭಾವವನ್ನು ಭಾರತ ಎಂದೂ ತೋರಿಸಲಿಲ್ಲ. ಸಿಂಧು ಕಣಿವೆಯ ನದಿಗಳು ಪಾಕಿಸ್ತಾನದ ಜೀವನಾಡಿ, ಕೃಷಿ, ಜಲ ವಿದ್ಯುತ್ ಉತ್ಪಾದನೆ, ಕೈಗಾರಿಕೆ, ಕುಡಿಯುವ ನೀರಿಗಾಗಿ ಇದೇ ನದಿಗಳ ನೀರನ್ನು ಅವಲಂಬಿಸಿದೆ. ಪಾಕಿಸ್ತಾನದ ಶೇ.70ರಷ್ಟು ಕೃಷಿ ಸಿಂಧು ಕಣಿವೆ ನದಿ ನೀರು ಆಧಾರಿತವಾಗಿದೆ. ಭಾರತ ನೀರಿನ ಹರಿವು ನಿಲ್ಲಿಸಿದರೆ ಪಾಕಿಸ್ತಾನದಲ್ಲಿ ನೀರು, ಆಹಾರದ ಹಾಹಾಕಾರ ಉಂಟಾಗಬಹುದು. ಆರ್ಥಿಕ ಅಸ್ಥಿರತೆಗೆ ಕಾರಣವಾಗಿ ಜನಜೀವನ ಸಂಕಷ್ಟಕ್ಕೆ ಸಿಲುಕುವ ಅಪಾಯವಿದೆ.

1. ಭಾರತ ನೀರಿನ ಹರಿವು ನಿಲ್ಲಿಸುವುದರಿಂದ ಪಾಕಿಸ್ತಾನದ ಶೇ. 80ರಷ್ಟು ಕೃಷಿ ಭೂಮಿ ಭವಿಷ್ಯದಲ್ಲಿ ಬರಡಾಗಲಿದೆ. ಮುಖ್ಯವಾಗಿ ಭತ್ತ, ಕಬ್ಬು, ಹತ್ತಿ ಮೊದಲಾದ ಆಹಾರ, ವಾಣಿಜ್ಯ ಬೆಳೆಗಳ ಮೇಲೆ ವ್ಯಾಪಕ ಪರಿಣಾಮ ಬೀರಲಿದೆ. ಆಹಾರ ಆಮದು ಮಾಡಿಕೊಳ್ಳುವ ಸನ್ನಿವೇಶ ಎದುರಾಗಬಹುದು. ಪಾಕಿಸ್ತಾನದ ಶೇ. 50ರಷ್ಟು ಉದ್ಯೋಗ, ಶೇ. 25ರಷ್ಟು ಜಿಡಿಪಿ ಕೃಷಿಯನ್ನೇ ಅವಲಂಬಿಸಿದೆ.

> ಸಿಂಧು ಜಲ ಒಪ್ಪಂದದ ಪ್ರಕಾರ ಕೆಳಗಿನ ಪ್ರದೇಶದ ಪಾಲಿನ ನೀರಿನ ಹರಿವು ಸ್ಥಗಿತ ಅಥವಾ ತಿರುಗಿಸುವ ಯಾವುದೇ ಪ್ರಯತ್ನವನ್ನು ಯುದ್ಧದ ಕೃತ್ಯವೆಂದು ಪರಿಗಣಿಸಲಾಗುತ್ತದೆ. ಮೇಲ್ಭಾಗದ ದೇಶದ ಕ್ರಮಕ್ಕೆ ಪೂರ್ಣ ಬಲ ಪ್ರಯೋಗದ ಮೂಲಕ ಉತ್ತರ ನೀಡಲಾಗುತ್ತದೆ.
> 
> -ಪಾಕಿಸ್ತಾನ ಜಲ ಸಂಪನ್ಮೂಲ ಸಚಿವಾಲಯ

### ಸರಕುಗಳ ದರ ಮತ್ತಷ್ಟು ತುಟ್ಟಿ

ಅಟ್ಟಾರಿ - ವಾಘಾ ಗಡಿ ಭಾರತ - ಪಾಕಿಸ್ತಾನ - ಅಫ್ಘಾನಿಸ್ತಾನ ನಡುವಿನ ವ್ಯಾಪಾರ ವಹಿವಾಟಿನ ರಾಜಮಾರ್ಗ. ಅಮೃತಸರದಲ್ಲಿರುವ ಭೂ ಬಂದರು ಮೂಲಕ ವ್ಯವಹಾರಿಕ ಚಟುವಟಿಕೆ ನಡೆಯುತ್ತಿದೆ. ಅಟ್ಟಾರಿ - ವಾಘಾದಲ್ಲಿರುವ ಚೆಕ್ ಪೋಸ್ಟ್ ಗಡಿಯಾಚೆಗಿನ ವ್ಯಾಪಾರದಲ್ಲಿ ನಿರ್ಣಾಯಕ ಪಾತ್ರವಹಿಸಿದೆ. ಪಾಕಿಸ್ತಾನದ ಪಕ್ಕೆಲುಬು ಮುರಿಯಲು ಭಾರತ ಸರಕಾರ ಕೈಗೊಂಡ ಮತ್ತೊಂದು ದಿಟ್ಟ ಕ್ರಮ ಅಟ್ಟಾರಿ-ವಾಘಾ ಗಡಿ ಬಂದ್, ಗುರುವಾರದಿಂದಲೇ ಗಡಿ ಬಂದ್ ಮಾಡಿರುವ ಸರಕಾರದ ಕ್ರಮದಿಂದ ಸಣ್ಣ ವ್ಯಾಪಾರಿಗಳು, ದಿನ ನಿತ್ಯ ವ್ಯವಹಾರ ನಡೆಸುವ ಜನ, ತಯಾರಿಕ ವಲಯದ ಮೇಲೆ ಪರಿಣಾಮ ಬೀರಲಿದೆ. ಗಡಿ ಬಂದ್ ಮಾಡಿರುವ ಕ್ರಮದಿಂದ ಅಫ್ಘಾನಿಸ್ತಾನದ ಸರಕು ಸಾಗಣೆಗೂ ಬಿಸಿ ತಟ್ಟಲಿದೆ. ಇದರಿಂದ ಪಾಕಿಸ್ತಾನಕ್ಕೆ ರವಾನೆಯಾಗುವ ಆಹಾರ ಪದಾರ್ಥ, ಸರಕುಗಳ ಬೆಲೆ ಗಣನೀಯವಾಗಿ ಏರಿಕೆ ಕಾಣಲಿದೆ.

### ಆಹಾರ, ನೀರಿಗೆ ಹಾಹಾಕಾರ

ಭಾರತ-ಪಾಕಿಸ್ತಾನ ನಡುವೆ 1960ರಲ್ಲಿ ಸಿಂಧು ಒಪ್ಪಂದ ರೂಪಿತವಾಗಿತ್ತು. ಸಿಂಧು ಕಣಿವೆಯ ಆರು ನದಿಗಳಾದ ರಾವಿ, ಬಿಯಾಸ್, ಸಟ್ಲೇಜ್ (ಭಾರತದ ಪಾಲು), ಜೀಲಂ, ಚೇನಾಬ್, ಇಂಡಸ್ (ಪಾಕಿಸ್ತಾನ ಪಾಲು) ಒಳಗೊಂಡ ಒಪ್ಪಂದವಾಗಿದೆ. ಮೊದಲ ಪ್ರಧಾನಿ ಜವಾಹರ್ ಲಾಲ್ ನೆಹರು ಹಾಗೂ ಅಂದಿನ ಪಾಕಿಸ್ತಾನ ಅಧ್ಯಕ್ಷ ಅಯೂಬ್ ಖಾನ್ ಜಂಟಿಯಾಗಿ ಒಪ್ಪಂದಕ್ಕೆ ಸಹಿ ಹಾಕಿದ್ದರು. 1965, 1971, 1999ರ ಯುದ್ಧದ ನಡುವೆಯೂ ಒಪ್ಪಂದ ಯಥಾಸ್ಥಿತಿಯಲ್ಲಿ ಮುಂದುವರಿದಿತ್ತು. ಆದರೆ, 65 ವರ್ಷಗಳಲ್ಲಿ ಇದೇ ಮೊದಲ ಬಾರಿಗೆ ಒಪ್ಪಂದವನ್ನು ಅನಿರ್ದಿಷ್ಟಾವಧಿಗೆ ತಡೆ ಹಿಡಿಯಲಾಗಿದೆ. ತಕ್ಷಣದಲ್ಲಿ ಸುಮಾರು 1.60 ಕೋಟಿ ಹೆಕ್ಟೇರ್ ಭೂಮಿಯಲ್ಲಿ ಬೆಳೆದ ಬೆಳೆ ಒಣಗಬಹುದು. ಪರಿಣಾಮ ಅರ್ಧ ಪಾಕಿಸ್ತಾನ ಕಾರ್ಗತ್ತಲಲ್ಲಿ ಕಳೆದು ಹೋಗಬಹುದು.

## ಮಿನಿ ನ್ಯೂಸ್

### ಪಾಕ್ ಬೆಂಬಲಿತ ಉಗ್ರರ ಮೇಲೆ ದಾಳಿ ಅಗತ್ಯ: ವಾಯುಪಡೆ ಮಾಜಿ ಮುಖ್ಯಸ್ಥ



**ಕೋಲ್ಕತಾ:** ಪಹಲ್ಗಾಮ್ ರಕ್ತಪಾತದ ಹಿನ್ನೆಲೆಯಲ್ಲಿ ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದಕರ ವಿರುದ್ಧ ಮಿಲಿಟರಿ ದಾಳಿ ನಡೆಸ ಬೇಕೆಂದು ಪ್ರತಿಪಾದಿಸಿರುವ ವಾಯುಪಡೆಯ ಮಾಜಿ ಮುಖ್ಯಸ್ಥ ಅರೂಪ್ ರಾಹಾ, ಉರಿ ಮತ್ತು ಪುಲ್ವಾಮಾ ದಾಳಿಯ ನಂತರದ ದಾಳಿಗಳನ್ನು ಉಲ್ಲೇಖಿಸಿ 2 ಪರಮಾಣು ಶಕ್ತಿಗಳು ಸಾಂಪ್ರದಾಯಿಕ ಯುದ್ಧದಲ್ಲಿ ತೊಡಗಲು ಸಾಧ್ಯವಿಲ್ಲ ಎಂಬ ಮಿಥ್ಯೆಯನ್ನು ಭಾರತ ಛಿದ್ರಗೊಳಿಸಿದೆ ಎಂದು ಪ್ರತಿಪಾದಿಸಿದ್ದಾರೆ. ಉರಿ ದಾಳಿಯ ನಂತರ ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಯೋತ್ಪಾದಕ ಉಡಾವಣಾ ಪ್ಯಾಡ್‌ಗಳ ಮೇಲೆ ಸೇನೆಯ ಪ್ರತೀಕಾರದ ಸರ್ಜಿಕಲ್ ಸ್ಟ್ರೈಕ್ ಮತ್ತು ಪುಲ್ವಾಮಾ ಬೆಂಗಾವಲು ಬಾಂಬ್ ದಾಳಿಯ ನಂತರ ಬಾಲಕೋಟ್ ವಾಯು ದಾಳಿಯನ್ನು ಉಲ್ಲೇಖಿಸಿದ ನಿವೃತ್ತ ಏರ್ ಚೀಫ್ ಮಾರ್ಷಲ್, ಭಯೋತ್ಪಾದನೆಯ ದುಷ್ಕರ್ಮಿಗಳನ್ನು ಶಿಕ್ಷಿಸುವಲ್ಲಿ ಭಾರತವು ಈ ಹಿಂದೆ ಉತ್ತಮವಾಗಿ ಕಾರ್ಯನಿರ್ವಹಿಸಿದೆ ಎಂದು ಹೇಳಿದರು. ಭಾರತೀಯ ಸಶಸ್ತ್ರ ವ್ಯವಸ್ಥೆಯು ಆ ಪ್ರತಿದಾಳಿಗಳನ್ನು ಪುನರಾವರ್ತಿಸುವುದು ಕಡ್ಡಾಯವಾಗಿದೆ. ಇದರಿಂದ ನಮ್ಮ ಶತ್ರುಗಳು ತಾವು ಯಾರೊಂದಿಗೆ ವ್ಯವಹರಿಸುತ್ತಿದ್ದೇವೆಂದು ತಿಳಿಯುತ್ತಾರೆ. ಇದು ಸಮಯದ ಅಗತ್ಯವಾಗಿದೆ ಎಂದು ರಾಹಾ ಪಿಟಿಐಗೆ ತಿಳಿಸಿದರು.

### 111 ಪಾಕ್ ಪ್ರಜೆಗಳು 2 ದಿನಗಳಲ್ಲಿ ಭಾರತ ತೊರೆಯುವಂತೆ ಸೂಚನೆ

**ಪುಣೆ:** ಮಹಾರಾಷ್ಟ್ರದ ಪುಣೆ ಜಿಲ್ಲೆಯಲ್ಲಿ ವಾಸಿಸುತ್ತಿರುವ 111 ಪಾಕಿಸ್ತಾನಿ ಪ್ರಜೆಗಳಿಗೆ ಏ. 27 ರೊಳಗೆ ಭಾರತವನ್ನು ತೊರೆಯುವಂತೆ ಜಿಲ್ಲಾಡಳಿತ ಸೂಚಿಸಿದೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ ಪಾಕ್ ನಾಗರಿಕರಿಗೆ ನೀಡಲಾದ ಎಲ್ಲಾ ರೀತಿಯ ವೀಸಾಗಳನ್ನು ಅಮಾನತುಗೊಳಿಸಿದ ನಂತರ ಈ ಕ್ರಮ ಕೈಗೊಂಡಿದೆ.

ಆದರೆ ವೈದ್ಯಕೀಯ ವೀಸಾಗಳು ಹೆಚ್ಚುವರಿಯಾಗಿ ಎರಡು ದಿನಗಳವರೆಗೆ ಮಾನ್ಯವಾಗಿರುತ್ತವೆ. ವೀಸಾ ನೀಡುವ ಕೇಂದ್ರಗಳು ಮತ್ತು ಪಾಸ್‌ಪೋರ್ಟ್ ಕಚೇರಿಯಿಂದ ಪಾಕಿಸ್ತಾನಿ ಪ್ರಜೆಗಳ ಡೇಟಾವನ್ನು ಸಂಗ್ರಹಿಸಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಜಿತೇಂದ್ರ ದುಡಿ ಸುದ್ದಿಗಾರರಿಗೆ ತಿಳಿಸಿದರು.

ಇದುವರೆಗೆ 111 ಪಾಕಿಸ್ತಾನಿ ಪ್ರಜೆಗಳ ಬಗ್ಗೆ ನಮಗೆ ಮಾಹಿತಿ ಸಿಕ್ಕಿದೆ. ಅವರೆಲ್ಲರೂ ನಿಗದಿತ ಗಡುವಿನೊಳಗೆ ದೇಶ ತೊರೆಯುವುದು ಕಡ್ಡಾಯ ಎಂದು ತಿಳಿಸಲಾಗಿದೆ. ಪ್ರವಾಸೋದ್ಯಮ, ವೈದ್ಯಕೀಯ ಚಿಕಿತ್ಸೆ ಸೇರಿದಂತೆ ವಿವಿಧ ಕಾರಣಗಳಿಗಾಗಿ ವೀಸಾಗಳನ್ನು ನೀಡಲಾಗಿದ್ದು, ವೈದ್ಯಕೀಯ ಕಾರಣಕ್ಕಾಗಿ ಇಲ್ಲಿರುವವರು ಏಪ್ರಿಲ್ 29 ರೊಳಗೆ ಹೊರಡಲು ವಿನಾಯಿತಿ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಹೇಳಿದರು.

## ಉಸ್ಲಾಮಿಕ್ ಉಗ್ರರ ದಮನಕ್ಕೆ ಭಾರತಕ್ಕೆ ಇಸ್ರೇಲ್ ಬಲ

**ಟೆಲ್ ಅವಿವ್:** ಉಗ್ರ ದಮನಕ್ಕೆ ಅಗತ್ಯ ಬಿದ್ದರೆ ಭಾರತದೊಂದಿಗೆ ನಾವು ನಿಲ್ಲುತ್ತೇವೆ ಎಂದು ಇಸ್ರೇಲ್ ಹೇಳಿದೆ. ಇಸ್ರೇಲ್ ವಿದೇಶಾಂಗ ಸಚಿವಾಲಯದ ವಕ್ತಾರ ಓರೆನ್ ಮಾರ್ಮೊರ್‌ಸ್ಟೈನ್ ಅವರು ಈ ಉಗ್ರರ ದಮನ ವಿಚಾರದಲ್ಲಿ ಭಾರತಕ್ಕೆ ಬೆಂಬಲ ಸೂಚಿಸಿದ್ದಾರೆ. ಪತ್ರಕರ್ತರೊಂದಿಗಿನ ಸಂವಾದದ ವೇಳೆ, ಭಾರತ ಮತ್ತು ಇಸ್ರೇಲ್ ನಡುವಿನ ಸಂಬಂಧದ ಬಗ್ಗೆ ಅವರು ಮಾತಾಡಿದರು. ಈ ವೇಳೆ, ಇಸ್ರೇಲ್ ಭಾರತದ ಸ್ನೇಹಿತ, ಸ್ನೇಹಿತರು ಅಗತ್ಯದ ಸಮಯದಲ್ಲಿ ಪರಸ್ಪರ ಜೊತೆಗೆ ನಿಲ್ಲಲಿವೆ ಎಂದಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಅವರು ಭಾರತವನ್ನು ಬೆಂಬಲಿಸಿ ಈ ಹೇಳಿಕೆ ನೀಡಿದ್ದಾರೆ. ಇಸ್ರೇಲ್ ವಿದೇಶಾಂಗ ಸಚಿವ ಗಿಡಿಯಾನ್ ಸಾರ್ ಅವರು, ಉಗ್ರರ ದಾಳಿಯ ಬಗ್ಗೆ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿದ್ದು, ಪಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಉಗ್ರರ ದಾಳಿಯಿಂದ ತೀವ್ರ ದುಃಖಿತನಾಗಿದ್ದೇನೆ.



ಭಯೋತ್ಪಾದನೆಯ ವಿರುದ್ಧದ ಹೋರಾಟದಲ್ಲಿ ಇಸ್ರೇಲ್ ಭಾರತದೊಂದಿಗೆ ಜೊತೆಗಿರುತ್ತದೆ ಎಂದು ಬರೆದುಕೊಂಡಿದ್ದಾರೆ. ಉಗ್ರರ ಈ ಕೃತ್ಯಕ್ಕೆ ಭಾರತ ಮಾತ್ರವಲ್ಲ ಅಮೆರಿಕ ಇನ್ನಿತರ ರಾಷ್ಟ್ರಗಳಿಂದ ಭಾರೀ ವಿರೋಧ ವ್ಯಕ್ತವಾಗಿದೆ. ಇದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರ, ತಾನು ಮುಂದೆ ಕೈಗೊಳ್ಳಬೇಕಾದ ನಿರ್ಧಾರಗಳ ಕುರಿತಾಗಿ ಚರ್ಚೆ ನಡೆಸಿ ತೀರ್ಮಾನ ಕೈಗೊಳ್ಳಲು ಮುಂದಾಗಿರುವ ಸಂದರ್ಭದಲ್ಲೇ ಇಸ್ರೇಲ್‌ನ ಈ ಬೆಂಬಲ ಭಾರತಕ್ಕೆ ಆನೆ ಬಲ ಬಂದಂತಾಗಿದೆ.

## ಪೋಪ್ ಅಂತ್ಯಕ್ರಿಯೆಗೆ ರಾಷ್ಟ್ರಪತಿ ಮುರ್ಮು, ಕೇಂದ್ರ ಸಚಿವ ರಿಜಿಜು

**ನವದೆಹಲಿ:** ಪೋಪ್ ಫ್ರಾನ್ಸಿಸ್ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ವ್ಯಾಟಿಕನ್ ಸಿಟಿಗೆ ತೆರಳಿದ್ದಾರೆ. ನಿಯೋಗದಲ್ಲಿ ಕೇಂದ್ರ ರಾಜ್ಯ ಸಚಿವ ಜಾರ್ಜ್ ಕುರಿಯನ್ ಮತ್ತು ಗೋವಾದ ಉಪ ಸ್ಪೀಕರ್ ಜೋಶುವಾ ಪೀಟರ್ ಡಿ ಸೋಜಾ ಕೂಡ ಇದ್ದಾರೆ ಎಂದು ರಿಜಿಜು ಹೇಳಿದರು.

ಗೌರವಾನ್ವಿತ ರಾಷ್ಟ್ರಪತಿ ದ್ರೌಪದಿ ಮುರ್ಮು ಜಿ ಅವರೊಂದಿಗೆ ರೋಮ್‌ಗೆ ತೆರಳುತ್ತಿದ್ದೇನೆ. ಪೂಜ್ಯ ಪೋಪ್ ಫ್ರಾನ್ಸಿಸ್ ಅವರ ರಾಜ್ಯ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲು ಮತ್ತು ಸರ್ಕಾರ ಮತ್ತು ಭಾರತದ ಜನರ ಪರವಾಗಿ ಸಂತಾಪ ಸೂಚಿಸಲು. ಗೋವಾದ ರಾಜ್ಯ ಮತ್ತು ಉಪ ಸ್ಪೀಕರ್ ನಿಯೋಗದಲ್ಲಿ ಎಂದು ರಿಜಿಜು ಟ್ವೀಟ್ ಮಾಡಿದ್ದಾರೆ. ತಮ್ಮ ಎರಡು ದಿನಗಳ ಭೇಟಿಯಲ್ಲಿ, ಅವರು ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ಭಾಗವಹಿಸಲಿದ್ದಾರೆ ಮತ್ತು ಸರ್ಕಾರ ಮತ್ತು ಭಾರತದ ಜನರ ಪರವಾಗಿ ಸಂತಾಪ ಸೂಚಿಸಲಿದ್ದಾರೆ. ಪೋಪ್ ಫ್ರಾನ್ಸಿಸ್ ಅವರು ಏಪ್ರಿಲ್ 21ರಂದು ವ್ಯಾಟಿಕನ್‌ನ ಕಾಸಾ ಸಾಂಟಾ ಮಾರ್ಟಾದಲ್ಲಿರುವ ತಮ್ಮ ನಿವಾಸದಲ್ಲಿ ತಮ್ಮ 88 ನೇ ವಯಸ್ಸಿನಲ್ಲಿ ನಿಧನರಾದರು ಎಂದು ವ್ಯಾಟಿಕನ್‌ನ ಹೇಳಿಕೆ ತಿಳಿಸಿದೆ.



ನಾಳೆ ವ್ಯಾಟಿಕನ್ ಸಿಟಿಯ ಸೇಂಟ್ ಪೀಟರ್ಸ್ ವೃತ್ತದಲ್ಲಿ ನಡೆಯಲಿರುವ ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆಯಲ್ಲಿ ಅವರು ಭಾಗವಹಿಸಲಿದ್ದಾರೆ. ಅಲ್ಲಿ ವಿಶ್ವದಾದ್ಯಂತದ ಗಣ್ಯರು ಸಹ ಉಪಸ್ಥಿತರಿರಲಿದ್ದಾರೆ. ಪೋಪ್ ಫ್ರಾನ್ಸಿಸ್ ಅವರನ್ನು ವಿಶ್ವದಾದ್ಯಂತ ಲಕ್ಷಾಂತರ ಜನರು ಸಹಾನುಭೂತಿ, ನಮ್ರತೆ ಮತ್ತು ಆಧ್ಯಾತ್ಮಿಕ ಧೈರ್ಯದ ದೀಪವಾಗಿ ನೆನಪಿಸಿಕೊಳ್ಳುತ್ತಾರೆ ಎಂದು ಎಂಇಎ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

> ಪೋಪ್ ಬೆನೆ ಅವರಿಂದ ಅಧಿಕಾರ ವಹಿಸಿಕೊಂಡ ನಂತರ ರೋಮನ್ ಕ್ಯಾಥೊಲಿಕ್ ಚರ್ಚ್ ಅನ್ನು ಮುನ್ನಡೆಸಿದ ಮೊದಲ ಲ್ಯಾಟಿನ್ ಅಮೇರಿಕನ್ ಪೋಪ್ ಆಗಿದ್ದರು. ಮಾರ್ಚ್ 13, 2013 ರಂದು. ಏಪ್ರಿಲ್ 25 ರಂದುಮುರ್ಮು ಅವರು ವ್ಯಾಟಿಕನ್ ಸಿಟಿಯ ಬೆಸಿಲಿಕಾ ಆಫ್ ಸೇಂಟ್ ಪೀಟರ್ ನಲ್ಲಿ ಪುಷ್ಪಗುಚ್ಛ ಇರಿಸುವ ಮೂಲಕ ಪೋಪ್ ಫ್ರಾನ್ಸಿಸ್ ಅವರಿಗೆ ಗೌರವ ಸಲ್ಲಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ.

## ಭಾರತ-ಪಾಕ್ ಸಂಯಮ ಕಾಪಾಡಿಕೊಳ್ಳಬೇಕು: ವಿಶ್ವಸಂಸ್ಥೆ

**ವಿಶ್ವಸಂಸ್ಥೆ:** ಪಹಲ್ಗಾಮ್ ಘೋರ ದಾಳಿ ನಂತರ ಭಾರತ ಮತ್ತು ಪಾಕಿಸ್ತಾನಗಳು ಸಂಯಮ ಕಾಪಾಡಿಕೊಳ್ಳಬೇಕು ಎಂದು ವಿಶ್ವಸಂಸ್ಥೆ ಪ್ರಧಾನ ಕಾರ್ಯದರ್ಶಿ ಆಂಟೋನಿಯೊ ಗುಟೆರೆಸ್ ಮನವಿ ಮಾಡಿಕೊಂಡಿದ್ದಾರೆ.

ಭಾರತ ಮತ್ತು ಪಾಕಿಸ್ತಾನದ ನಡುವಿನ ಪರಿಸ್ಥಿತಿಯನ್ನು ಬಹಳ ನಿಕಟವಾಗಿ ಮತ್ತು ಬಹಳ ಕಾಳಜಿಯಿಂದ ಗಮನಿಸುತ್ತಿದ್ದಾರೆ ಮತ್ತು ಗರಿಷ್ಠ ಸಂಯಮವನ್ನು ಕಾಪಾಡಿಕೊಳ್ಳಲು ಮತ್ತು ಮತ್ತಷ್ಟು ಹದಗೆಡದಂತೆ ನೋಡಿಕೊಳ್ಳಲು ಎರಡೂ ಸರ್ಕಾರಗಳಿಗೆ ಮನವಿ ಮಾಡಿದ್ದಾರೆ ಎಂದು ಗುಟೆರೆಸ್ ವಕ್ತಾರರು ತಿಳಿಸಿದ್ದಾರೆ. ಎರಡು ದಿನಗಳ ಹಿಂದೆ 22 ರಂದು ಜಮ್ಮು ಮತ್ತು ಕಾಶ್ಮೀರದಲ್ಲಿ ಸಂಭವಿಸಿದ ಭಯೋತ್ಪಾದಕ ದಾಳಿಯನ್ನು ನಾವು ಖಂಡಿಸುವಲ್ಲಿ ನಾವು ತುಂಬಾ ಸ್ಪಷ್ಟವಾಗಿದ್ದೇವೆ ಎಂದು ಪ್ರಧಾನ ಕಾರ್ಯದರ್ಶಿಯ ವಕ್ತಾರ ಸ್ಟೀಫನ್ ಡುಜಾರಿಕ್ ದೈನಂದಿನ ಪತ್ರಿಕಾಗೋಷ್ಠಿಯಲ್ಲಿ ಹೇಳಿದರು. 26 ನಾಗರಿಕರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಯ ಹಿನ್ನೆಲೆಯಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಗುಟೆರೆಸ್ ಭಾರತ ಮತ್ತು ಪಾಕಿಸ್ತಾನ ಸರ್ಕಾರಗಳೊಂದಿಗೆ ಯಾವುದೇ ಸಂಪರ್ಕವನ್ನು ಹೊಂದಿದ್ದಾರೆಯೇ ಎಂಬ ಪ್ರಶ್ನೆಗೆ ಡುಜಾರಿಕ್ ಉತ್ತರಿಸುತ್ತಿದ್ದರು. ಗುಟೆರೆಸ್ ಯಾವುದೇ ನೇರ ಸಂಪರ್ಕವನ್ನು ಹೊಂದಿಲ್ಲ, ಆದರೆ ಅವರು ಪರಿಸ್ಥಿತಿಯನ್ನು ಬಹಳ ನಿಕಟವಾಗಿ ಮತ್ತು ಬಹಳ ಕಾಳಜಿಯಿಂದ ಗಮನಿಸುತ್ತಿದ್ದಾರೆ ಎಂದು ನಾನು ನಿಮಗೆ ಹೇಳಬಲ್ಲೆ ಎಂದು ಅವರು ಹೇಳಿದರು.



### ಭಾರತಕ್ಕೆ ಜಾಗತಿಕ ಬೆಂಬಲ ಹೆಚ್ಚಳ

ಪ್ರಧಾನ ಕಾರ್ಯದರ್ಶಿ ಅವರು ಭಾರತ ಮತ್ತು ಪಾಕಿಸ್ತಾನದ ಎರಡೂ ಸರ್ಕಾರಗಳಿಗೆ ಸಂಯಮ ಕಳೆದುಕೊಳ್ಳದೆ ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಲು ಯತ್ನಿಸಬೇಕು ಎಂದು ಅವರು ಹೇಳಿದ್ದಾರೆ.

## ಸಿಕ್ಕಿಂನಲ್ಲಿ ಭಾರೀ ಮಳೆ, ಭೂಕುಸಿತ

**ಗ್ಯಾಂಗ್ ಟೋಕ್:** ಹಿಮಾಲಯನ್ ರಾಜ್ಯದಲ್ಲಿ ಭಾರೀ ಮಳೆಯಾಗುತ್ತಿರುವ ಕಾರಣ ಸಂಭವಿಸಿದ ಭೂಕುಸಿತದಿಂದಾಗಿ ಉತ್ತರ ಸಿಕ್ಕಿಂನಲ್ಲಿ ಸುಮಾರು 1,000 ಪ್ರವಾಸಿಗರು ಸಿಲುಕಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಚುಂಗ್‌ಥಾಂಗ್‌ನಲ್ಲಿ ಸುಮಾರು 200 ಪ್ರವಾಸಿ ವಾಹನಗಳು ಸಿಲುಕಿಕೊಂಡಿದ್ದು, ನಿವಾಸಿಗಳು ಅಲ್ಲಿನ ಗುರುದ್ವಾರದಲ್ಲಿ ತಂಗಿದ್ದಾರೆ ಎಂದು ಅವರು ತಿಳಿಸಿದ್ದಾರೆ.


ಚುಂಗ್‌ಥಾಂಗ್ ರಾಜ್ಯ ರಾಜಧಾನಿ ಗ್ಯಾಂಗ್‌ಟಾಕ್‌ನಿಂದ ಸುಮಾರು 100 ಕಿ.ಮೀ ದೂರದಲ್ಲಿದೆ. ಲಾಚೆನ್-ಚುಂಗ್‌ಥಾಂಗ್ ರಸ್ತೆಯ ಮುನ್ಶಿಥಾಂಗ್‌ನಲ್ಲಿ ಮತ್ತು ಲಾಚುಂಗ್-ಚುಂಗ್‌ಥಾಂಗ್ ರಸ್ತೆಯ ಲೆಮಾ/ಬಾಬ್‌ನಲ್ಲಿ ಭಾರಿ ಭೂಕುಸಿತಗಳು ಸಂಭವಿಸಿವೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಪ್ರದೇಶದಲ್ಲಿ ನಿರಂತರ ಮಳೆಯಿಂದಾಗಿ ಪರಿಸ್ಥಿತಿ ಹದಗೆಟ್ಟಿದೆ. ಮುಂದಿನ ಸೂಚನೆ ಬರುವವರೆಗೆ ಉತ್ತರ ಸಿಕ್ಕಿಂಗೆ ಪ್ರವಾಸಿಗರನ್ನು ಕಳುಹಿಸದಂತೆ ಜಿಲ್ಲಾಡಳಿತವು ಎಲ್ಲಾ ಪ್ರವಾಸಿ ನಿರ್ವಾಹಕರಿಗೆ ಸೂಚನೆ ನೀಡಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಅಕ್ಕಿ ಗಿರಣಿಯೊಂದರಲ್ಲಿ ಡ್ರೈಯರ್ ಹೊಗೆ ಸೇವಿಸಿ ಐವರ ದುರ್ಮರಣ

**ಬಹೇಚ್:** ಇಲ್ಲಿನ ಅಕ್ಕಿ ಗಿರಣಿಯೊಂದರಲ್ಲಿ ಡ್ರೈಯರ್‌ನಿಂದ ಹೊರಸೂಸುವ ಹೊಗೆಯನ್ನು ಉಸಿರಾಡಿ ಐವರು ಕಾರ್ಮಿಕರು ಮೃತಪಟ್ಟಿರುವ ಘಟನ ನಡೆದಿದೆ. ಹೊಗೆಯನ್ನು ಉಸಿರಾಡಿದ ನಂತರ ಮೂರ್ಛೆ ಹೋದ ಇತರ ಮೂವರು ಕಾರ್ಮಿಕರನ್ನು ಜಿಲ್ಲಾ ಆಸ್ಪತ್ರೆಗೆ ಸಾಗಿಸಲಾಗಿದೆ ಎಂದು ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ರಮಾನಂದ ಪ್ರಸಾದ್ ಕುಶ್ವಾಹ ಪಿಟಿಐಗೆ ತಿಳಿಸಿದ್ದಾರೆ.

ರಾಜ್‌ಗರ್ಹಿಯಾ ರೈಸ್ ಮಿಲ್‌ನಲ್ಲಿ ಈ ಘಟನೆ ನಡೆದಿದ್ದು, ಪ್ರಾಥಮಿಕ ತನಿಖೆಯ ಪ್ರಕಾರ ಹಲವಾರು ಕಾರ್ಮಿಕರು ಬೆಳಿಗ್ಗೆ ಗಿರಣಿಗೆ ಬಂದು ಡ್ರೈಯರ್‌ನಿಂದ ಹೊರಹೊಮ್ಮುವ ಹೊಗೆಯನ್ನು ಪರಿಶೀಲಿಸಲು ಹೋದರು ಎಂದು ಅಧಿಕಾರಿ ತಿಳಿಸಿದ್ದಾರೆ. ಹೊಗೆಯು ತುಂಬಾ ಹೆಚ್ಚಾಗಿತ್ತು, ಅಲ್ಲಿದ್ದ ಎಲ್ಲಾ ಕಾರ್ಮಿಕರು ಘಟನಾ ಸ್ಥಳದಲ್ಲಿ ಮೂರ್ಛೆ ಹೋದರು.

ಮಾಹಿತಿ ಪಡೆದ ನಂತರ, ಅಗ್ನಿಶಾಮಕ ಸೇವಾ ತಂಡವು ಸ್ಥಳಕ್ಕೆ ತಲುಪಿ ಪೀಡಿತ ವ್ಯಕ್ತಿಗಳನ್ನು ಸ್ಥಳಾಂತರಿಸಿತು. ಅವರನ್ನು ಜಿಲ್ಲಾ ಆಸ್ಪತ್ರೆಗೆ ಸಾಗಿಸಲಾಯಿತು. ಆಗಮಿಸಿದಾಗ ಐವರು ಕಾರ್ಮಿಕರು ಮೃತಪಟ್ಟಿದ್ದಾರೆ ಎಂದು ಘೋಷಿಸಲಾಯಿತು.



ಗಾಯಗೊಂಡ ಉಳಿದ ಮೂವರು ಕಾರ್ಮಿಕರು ಪ್ರಸ್ತುತ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ಅವರು ಹೇಳಿದರು. ಘಟನೆಗೆ ಕಾರಣವಾದ ಸಂದರ್ಭಗಳ ಬಗ್ಗೆ ಪೊಲೀಸರು ಹೆಚ್ಚಿನ ತನಿಖೆಯನ್ನು ಪ್ರಾರಂಭಿಸಿದ್ದಾರೆ.

## ಬಿಎಸ್‌ಎಫ್ ಯೋಧನನ್ನು ಪ್ರಚಾರಕ್ಕೆ ಬಳಸಲು ಮುಂದಾದ ಪಾಕ್

**ಶ್ರೀನಗರ:** ಆಕಸ್ಮಿಕವಾಗಿ ಅಂತರರಾಷ್ಟ್ರೀಯ ಗಡಿಯನ್ನು ದಾಟಿ ಬಂಧನಕ್ಕೆ ಒಳಗಾಗಿರುವ ಗಡಿ ಭದ್ರತಾ ಪಡೆ ಯೋಧನನ್ನು ಹಸ್ತಾಂತರ ಮಾಡಲು ಪಾಕಿಸ್ತಾನ ನಿರಾಕರಿಸಿದೆ.

ಗುರುವಾರ ಸಂಜೆ ಧ್ವಜ ಸಭೆಗೆ ರೇಂಜರ್‌ಗಳು ಬರಲಿಲ್ಲ. ಮಾಧ್ಯಮಗಳಲ್ಲಿ ತಮ್ಮ ಪ್ರಚಾರಕ್ಕಾಗಿ ಪಾಕಿಸ್ತಾನ ಭಾರತೀಯ ಯೋಧನನ್ನು ಬಳಸಲು ಮುಂದಾಗಿದೆ. ಪಂಜಾಬ್‌ನ ಫಿರೋಜ್‌ಪುರ ಬಳಿ ಆಕಸ್ಮಿಕವಾಗಿ ಅಂತರರಾಷ್ಟ್ರೀಯ ಗಡಿಯನ್ನು ದಾಟಿದ್ದ 182 ನೇ ಬೆಟಾಲಿಯನ್ ಕಾನ್‌ಸ್ಟೇಬಲ್ ಪಿಕೆ ಸಾಹು ಅವರನ್ನು ಪಾಕಿಸ್ತಾನ ರೇಂಜರ್‌ಗಳು ಬಂಧಿಸಿದ್ದರು. ಬಂದನಕ್ಕೆ ಒಳಗಾದ ಸಾಹು ಅವರನ್ನು ಬಿಡುಗಡೆ ಮಾಡಲು ಬಿಎಸ್‌ಎಫ್ ಪ್ರಯತ್ನ ನಡೆಸುತ್ತಿದೆ. ಸಾಹು ಅವರನ್ನು ಗಡಿ ಹೊರಠಾಣೆಯಿಂದ ದೂರದಲ್ಲಿರುವ ಪಾಕಿಸ್ತಾನಿ ಪ್ರದೇಶಕ್ಕೆ ಕರೆದುಕೊಂಡು ಹೋಗಲಾಗಿದೆ. ಪಶ್ಚಿಮ ಬಂಗಾಳದ ನಿವಾಸಿ ಸಾಹು ಸಮವಸ್ತ್ರದಲ್ಲಿದ್ದರು ಮತ್ತು ಅವರ ಸೇವಾ ರೈಫಲ್ ಅನ್ನು ಹೊಂದಿದ್ದರು.

## ಪ್ರತಿಕಾರಕ್ಕೆ ದೇಶದ ಬೆಂಬಲವಿದೆ : ಅಜಿತ್ ಪವಾರ್

**ಪುಣೆ:** ಹಲವಾರು ಜನರ ಸಾವಿಗೆ ಕಾರಣವಾದ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಲು ದೇಶಾದ್ಯಂತ ಬಲವಾದ ಭಾವನೆ ಇದೆ ಎಂದು ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಹೇಳಿದ್ದಾರೆ.

ಜಮ್ಮು ಮತ್ತು ಕಾಶ್ಮೀರದಲ್ಲಿ ನಡೆದ ದಾಳಿಯಲ್ಲಿ ಮಹಾರಾಷ್ಟ್ರದ ಆರು ಪ್ರವಾಸಿಗರು ಸಾವನ್ನಪ್ಪಿದ ಘಟನೆಗೆ ಕಾರಣರಾದ ವ್ಯಕ್ತಿಗಳ ವಿರುದ್ಧ ಭಾರತೀಯ ಸೇನೆ ನಿರ್ಣಾಯಕ ಕ್ರಮ ಕೈಗೊಳ್ಳಲಿದೆ ಎಂದು ಪವಾರ್ ಹೇಳಿದರು. ಸಾರ್ವಜನಿಕ ಆರೋಗ್ಯ ಇಲಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದ ಡಿಸಿಎಂ, ಮಹಾರಾಷ್ಟ್ರದ ಆರು ಜನರು ಸೇರಿದಂತೆ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರಿಗೆ ನಾವು ಗೌರವ ಸಲ್ಲಿಸಿದ್ದೇವೆ.



ಈ ದಾಳಿಗೆ ಪ್ರತೀಕಾರ ತೀರಿಸಿಕೊಳ್ಳಬೇಕು ಎಂಬ ಭಾವನೆ ದೇಶಾದ್ಯಂತ ಇದೆ. ಪ್ರಧಾನಿ ಮೋದಿ ಅವರು ಸಿಂಧೂ ಜಲ ಒಪ್ಪಂದವನ್ನು ಅಮಾನತುಗೊಳಿಸುವಂತಹ ಕೆಲವು ಪ್ರಮುಖ ನಿರ್ಧಾರಗಳನ್ನು ತೆಗೆದುಕೊಂಡಿದ್ದಾರೆ ಮತ್ತು ಅವರೊಂದಿಗೆ (ಪಾಕಿಸ್ತಾನ) ಎಲ್ಲಾ ಸಂಬಂಧಗಳನ್ನು ಕಡಿದುಕೊಂಡಿದ್ದಾರೆ ಎಂದು ಅವರು ಹೇಳಿದರು.

ಹೇಡಿತನದ ದಾಳಿಯಲ್ಲಿ ಮುಗ್ಧ ಪ್ರವಾಸಿಗರು ಸಾವನ್ನಪ್ಪಿದ್ದಾರೆ. ಎಲ್ಲರೂ ಈ ಕೃತ್ಯವನ್ನು ಖಂಡಿಸಿದ್ದಾರೆ ಮತ್ತು ಇದು ಪುನರಾವರ್ತನೆಯಾಗಬಾರದು ಎಂದು ಅವರು ಹೇಳಿದರು.


## ಕೃಷಿ, ಸ್ಮಾರ್ಟ್ ಸಿಟಿ ಕ್ಷೇತ್ರಗಳಿಗೆ ಡಿಜಿಟಲ್ ಟಚ್

**ವಿಶ್ವಸಂಸ್ಥೆ:** ಭಾರತವು ತನ್ನ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯ ಪರಿಸರ ವ್ಯವಸ್ಥೆಯನ್ನು ಕೃಷಿ ಮತ್ತು ಸ್ಮಾರ್ಟ್ ಸಿಟಿಗಳಂತಹ ಕ್ಷೇತ್ರಗಳಿಗೆ ವಿಸ್ತರಿಸುತ್ತಿದೆ ಮತ್ತು ಅಂತರರಾಷ್ಟ್ರೀಯ ಸಮುದಾಯದೊಂದಿಗೆ ಯಶಸ್ಸನ್ನು ಹಂಚಿಕೊಳ್ಳಲು ಸಿದ್ಧವಾಗಿದೆ ಎಂದು ಹೇಳಿದೆ.

ವಾಣಿಜ್ಯ ಮತ್ತು ಕೈಗಾರಿಕಾ ಸಚಿವಾಲಯ ಮತ್ತು ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವಾಲಯದ ರಾಜ್ಯ ಸಚಿವ ಜಿತಿನ್ ಪ್ರಸಾದ ಅವರು, ಭಾರತೀಯ ಡಿಪಿಐ ಯಶೋಗಾಥೆ ಜಗತ್ತಿಗೆ ಪ್ರದರ್ಶನವಾಗಿದೆ ಎಂದು ಹೇಳಿದರು.

ಭಾರತವು ತನ್ನ ಡಿಪಿಐ ಪರಿಸರ ವ್ಯವಸ್ಥೆಯನ್ನು ಕೃಷಿ, ಲಾಜಿಸ್ಟಿಕ್ಸ್, ಸ್ಮಾರ್ಟ್ ಸಿಟಿಗಳು ಮತ್ತು ಹೆಚ್ಚಿನವುಗಳಿಗೆ ವಿಸ್ತರಿಸುತ್ತಿದೆ ಎಂದು ಪ್ರಸಾದ ಹೇಳಿದರು.ಮುಂದಿನ ಅಲೆಯು ಗೌಪ್ಯತೆ ಮತ್ತು ಡೇಟಾ ರಕ್ಷಣೆ, ಡಿಜಿಟಲ್ ಕೌಶಲ್ಯ ಮತ್ತು ಸಾಕ್ಷರತೆ, ಗಡಿಯಾಚೆಗಿನ ಡಿಪಿಐ ಪಾಲುದಾರಿಕೆ, ಸುಸ್ಥಿರತೆ ಮತ್ತು ಸ್ಥಿತಿಸ್ಥಾಪಕತ್ವಕ್ಕೆ ಆದ್ಯತೆ ನೀಡುತ್ತದೆ. ಕೃತಕ ಬುದ್ಧಿಮತ್ತೆಯು ಡಿಪಿಐಗೆ ಬಲವನ್ನು ದ್ವಿಗುಣಗೊಳಿಸಲಿದೆ. ಪಿರಮಿಡ್‌ನ ಕೆಳಭಾಗದಲ್ಲಿರುವ ಕಟ್ಟಕಡೆಯ ವ್ಯಕ್ತಿಗೆ ಸೇವೆ ಸಲ್ಲಿಸುವ ನಮ್ಮ ತತ್ವವನ್ನು ಗಮನದಲ್ಲಿಟ್ಟುಕೊಂಡು ಭಾರತವು ಎಐ ಅನ್ನು ನಿಯೋಜಿಸುತ್ತಿದೆ ಎಂದು ಅವರು ಹೇಳಿದರು.

ತಂತ್ರಜ್ಞಾನವನ್ನು ಪ್ರಜಾಪ್ರಭುತ್ವಗೊಳಿಸಬೇಕು, ಅಂತರ್ಗತಗೊಳಿಸಬೇಕು, ಕೈಗೆಟುಕುವಂತೆ ಮಾಡಬೇಕು ಮತ್ತು ಮಾನವ ಘನತೆಯನ್ನು ಹೆಚ್ಚಿಸಬೇಕು ಎಂದು ಭಾರತ ನಂಬುತ್ತದೆ ಎಂದು ಪ್ರಸಾದ ಹೇಳಿದರು.




> ಡಿಪಿಐ ಎಂದರೆ ನಾಗರಿಕರ ಸಬಲೀಕರಣ, ಉತ್ತಮ ಆಡಳಿತ, ಸಾಮಾಜಿಕ ಮಟ್ಟದಲ್ಲಿ ಅಂತರ್ಗತ ಮತ್ತು ಸುಸ್ಥಿರ ಬೆಳವಣಿಗೆ. ಭವಿಷ್ಯವನ್ನು ಕೇವಲ ಯಂತ್ರಗಳಿಂದ ನಿರ್ಮಿಸಲಾಗುವುದಿಲ್ಲ, ಆದರೆ ತಂತ್ರಜ್ಞಾನವು ಮಾನವೀಯತೆಗೆ ಹೇಗೆ ಸೇವೆ ಸಲ್ಲಿಸುತ್ತದೆ ಎಂಬುದರ ಬಗ್ಗೆ ನಾವು ಮಾಡುವ ಆಯ್ಕೆಗಳಿಂದ ನಿರ್ಮಿಸಲಾಗುತ್ತದೆ ಎಂದು ಪ್ರಸಾದ್ ವಿಶ್ವ ಸಂಸ್ಥೆಯ ಪ್ರಧಾನ ಕಚೇರಿಯಲ್ಲಿ ಆಯೋಜಿಸಿದ್ದ ಕಾರ್ಯ ಕ್ರಮದಲ್ಲಿ ಮುಖ್ಯ ಭಾಷಣದಲ್ಲಿ ಹೇಳಿದರು.

## ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಜಾಗತಿಕ ಮಟ್ಟದಲ್ಲಿ ಪಾಕಿಸ್ತಾನಕ್ಕೆ ಮುಜುಗರ
# ಪಾಕ್ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಲು ನಿರಾಕರಿಸಿದ ಯುಎಸ್

**ವಾಷಿಂಗ್ಟನ್ ಡಿಸಿ:** ಅಮೆರಿಕದ ವಿದೇಶಾಂಗ ಇಲಾಖೆಯ ವಕ್ತಾರರಾದ ಟ್ಯಾಮಿ ಬ್ರೂಸ್ ಅವರು, ಪಹಲ್ಗಾಮ್ ದಾಳಿಯ ನಂತರ ಭಾರತ-ಪಾಕಿಸ್ತಾನ ಗಡಿ ಉದ್ವಿಗ್ನತೆಯ ಬಗ್ಗೆ ಪಾಕಿಸ್ತಾನದ ಪತ್ರಕರ್ತರೊಬ್ಬರು ಕೇಳಿದ ಪ್ರಶ್ನೆಗೆ ಉತ್ತರ ನೀಡಲು ನಿರಾಕರಿಸಿದ್ದಾರೆ.

ಶ್ವೇತಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯ ವೇಳೆ, ಪಾಕಿಸ್ತಾನದ ಪತ್ರಕರ್ತರೊಬ್ಬರು ಟ್ಯಾಮಿ ಬ್ರೂಸ್ ಅವರಿಗೆ, ಭಾರತ-ಪಾಕಿಸ್ತಾನ ನಡುವಿನ ಗಡಿ ಉದ್ವಿಗ್ನತೆ ಬಗ್ಗೆ ಅಮೆರಿಕದ ನಿಲುವೇನು ಎಂದು ಪ್ರಶ್ನೆ ಮಾಡಿದರು. ಇದಕ್ಕೆ ಉತ್ತರ ನೀಡಲು ನಿರಾಕರಿಸಿದ ಯುಎಸ್ ಸ್ಟೇಟ್ ಡಿಪಾರ್ಟ್‌ಮೆಂಟ್ ವಕ್ತಾರೆ, ನಾನು ಇದರ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡು ವುದಿಲ್ಲ ಎಂದು ಸೂಚ್ಯವಾಗಿ ಪ್ರತಿಕ್ರಿಯೆ ನೀಡಿದರು.

ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರು, ಅಮೆರಿಕವು ಭಾರತದೊಂದಿಗೆ ಗಟ್ಟಿಯಾಗಿ ನಿಂತಿದೆ ಎಂದು ಹೇಳಿದ್ದಾರೆ. ಅಮೆರಿಕವು ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಬಲವಾಗಿ ಖಂಡಿಸುತ್ತದೆ ಎಂಬುದನ್ನು ನಮ್ಮ ನಾಯಕರು ಸ್ಪಷ್ಟಪಡಿಸಿದ್ದಾರೆ ಹೀಗಾಗಿ ನಿಮ್ಮ ಪ್ರಶ್ನೆಗೆ ನಾನು ಉತ್ತರಿಸುವುದು ಸಮಂಜಸವಲ್ಲ ಎಂದು ಟ್ಯಾಮಿ ಬ್ರೂಸ್ ಅವರು, ಪಾಕ್ ಪತ್ರಕರ್ತರನ್ನು ಉದ್ದೇಶಿಸಿ ಹೇಳಿದರು.




### ಇದಕ್ಕಿಂತಾ ಬೇಕಾ ಛೀಮಾರಿ?

ಇನ್ನು ಪತ್ರಿಕಾಗೋಷ್ಠಿಯಲ್ಲಿ ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನ ಪರಿಸ್ಥಿತಿಯನ್ನು ತಿಳಿಗೊಳಿಸಲು, ಅಮೆರಿಕ ಮಧ್ಯಸ್ಥಿಕೆವಹಿಸುವುದೇ ಎಂಬ ಪ್ರಶ್ನೆಗೆ ನೇರವಾಗಿ ಉತ್ತರ ನೀಡದ ಟ್ಯಾಮಿ ಬ್ರೂಸ್, ಈ ಕುರಿತು ನಮ್ಮ ಉನ್ನತ ನಾಯಕರು ನಿರ್ಧಾರ ಕೈಗೊಳ್ಳಲಿದ್ದಾರೆ. ಸದ್ಯಕ್ಕೆ ಭಾರತವು ಈ ಸಂಕಷ್ಟದ ಪರಿಸ್ಥಿತಿಯನ್ನು ಉತ್ತಮವಾಗಿ ನಿಭಾಯಿಸುತ್ತಿದೆ ಎಂದು ಹೇಳಿದರು.

ಮಧ್ಯಸ್ಥಿಕೆ ಅಧ್ಯಕತೆ ಇಲ್ಲ ಎಂದು ಪರೋಕ್ಷವಾಗಿ ಹೇಳಿರುವ ಟ್ಯಾಮಿ ಬ್ರೂಸ್, ಭಾರತ-ಪಾಕಿಸ್ತಾನಕ್ಕೆ ಉದ್ವಿಗ್ನತೆಗೆ ಸಂಬಂಧಿಸಿದಂತೆ ಭಾರತದ ಕಡೆ ಅಮೆರಿಕದ ಹೆಚ್ಚಿನ ವಾಲುವಿಕೆಯ ಸ್ಪಷ್ಟ ಸಂದೇಶ ನೀಡಿದ್ದಾರೆ.

- ಪಹಲ್ಗಾಮ್ ಭಯೋತ್ಪಾದಕ ದಾಳಿಯಿಂದ ಜಾಗತಿಕ ಮಟ್ಟದಲ್ಲಿ ಪಾಕಿಸ್ತಾನಕ್ಕೆ ಮುಜುಗರ
- ಶ್ವೇತಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಪಾಕಿಸ್ತಾನದ ಪತ್ರಕರ್ತನ ಪ್ರಶ್ನೆಗೆ ಉತ್ತರ ನೀಡಲು ನಿರಾಕರಣೆ
- ಪಾಕ್ ಪತ್ರಕರ್ತನ ಪ್ರಶ್ನೆಗೆ ಉತ್ತರ ನೀಡಲು ನಿರಾಕರಿಸಿದ ಅಮೆರಿಕದ ವಿದೇಶಾಂಗ ಇಲಾಖೆಯ ವಕ್ತಾರರಾದ ಟ್ಯಾಮಿ

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತವು ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯ ನಂತರ, ಭಾರತಕ್ಕೆ ತನ್ನ ಬೆಂಬಲವನ್ನು ಮುಂದುವರೆಸಿದೆ. ಈಗಾಗಲೇ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರೊಂದಿಗೆ ದೂರವಾಣಿ ಕರೆಯಲ್ಲಿ ಮಾತನಾಡಿರುವ ಡೊನಾಲ್ಡ್ ಟ್ರಂಪ್, ಭಯೋತ್ಪಾದನೆ ವಿರೋಧಿ ಹೋರಾಟದಲ್ಲಿ ಭಾರತಕ್ಕೆ ಸಂಪೂರ್ಣ ಬೆಂಬಲ ನೀಡುವುದಾಗಿ ಭರವಸೆ ನೀಡಿದ್ದಾರೆ.

ಒಟ್ಟಿನಲ್ಲಿ ಅಮೆರಿಕದ ಶ್ವೇತಭವನದಲ್ಲಿ ನಡೆದ ಪತ್ರಿಕಗೋಷ್ಠಿಯಲ್ಲಿ ಅಮೆರಿಕದ ಅಮೆರಿಕದ ವಿದೇಶಾಂಗ ಇಲಾಖೆಯ ವಕ್ತಾರರಾದ ಟ್ಯಾಮಿ ಬ್ರೂಸ್ ಅವರು, ಪಾಕಿಸ್ತಾನದ ಪತ್ರಕರ್ತರ ಪ್ರಶ್ನೆಗೆ ಉತ್ತರ ನೀಡಲು ನಿರಾಕರಿಸಿರುವುದು ಜಾಗತಿಕವಾಗಿ ಗಮನ ಸೆಳೆದಿದೆ.

### ಭಾರತಕ್ಕೆ ಜಾಗತಿಕ ಬೆಂಬಲ ಹೆಚ್ಚಳ

ಅಮೆರಿಕದ ಬೆಂಬಲವನ್ನು ಪುಷ್ಠೀಕರಿಸಿರುವ ಭಾರತದ ವಿದೇಶಾಂಗ ಇಲಾಖೆ, ಪಹಲ್ಗಾಮ್ ದಾಳಿಯ ಬಳಿಕ ಭಾರತಕ್ಕೆ ದೊರೆಯುತ್ತಿರುವ ಜಾಗತಿಕ ಬೆಂಬಲ ಹೆಚ್ಚಾಗಿದೆ. ಸಂಕಷ್ಟದ ಸಮಯದಲ್ಲಿ ನಮ್ಮೊಂದಿಗೆ ಬೆಂಬಲಕ್ಕೆ ನಿಂತಿರುವ ಎಲ್ಲರಿಗೂ ನಾವು ಧನ್ಯವಾದ ಅರ್ಪಿಸುತ್ತೇವೆ ಎಂದು ಹೇಳಿದೆ. ಇಸ್ರೇಲ್ ಕೂಡ ಈ ವಿಚಾರವಾಗಿ ಭಾರತಕ್ಕೆ ತನ್ನ ಬೆಂಬಲವನ್ನು ವ್ಯಕ್ತಪಡಿಸಿದೆ. ಪಾಕಿಸ್ತಾನದ ವಿರುದ್ಧದ ಭಾರತದ ಪ್ರತೀಕಾರದ ಕ್ರಮಗಳತ್ತ ಅಮೆರಿಕದ ಗಮನವಿದ್ದು, ಭಾರತ ಈ ನಿಟ್ಟಿನಲ್ಲಿ ಕೈಗೊಳ್ಳುತ್ತಿರುವ ಕ್ರಮಗಳು ಮತ್ತು ಇದರಿಂದ ಪಾಕಿಸ್ತಾನದ ಮೇಲೆ ಬೀರುತ್ತಿರುವ ಪರಿಣಾಮಗಳನ್ನು ಅವಲೋಕಿಸುತ್ತಿದೆ ಎಂದು ಮೂಲಗಳು ತಿಳಿಸಿವೆ.

